ಸಂಪುಟ: 21, ಸಂಚಿಕೆ: 255, ಪುಟಗಳು: 8, ಭಾನುವಾರ, 23 ಜೂನ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3


ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines


### ಸುಭಾಷಿತ

ಉಪಕಾರವನ್ನು ಮರೆಯುವುದು ಲೇಸಲ್ಲ. ಅಪಕಾರವನ್ನು ಅಂದೇ ಮರೆಯುವುದು ಅಂದೇ ಲೇಸು.

। ತಿರುವಳ್ಳುವರ್

### ಪಂಚಾಂಗ

(ಭಾನುವಾರ 23, ಜೂನ್-2024)

- ಸಂವತ್ಸರ: ಕ್ರೋಧಿ
- ಋತು: ವಸಂತ
- ಅಯನ: ಉತ್ತರಾಯಣ
- ಮಾಸ: ಜೇಷ್ಠ
- ಪಕ್ಷ: ಕೃಷ್ಣ
- ತಿಥಿ: ಬಿದಿಗೆ
- ನಕ್ಷತ್ರ: ಪೂರ್ವಾಷಾಢ
- ರಾಹುಕಾಲ: 05:11 ರಿಂದ 06:48
- ಗುಳಿಕಕಾಲ: 03:35 ರಿಂದ 05:11
- ಯಮಗಂಡಕಾಲ: 12:21 ರಿಂದ 01:58

## ಸಂಕ್ಷಿಪ್ತ ಸುದ್ದಿ

### ಸೂರಜ್ ರೇವಣ್ಣ ಬಂಧನ ಕೇಸ್; ಇವೆಲ್ಲ ವಿಚಿತ್ರ

# ವಿಕೃತ

**ಕಲಬುರಗಿ:** ಸೂರಜ್ ರೇವಣ್ಣ ಪ್ರಕರಣ ವಿಚಿತ್ರ, ವಿಕೃತ, ಅಸಹ್ಯಪಡುವ ಪ್ರಕರಣಗಳು ಎಂದು ಸಚಿವ ಪ್ರಿಯಾಂಕ್ ಖರ್ಗೆ ತೀವ್ರ ಬೇಸರ ಹೊರಹಾಕಿದ್ದಾರೆ. ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಪರಿಷತ್ ಸದಸ್ಯ ಸೂರಜ್ ರೇವಣ್ಣ ಬಂಧನ ವಿಚಾರಕ್ಕೆ ಕುರಿತು ಕಲಬುರಗಿಯಲ್ಲಿ ಅವರು ಮಾಧ್ಯಮಗಳೊಂದಿಗೆ ಮಾತನಾಡಿದ್ದಾರೆ. ಈ ಪ್ರಕರಣದ ಬಗ್ಗೆ ಏನು ಮಾತನಾಡಬೇಕು ಅಂತ ಗೊತ್ತಾಗ್ತಿಲ್ಲ. ಇವೆಲ್ಲಾ ವಿಚಿತ್ರ, ವಿಕೃತ, ಅಸಹ್ಯ ಪಡುವ ಪ್ರಕರಣಗಳು. ಪ್ರಜ್ವಲ್, ಸೂರಜ್, ಯಡಿಯೂರಪ್ಪ ಪ್ರಕರಣಗಳಲ್ಲಿ ಯಾವುದೇ ಆಗಿರಬಹುದು. ಯಾರು ಮಾಡಿದ್ದಾರೆ,

ಪುಟ 2



### ಪರಪ್ಪನ ಅಗ್ರಹಾರದಲ್ಲಿ ಮೊದಲ ದಿನ ಕಳೆದ

# ದರ್ಶನ್

**ಬೆಂಗಳೂರು:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ಬಂಧನವಾಗಿರುವ ನಟ ದರ್ಶನ್‌ಗೆ ಜುಲೈ 4ರ ವರೆಗೆ ಕೋರ್ಟ್ ನ್ಯಾಯಾಂಗ ಬಂಧನ ವಿಧಿಸಿದೆ. ದರ್ಶನ್ ಸೇರಿ ಪ್ರಕರಣದಲ್ಲಿ ಭಾಗಿಯಾಗಿದ್ದ ಇತರ ನಾಲ್ವರು ಆರೋಪಿಗಳನ್ನೂ



ಪೊಲೀಸರು ಬಿಗಿಭದ್ರತೆಯಲ್ಲಿ ಸೆಂಟ್ರಲ್ ಜೈಲಿಗೆ ರವಾನಿಸಿದ್ದಾರೆ. ಇನ್ನೂ ಜೈಲಿನಲ್ಲಿ 6109 ಕೈದಿ ಸಂಖ್ಯೆ ಪಡೆದಿರುವ ದರ್ಶನ್ ಪರಪ್ಪನ ಅಗ್ರಹಾರದಲ್ಲಿ ಮೊದಲ ದಿನ ಕಳೆದಿದ್ದಾರೆ. 13 ವರ್ಷಗಳ ನಂತರ ಮತ್ತೆ ಜೈಲು ಪಾಲಾಗಿರುವ ನಟ ದರ್ಶನ್ ಸೆಂಟ್ರಲ್ ಜೈಲ್‌ನಲ್ಲಿ ಮುದ್ದೆ ಮುರಿದಿದ್ದಾರೆ.

ಪುಟ 2



# ರಾಜ್ಯದಲ್ಲಿ ಮಳೆ ಅಬ್ಬರ

**ಬೆಂಗಳೂರು:** ಇಂದಿನಿಂದ ಕರ್ನಾಟಕದ ಕರಾವಳಿ ಜಿಲ್ಲೆಗಳಾದ ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಒಳನಾಡಿನ ಕೊಡಗಿನಲ್ಲಿ ವರುಣನ ಆರ್ಭಟ ಹೆಚ್ಚಾಗಲಿದೆ ಎಂದು ಹವಾಮಾನ ಇಲಾಖೆ ಹೇಳಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ.

ಪುಟ 2

### ನೀಟ್, ನೆಟ್ ಪರೀಕ್ಷೆಯಲ್ಲಿ ಅಕ್ರಮ

# ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ ಮುಖ್ಯಸ್ಥ ವಜಾ

**ನವದೆಹಲಿ:** ಪ್ರಶ್ನೆಪತ್ರಿಕೆ ಸೋರಿಕೆ ಹಿನ್ನೆಲೆ ಯುಜಿಸಿ-ನೆಟ್ ಪರೀಕ್ಷೆ ಮುಂದೂಡಿಕೆ ಹಾಗೂ ನೀಟ್-ಯುಜಿ ಪರೀಕ್ಷೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮ ಪ್ರಕರಣ ವಿವಾದದ ಮಧ್ಯೆ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿಯ ಮಹಾನಿರ್ದೇಶಕರನ್ನು ವಜಾಗೊಳಿಸಲಾಗಿದೆ. ನೀಟ್-ಯುಜಿ ಪರೀಕ್ಷಾ ಅಕ್ರಮ ಮತ್ತು ಯುಜಿಸಿ-ನೆಟ್ ಪರೀಕ್ಷೆ ಮುಂದೂಡಿಕೆ ವಿರುದ್ಧ ದೇಶದ ಹಲವು ಭಾಗಗಳಲ್ಲಿ ವ್ಯಾಪಕ ಪ್ರತಿಭಟನೆಗಳು ನಡೆಯುತ್ತಿವೆ. ಪರೀಕ್ಷಾ ಅಕ್ರಮ ಸಂಬಂಧ ಕೇಂದ್ರ ಸರ್ಕಾರದ ವಿರುದ್ಧ ವಿಪಕ್ಷಗಳೂ ಕಿಡಿಕಾರಿವೆ. ಎನ್‌ಟಿಎಯ ಮಹಾನಿರ್ದೇಶಕರಾಗಿದ್ದ ಸುಬೋಧ್ ಕುಮಾರ್ ಸಿಂಗ್ ಅವರನ್ನು ವಜಾಗೊಳಿಸಿದೆ.



### ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣ

# ಡಾ.ಸೂರಜ್ ರೇವಣ್ಣ ಅರೆಸ್ಟ್

**ಹಾಸನ:** ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ಅವರನ್ನ ಪೊಲೀಸರು ಬಂಧಿಸಿದ್ದಾರೆ. ಹಾಸನದ ಸೆನ್ ಪೊಲೀಸ್ ಠಾಣೆಯಲ್ಲಿಯೇ ಪೊಲೀಸರು ಬಂಧಿಸಿದ್ದಾರೆ. ಶನಿವಾರ ಸಂತ್ರಸ್ತ ನೀಡಿದ್ದ ದೂರು ಆಧರಿಸಿ ಹೊಳೆನರಸೀಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಸೆಕ್ಷನ್ 377 (ಅಸ್ವಾಭಾವಿಕ ಅಪರಾಧ), 342 (ತಪ್ಪಾದ ಬಂಧನಕ್ಕೆ ಶಿಕ್ಷೆ) ಹಾಗೂ 506 (ಬೆದರಿಕೆ) ಅಡಿಯಲ್ಲಿ ಕೇಸ್ ದಾಖಲಾಗಿತ್ತು. ಡಿಜಿಪಿ ಕಚೇರಿಯಲ್ಲಿ ದೂರು ನೀಡಿದ್ದ ಸಂತ್ರಸ್ತ ಹಾಸನ ಎಸ್‌ಪಿಗೂ ದೂರಿನ ಪ್ರತಿಯನ್ನು ಇ-ಮೇಲ್ ಮಾಡಿದ್ದ. ಮೇಲ್ ಆಧರಿಸಿ ಸಂತ್ರಸ್ತನನ್ನ ಕರೆಸಿ ಮಾಹಿತಿ ಪಡೆದ ಪೊಲೀಸರು ಕೇಸ್ ದಾಖಲಿಸಿಕೊಂಡಿದ್ದರು.

ಸೂರಜ್ ಲಾಕ್ ಆಗಿದ್ದು ಹೇಗೆ?: ಶನಿವಾರ ರಾತ್ರಿ ತನ್ನ ವಿರುದ್ಧ ಅಸಹಜ ಲೈಂಗಿಕ ದೌರ್ಜನ್ಯ ಆರೋಪ ಹೊರಿಸಿದ್ದ ಸಂತ್ರಸ ವಿರುದ್ಧ ಪ್ರತಿದೂರು ನೀಡಲು ಸಂಜೆ 6 ಗಂಟೆ ವೇಳೆಗೆ ಹಾಸನದ ಸೆನ್ ಪೊಲೀಸ್ ಠಾಣೆಗೆ ತೆರಳಿದ್ದರು. ಅಲ್ಲಿಯೇ ಅವರನ್ನು ಬಂಧಿಸಿದ್ದ ಪೊಲೀಸರು ರಾತ್ರಿ ಸುಮಾರು 11:30ರ ವರೆಗೂ ವಿಚಾರಣೆ ನಡೆಸಿದ್ದರು. ಬಳಿಕ ಸೂರಜ್ ಜೊತೆಗೆ ನಿಗೂಢ ಸ್ಥಳಕ್ಕೆ ತೆರಳಿದ್ದ ಪೊಲೀಸರು ತಡರಾತ್ರಿ 1:30ರ ವರೆಗೂ ವಿಚಾರಣೆ ಮುಂದುವರಿಸಿದ್ದರು. ಪ್ರಕರಣದ ತನಿಖಾಧಿಕಾರಿ ಆಗಿರುವ ಸಕಲೇಶಪುರ ಡಿವೈಎಸ್‌ಪಿ ಪ್ರಮೋದ್ ಕುಮಾರ್ ಅವರು ಸೂರಜ್ ರೇವಣ್ಣ ಅವರನ್ನ ತೀವ್ರ ವಿಚಾರಣೆಗೆ ಒಳಪಡಿಸಿದ್ದರು.




### ಸಂತ್ರಸ್ತನ ದೂರಿನಲ್ಲಿ ಏನಿತ್ತು?

**ಸೂರಜ್ ರೇವಣ್ಣ ನನಗೆ ಚುನಾವಣೆ ಸಂದರ್ಭದಲ್ಲಿ ಪರಿಚಯವಾಗಿದ್ದರು. ನಾನು ಅವರ ತಮ್ಮ ಪ್ರಜ್ವಲ್ ರೇವಣ್ಣ ಪರ ಕೆಲಸ ಮಾಡಿದ್ದೇನೆ. ಆ ಸಂದರ್ಭದಲ್ಲಿ ನನ್ನ ನಂಬರನ್ನ ಸೂರಜ್ ತೆಗೆದುಕೊಂಡಿದ್ದರು. ಜೂ.14 ರಂದು ಸೂರಜ್ ನನಗೆ ಮೆಸೇಜ್ ಮಾಡಿದ್ದರು. ಮೆಸೇಜ್‌ನಲ್ಲಿ ನನ್ನ ಬಗ್ಗೆ ಎಲ್ಲಾ ಮಾಹಿತಿ ಪಡೆದಿದ್ದರು. ನಂತರ ಜೂ.16 ರಂದು ಹೊಳೆನರಸೀಪುರ ತಾಲೂಕಿನ, ಗನ್ನೀಕಡ ತೋಟಕ್ಕೆ ಸಂಜೆ ಬರಲು ಹೇಳಿದ್ದರು. ನಾನು ಹೋದ ಸಂದರ್ಭ ಮನೆಯಲ್ಲಿ ಒಬ್ಬರೇ ಇದ್ದರು. ನನಗೆ ಇಷ್ಟವಿಲ್ಲದಿದ್ದರೂ ಲೈಂಗಿಕ ಕಿರುಕುಳ ನೀಡಿದ್ದಾರೆ. ಆ ಸಂದರ್ಭ ನನಗೆ ಪುರುಷರನ್ನು ಕಂಡರೆ ಆಸಕ್ತಿ ಮಹಿಳೆಯರನ್ನು ಕಂಡರೆ ಆಸಕ್ತಿ ಇಲ್ಲ ಎಂದು ಹೇಳಿ ನನ್ನ ಮೇಲೆ ದೌರ್ಜನ್ಯ ಎಸಗಿದ್ದಾರೆ ಎಂದು ದೂರಿನಲ್ಲಿ ತಿಳಿಸಿರುವುದಾಗಿ ತಿಳಿದು ಬಂದಿದೆ.**

## ಸಂತ್ರಸ್ತನಿಗಿಂದು ಮೆಡಿಕಲ್ ಟೆಸ್ಟ್!

**ಬೆಂಗಳೂರು:** ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ವಿರುದ್ಧ ಅಸಹಜ ಲೈಂಗಿಕ ದೌರ್ಜನ್ಯ ಆರೋಪದ ಮೇಲೆ ದೂರು ದಾಖಲಿಸಿರುವ ಸಂತ್ರಸ್ತ ಯುವಕನಿಗೆ ಭಾನುವಾರ (ಇಂದು) ಬೆಂಗಳೂರಿನ ಬೌರಿಂಗ್ ಆಸ್ಪತ್ರೆಗೆ ವೈದ್ಯಕೀಯ ಪರೀಕ್ಷೆ ನಡೆಯಲಿದೆ.

ಶನಿವಾರ ತಡರಾತ್ರಿಯೇ ಸಂತ್ರಸ್ತನನ್ನು ಹಾಸನದಿಂದ ಬೌರಿಂಗ್ ಆಸ್ಪತ್ರೆಗೆ ಕರೆತಂದಿರುವ ಪೊಲೀಸರು ವೈದ್ಯಕೀಯ ಪರೀಕ್ಷೆಗೆ ಸಕಲ ಸಿದ್ಧತೆ ಮಾಡಿಕೊಂಡಿದ್ದಾರೆ. ಹಾಸನದಲ್ಲಿ ವೈದ್ಯಕೀಯ ಪರೀಕ್ಷೆಗೆ ನಿರಾಕರಿಸಿದ ಹಿನ್ನೆಲೆ ಸಂತ್ರಸ್ತನ ಮನವಿ ಮೇರೆಗೆ ಬೆಂಗಳೂರಿನಲ್ಲಿ ವೈದ್ಯಕೀಯ ಪರೀಕ್ಷೆ ನಡೆಸಲಾಗುತ್ತಿದೆ. ಹೊಳೆನರಸೀಪುರ ಪೊಲೀಸರು ತಡರಾತ್ರಿ 2 ಗಂಟೆಗೆ ಸಂತ್ರಸ್ತ ಯುವಕನನ್ನು ಬೌರಿಂಗ್ ಆಸ್ಪತ್ರೆಗೆ ಕರೆತಂದಿದ್ದಾರೆ.

ಸದ್ಯಕ್ಕೆ ಕೌನ್ಸಲಿಂಗ್ ಮುಗಿಸಿರುವ ಕರ್ತವ್ಯ ನಿರತ ವೈದ್ಯರು, ಮುಂದಿನ ಪರೀಕ್ಷೆಗಳಿಗೆ ಹಿರಿಯ ವೈದ್ಯರ ಆಗಮನಕ್ಕೆ ಕಾಯುತ್ತಿದ್ದಾರೆ. ಭಾನುವಾರ (ಇಂದು) ಬೆಳಗ್ಗೆ 10 ಗಂಟೆ ನಂತರ ವೈದ್ಯಕೀಯ ಪರೀಕ್ಷೆಯ ಬೆಳವಣಿಗೆ ನಡೆಯಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಸಂತ್ರಸ್ತ ಲೈಂಗಿಕ ಕ್ರಿಯೆಗೆ ಸಮರ್ಥನಾಗಿದ್ದಾನಾ ಅನ್ನೋ ಪರೀಕ್ಷೆ ಇದಾಗಿದೆ. ಸದ್ಯ ಸಂತ್ರಸ್ತನಿಗೆ ರಕ್ತದೊತ್ತಡ, ಶುಗರ್, ಇಸಿಜಿ, ದೇಹದ ಮೇಲೆ ಕಚ್ಚಿರುವ ಕಲೆಗಳ ಬಗ್ಗೆ ತಪಾಸಣೆ ನಡೆಸಲಾಗಿದೆ. ಹಿರಿಯ ವೈದ್ಯರ ಸಮ್ಮುಖದಲ್ಲಿ ಲೈಂಗಿಕ ಕ್ರಿಯೆ ಸಾಮರ್ಥ್ಯ ಪರೀಕ್ಷೆ ನಡೆಲಿದೆ. ಹೊಳೆನರಸೀಪುರ ಪೊಲೀಸರು ಸ್ಥಳದಲ್ಲಿ ಇದ್ದಾರೆ ಎಂದು ಬೌರಿಂಗ್ ಆಸ್ಪತ್ರೆ ಮೂಲಗಳು ತಿಳಿಸಿವೆ.



### ರೇಣುಕಾ ಸ್ವಾಮಿ ಕೊಲೆ: ದರ್ಶನ್ ಸೇರಿ ಎಲ್ಲ ಆರೋಪಿಗಳ

# ಮೊಬೈಲ್ ತಪಾಸಣೆಗೆ ಅನುಮತಿ

**ಬೆಂಗಳೂರು:** ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ಪೊಲೀಸರು ಚುರುಕಾಗಿ ತನಿಖೆ ನಡೆಸಿದ್ದಾರೆ. ಪ್ರಮುಖ ಆರೋಪಿಗಳನ್ನು ಬಂಧಿಸಿ 12 ದಿನಗಳ ಕಾಲ ಕಸ್ಟಡಿಯಲ್ಲಿಟ್ಟುಕೊಂಡು ಸತತ ವಿಚಾರಣೆ ಮಾಡಿದ್ದಾರೆ, ಹಲವು ಕಡೆ ಸ್ಥಳ ಮಹಜರು ಮಾಡಿದ್ದಾರೆ. ನೂರಾರು ಸಾಕ್ಷ್ಯಗಳನ್ನು ವಶಪಡಿಸಿಕೊಂಡಿದ್ದಾರೆ. ಇದೀಗ ಮತ್ತೊಂದು ಪ್ರಮುಖ ಸಾಕ್ಷಿಯನ್ನು ಪಡೆದುಕೊಳ್ಳಲು ನ್ಯಾಯಾಲಯ ಅನುಮತಿ ನೀಡಿದೆ. ಅದುವೇ ಆರೋಪಿಗಳ ಮೊಬೈಲ್ ಪರಿಶೀಲನೆ. ದರ್ಶನ್ ಸೇರಿದಂತೆ ಎಲ್ಲ ಆರೋಪಿಗಳ ಮೊಬೈಲ್ ಪರಿಶೀಲನೆಗೆ ನ್ಯಾಯಾಲಯ ಅನುಮತಿ ನೀಡಿದ್ದು, ಹಲವು ಮಹತ್ವದ ಅಂಶಗಳು ಇದರಿಂದ ಹೊರಗೆ ಬರುವ ಸಾಧ್ಯತೆ ಇದೆ.

ಆರೋಪಿ ರಾಘು ಹೊರತುಪಡಿಸಿ ಬಂಧಿತ





ಎಲ್ಲ ಆರೋಪಿಗಳಿಂದ ಅವರ ಮೊಬೈಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ಇಷ್ಟು ದಿನ ಅವನ್ನು ಸೀಲ್ ಮಾಡಿ ಇರಿಸಲಾಗಿತ್ತು. ಆದರೆ ಈಗ ನ್ಯಾಯಾಲಯ ಅನುಮತಿ ನೀಡಿರುವ ಕಾರಣ ಆ ಎಲ್ಲ ಮೊಬೈಲ್‌ಗಳನ್ನು ಎಫ್‌ಎಸ್‌ಎಲ್‌ಗೆ ರವಾನಿಸಿ ಡಾಟಾ ರಿಟ್ರೀವ್ ಮಾಡಿಸಲಾಗುತ್ತದೆ. ಕೊಲೆಯಾದ ದಿನ ಯಾರು ಎಲ್ಲಿದ್ದರು, ಯಾರಿಗೆ ಕರೆ ಮಾಡಿದರು. ಮೊಬೈಲ್‌ನಲ್ಲಿ ಘಟನೆಯ ಚಿತ್ರ, ವಿಡಿಯೋ ಸೆರೆ ಹಿಡಿಯಲಾಗಿದೆಯೇ? ಯಾರು ಯಾರಿಗೆ? ಎಷ್ಟು ಹಣ ಕಳಿಸಿದರು. ಕೊಲೆ ನಡೆದಾಗ ಯಾರು ಎಲ್ಲಿದ್ದರು ಎಂಬ ಎಲ್ಲ ಮಾಹಿತಿಯೂ ಮೊಬೈಲ್ ಪರಿಶೀಲನೆಯಿಂದ ಹೊರಗೆ ಬರಲಿದೆ. ಇದು ಈ ಪ್ರಕರಣದಲ್ಲಿ ಪ್ರಮುಖ ಸಾಕ್ಷಿ ಆಗಲಿದೆ.

ಪುಟ 2



# ಮೆಡಿಕಲ್ ವಿದ್ಯಾರ್ಥಿಗಳಿಗೆ ಶಾಕ್!

### ವೈದ್ಯಕೀಯ ಶಿಕ್ಷಣ ಪ್ರವೇಶ ಶುಲ್ಕ ಏರಿಕೆ ಸಾಧ್ಯತೆ

**ಬೆಂಗಳೂರು:** ರಾಜ್ಯದಲ್ಲಿ ವೈದ್ಯಕೀಯ ಶಿಕ್ಷಣ ಪ್ರವೇಶ ಶುಲ್ಕ ಏರಿಕೆಯಾಗುವ ಸಾಧ್ಯತೆ ಇದೆ. ಎಂಜಿನಿಯರಿಂಗ್ ಶುಲ್ಕ ಏರಿಕೆ ಬಳಿಕ ಮೆಡಿಕಲ್ ಸೀಟ್ ಶುಲ್ಕ ಏರಿಕೆಗೆ ವೈದ್ಯಕೀಯ ಶಿಕ್ಷಣ ಇಲಾಖೆ ಮನಸ್ಸು ಮಾಡಿದೆ. ವೈದ್ಯಕೀಯ, ದಂತ ವೈದ್ಯಕೀಯ ಸೇರಿ ವೈದ್ಯಕೀಯ ಶಿಕ್ಷಣದ ಕಾಲೇಜುಗಳಲ್ಲಿನ ಖಾಸಗಿ ಕೋಟಾದ ಸೀಟುಗಳ ಶುಲ್ಕವನ್ನು ಶೇ15 ಹೆಚ್ಚಳ ಮಾಡಲು ವೈದ್ಯಕೀಯ ಕಾಲೇಜುಗಳು ಬೇಡಿಕೆ ಇಟ್ಟಿವೆ. 2 ವರ್ಷಗಳಿಂದ ವೈದ್ಯಕೀಯ ಶುಲ್ಕ ಏರಿಕೆ ಮಾಡಿಲ್ಲ ಅಂತ ಸರ್ಕಾರಕ್ಕೆ ವೈದ್ಯಕೀಯ ಕಾಲೇಜುಗಳು ತಿಳಿಸಿವೆ. 2024-25ನೇ ಸಾಲಿಗೆ ಸರ್ಕಾರಿ, ಖಾಸಗಿ ಹಾಗೂ ಡೀಮ್ಡ್ ವಿಶ್ವವಿದ್ಯಾಲಯಗಳ ವ್ಯಾಪ್ತಿಯ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕಾಲೇಜುಗಳಲ್ಲಿನ ಸ್ನಾತಕ ಕೋರ್ಸ್‌ಗಳ ಸೀಟುಗಳ ಪ್ರವೇಶ ಶುಲ್ಕವನ್ನು ನಿಗದಿಪಡಿಸುವ ಬಗ್ಗೆ ವೈದ್ಯಕೀಯ ಶಿಕ್ಷಣ ಇಲಾಖೆ ಸಭೆ ನಡೆಸಿದೆ.

ಪುಟ 2

### ನೀಟ್-ಪಿ.ಜಿ.ಪರೀಕ್ಷೆ

# ಮುಂದೂಡಿಕೆ



**ನವದೆಹಲಿ:** ಇಂದು ನಡೆಯಬೇಕಿದ್ದ ನೀಟ್-ಪಿಜಿ ಪರೀಕ್ಷೆಯನ್ನು ಮುಂದೂಡಲಾಗಿದೆ ಮತ್ತು ಹೊಸ ದಿನಾಂಕಗಳನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ.

ನೀಟ್-ಪಿ.ಜಿ ಮತ್ತು ಯುಜಿಸಿ-ನೆಟ್ ಪರೀಕ್ಷೆಗಳಲ್ಲಿನ ಅಕ್ರಮಗಳ ಆರೋಪ ಹಿನ್ನೆಲೆ ಪರೀಕ್ಷೆಯನ್ನು ಮುಂದೂಡಲಾಗಿದೆ. ಮುಂಜಾಗ್ರತಾ ಕ್ರಮವಾಗಿ ಇಂದು ನಡೆಯಬೇಕಿದ್ದ ನೀಟ್-ಪಿಜಿಯನ್ನು ಮುಂದೂಡಲು ನಿರ್ಧರಿಸಲಾಗಿದೆ. ಈ ಪರೀಕ್ಷೆಯ ಹೊಸ ದಿನಾಂಕವನ್ನು ಶೀಘ್ರವಾಗಿ ತಿಳಿಸಲಾಗುವುದು. ವಿದ್ಯಾರ್ಥಿಗಳಿಗೆ ಉಂಟಾದ ಅನಾನುಕೂಲತೆಗೆ ವಿಷಾದಿಸುತ್ತೇವೆ ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ.

ಪುಟ 2

### 220 ಕೇಸ್‌ಗಳಲ್ಲಿ ಬೇಕಾಗಿದ್ದ ನಕ್ಸಲ್ ದಂಪತಿ ಪೊಲೀಸರ ಮುಂದೆ

# ಶರಣಾಗತಿ



**ಮುಂಬೈ:** 220 ಪ್ರಕರಣಗಳಲ್ಲಿ ಬೇಕಾಗಿದ್ದ ಮೋಸ್ಟ್ ವಾಂಟೆಡ್ ನಕ್ಸಲ್ ದಂಪತಿ ತಮ್ಮ ಶಸ್ತ್ರಾಸ್ತ್ರಗಳನ್ನು ತ್ಯಜಿಸಿ ಪೊಲೀಸರ ಮುಂದೆ ಶರಣಾಗಿದ್ದಾರೆ. ಗಿರಿಧರ್ ಎಂದೂ ಕರೆಯಲ್ಪಡುವ ನಕ್ಸಲೈಟ್ ನಂಗ್ಸು ತುಮ್ರೆಟಿ ತನ್ನ ಪತ್ನಿ ಸಂಗೀತಾ ಉಸೇಂಡಿ ಅಲಿಯಾಸ್ ಲಲಿತಾಳೊಂದಿಗೆ ಮಹಾರಾಷ್ಟ್ರದ ಗಡ್ಚಿರೋಲಿ ಜಿಲ್ಲೆಯಲ್ಲಿ ಶನಿವಾರ ಉಪ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರ ಸಮ್ಮುಖದಲ್ಲಿ ಶರಣಾದರು. ಗಿರಿಧರ್ ವಿರುದ್ಧ 170ಕ್ಕೂ ಹೆಚ್ಚು ಪ್ರಕರಣಗಳಿದ್ದವು. ಆತನ ತಲೆಗೆ 25 ಲಕ್ಷ ರೂ. ಬಹುಮಾನ ಘೋಷಿಸಲಾಗಿತ್ತು. ಆತನ ಪತ್ನಿ ವಿರುದ್ಧ 17 ಪ್ರಕರಣಗಳಿದ್ದು, ಆಕೆ ತಲೆಗೆ 16 ಲಕ್ಷ ರೂ. ಬಹುಮಾನ ಘೋಷಿಸಲಾಗಿತ್ತು.

ಪುಟ 2

# ಅರಣ್ಯಾಧಿಕಾರಿಯ ಬರ್ಬರ ಹತ್ಯೆ; ಐವರು ಹಂತಕರು ಅರೆಸ್ಟ್!

**ಯಾದಗಿರಿ:** ಕುಡಿದ ಅಮಲಿನಲ್ಲಿ ಕ್ಷುಲ್ಲಕ ಕಾರಣಕ್ಕೆ ಅರಣ್ಯಾಧಿಕಾರಿಯೊಬ್ಬರನ್ನು ಬರ್ಬರವಾಗಿ ಕೊಲೆಗೈದಿರುವ ಘಟನೆ ಯಾದಗಿರಿಯಲ್ಲಿ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಇದೇ ತಿಂಗಳ ಜೂನ್ 5ರಂದು ಯಾದಗಿರಿ ಜಿಲ್ಲೆ ಶಹಾಪೂರ ಪಟ್ಟಣದ ಮೋಟಗಿ ಬಾರ್ ಅಂಡ್ ರೆಸ್ಟೋರೆಂಟ್ ನಲ್ಲಿ ಕೊಲೆ ನಡೆದಿದೆ, ಆದ್ರೆ ತಡವಾಗಿ ಬೆಳಕಿಗೆ ಬಂದಿದೆ.ಮಹೇಶ್ ಕನಕಟ್ಟಿ ಬರ್ಬರ ಹತ್ಯೆಯಾದ ಶಹಾಪೂರ ಅರಣ್ಯಾಧಿಕಾರಿ ಆಗಿದ್ದಾರೆ. ಕುಡಿದ ಅಮಲಿನಲ್ಲಿ ಹಂತಕರು ಕ್ಷುಲ್ಲಕ ಕಾರಣಕ್ಕೆ ಕೊಲೆಗೈದು ಈಗ ಪೊಲೀಸರ ಅತಿಥಿಯಾಗಿದ್ದಾರೆ.ರಾಜು, ರೇಖು ನಾಯ್ಕ್, ತಾರಾ ಸಿಂಗ್, ನರಸಿಂಗ್ ಹಾಗೂ ಪ್ರಕಾಶ ಬಂಧಿತ ಕೊಲೆ ಆರೋಪಿಗಳಾಗಿದ್ದಾರೆ. ಇದೇ ತಿಂಗಳ ಜೂನ್ 5ರಂದು ಎಂದಿನಂತೆ ಮೋಟಗಿ ರೆಸ್ಟೋರೆಂಟ್‌ಗೆ ಮಹೇಶ್ ಕನಕಟ್ಟಿ ಊಟಕ್ಕೆ ತೆರಳಿದ್ದರು.ಈ ವೇಳೆ ಆರೋಪಿಗಳು ಕುಡಿದು ಚೀರಾಡುತ್ತಿದ್ದರು.ಅವರನ್ನ ತಡೆಯಲು ಹೋದಾಗ, ಮಹೇಶ್ ಹಾಗೂ ದುಷ್ಕರ್ಮಿಗಳ ನಡುವೆ ವಾಗ್ವಾದ ನಡೆದಿದೆ.ಕೊನೆಗೆ ಕುಡಿದ ಮತ್ತಿನಲ್ಲಿದ್ದ ಹಂತಕರು ಬಡಿಗೆಯಿಂದ ಹೊಡೆದು, ಕಾಲಿನಿಂದ ಜಾಡಿಸಿ ಒದ್ದು ಅಧಿಕಾರಿಯನ್ನ ಕೊಂದೇಬಿಟ್ಟು, ಎಸ್ಕೇಪ್ ಆಗಿದ್ದಾರೆ. ಮರುದಿನ ರೆಸ್ಟೋರೆಂಟ್ ಬಳಿ ಬಿಸಾಡಿದ್ದ ಮಹೇಶ್ ಅವರ ಮೃತದೇಹವನ್ನು ಪೊಲೀಸರು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದರು.ಈ ನಡುವೆ ಮೃತ ಮಹೇಶ್ ಪತ್ನಿ ಕೊಲೆ ಆರೋಪ ಮಾಡಿದ್ದರು.ಇದರಿಂದ ಅನುಮಾನಗೊಂಡ ಪೊಲೀಸರು ರೆಸ್ಟೋರೆಂಟ್‌ನ ಸಿಸಿಟಿವಿ ಪರಿಶೀಲನೆ ನಡೆಸಿದಾಗ ಕೊಲೆ ಮಾಡಿರುವುದು ಗೊತ್ತಾಗಿದೆ.ಸದ್ಯ ಐವರು ಆರೋಪಿಗಳ ಹೆಡೆಮುರಿ ಕಟ್ಟಿರುವ ಪೊಲೀಸರು, ಹಂತಕರ ವಿರುದ್ಧ ಶಹಾಪೂರ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.



# ತೈಲ ಬೆಲೆ ಏರಿಕೆಗೂ ಗ್ಯಾರಂಟಿ ಯೋಜನೆಗೂ ಸಂಬಂಧವಿಲ್ಲ

**ಬೆಂಗಳೂರು:** ತೈಲ ಬೆಲೆ ಏರಿಕೆಗೂ ಗ್ಯಾರಂಟಿಗೂ ಸಂಬಂಧವಿಲ್ಲ. ಎಲ್ಲಾ ಗ್ಯಾರಂಟಿಗಳು ಮುಂದುವರಿಯುತ್ತವೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಪರಿಶ್ರಮ ನೀಟ್ ಅಕಾಡೆಮಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಬೆಲೆ ಏರಿಕೆಗೆ ಗ್ಯಾರಂಟಿ ಕಾರಣ ಎಂದು ವಿಪಕ್ಷಗಳ ಹೇಳಿಕೆಗೆ ಯಾರು ಏನೇ ಹೇಳಿದರೂ ಬೆಲೆ ಏರಿಕೆಗೆ ಗ್ಯಾರಂಟಿ ಕಾರಣವಲ್ಲ. ಬೆಲೆ ಏರಿಕೆಯನ್ನು ಎಲ್ಲಾ ಸಂದರ್ಭದಲ್ಲಿ ಯಾವ ರೀತಿ ಮಾಡಬೇಕೋ ಆ ರೀತಿ ಮಾಡಿದ್ದೇವೆ. ಬಿಜೆಪಿ ಸರ್ಕಾರದಲ್ಲೂ ಬೆಲೆ ಏರಿಕೆ ಮಾಡಿದ್ದಾರೆ.ಆದರೆ ಅವರಂತೆ ನಾವು ಏರಿಸಿಲ್ಲ ಎಂದು ಸಮರ್ಥನೆ ಮಾಡಿಕೊಂಡರು. ತೈಲ ಬೆಲೆ ಕಡಿಮೆ ಇದ್ದರೂ ಅವರು ಬೆಲೆ ಏರಿಕೆ ಮಾಡಿದ್ರು. ನಾವು ಅದನ್ನು ಕಂಟ್ರೋಲ್‌ನಲ್ಲಿ ಇಟ್ಟುಕೊಂಡು ಪಕ್ಕದ ರಾಜ್ಯಗಳಿಗೆ ಬ್ಯುಸಿನೆಸ್ ಜಾಸ್ತಿ ಹೋಗುತ್ತಿತ್ತು.ಆ ದೃಷ್ಟಿಯಿಂದ ಪಕ್ಕದ ರಾಜ್ಯದಲ್ಲಿ ಬ್ಯುಸಿನೆಸ್ ಕಂಟ್ರೋಲ್ ಆಗಲಿ ಎಂದು ಮಾಡಿದ್ದೇವೆ. ಒಂದು ರಾಜ್ಯ ಬಿಟ್ಟು ಎಲ್ಲಾ ರಾಜ್ಯದಲ್ಲೂ ಜಾಸ್ತಿ ಇದೆ.ಗ್ಯಾರಂಟಿಗಳಿಗೂ ಬೆಲೆ ಏರಿಕೆಗೂ ಸಂಬಂಧವಿಲ್ಲ. ಎಲ್ಲಾ ಗ್ಯಾರಂಟಿಗಳು ಮುಂದುವರಿಯುತ್ತವೆ. ಅಭಿವೃದ್ಧಿ ಕೆಲಸಕ್ಕೆ ಏನು ಬೇಕೋ ಅದನ್ನು ಮಾಡುತ್ತೇವೆ ಎಂದರು.



# ಹಣಕಾಸು ಆಯೋಗದ ಶಿಫಾರಸಿನ ಅನುದಾನವನ್ನು ಕರ್ನಾಟಕಕ್ಕೆ ನೀಡಿ

**ಬೆಂಗಳೂರು:** ಕೇಂದ್ರ ಬಜೆಟ್‌ನಲ್ಲಿ ರಾಜ್ಯದ ಪರವಾಗಿ ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರ 7 ಬೇಡಿಕೆಗಳನ್ನ ಮುಂದಿಟ್ಟಿದೆ.ದೆಹಲಿಯಲ್ಲಿ ನಡೆದ ಕೇಂದ್ರ ಬಜೆಟ್‌ನ ಪೂರ್ವಭಾವಿ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಪರವಾಗಿ ಕಂದಾಯ ಸಚಿವ ಕೃಷ್ಣಭೈರೇಗೌಡ ಭಾಗಿಯಾಗಿದ್ದರು.

ಈ ವೇಳೆ ಕೇಂದ್ರ ಹಣಕಾಸು ಸಚಿವರ ಮುಂದೆ ರಾಜ್ಯದ ಪರವಾಗಿ ಪ್ರಮುಖ 7 ಬೇಡಿಕೆಗಳನ್ನ ಮಂಡಿಸಲಾಗಿದೆ.ಭದ್ರಾ ಮೇಲ್ದಂಡೆ ಅನುದಾನ ಬಿಡುಗಡೆ, ಕರ್ನಾಟಕಕ್ಕೆ ಹಣಕಾಸು ಆಯೋಗ ಶಿಫಾರಸು ಮಾಡಿದ್ದ ಅನುದಾನ ಬಿಡುಗಡೆ, ಬೆಂಗಳೂರು ಮತ್ತು ಕಲ್ಯಾಣ ಕರ್ನಾಟಕ ಅಭಿವೃದ್ಧಿಗಾಗಿ ವಿಶೇಷ ಪ್ಯಾಕೇಜ್ ಘೋಷಣೆ ಮಾಡುವಂತೆ ಕೇಂದ್ರದ ಮುಂದೆ ಬೇಡಿಕೆ ಇಡಲಾಗಿದೆ.ರಾಜ್ಯ ಸರ್ಕಾರ ಕೇಂದ್ರದ ಮುಂದೆ ಇಟ್ಟಿರೋ ಪ್ರಮುಖ ಬೇಡಿಕೆಗಳು ಹೀಗಿವೆ.

ರಾಜ್ಯ ಸರ್ಕಾರದ ಬೇಡಿಕೆಗಳೇನು?

ಭದ್ರಾ ಮೇಲ್ದಂಡೆ ನೀರಾವರಿ ಯೋಜನೆಗೆ ಈಗಾಗಲೇ ಘೋಷಿಸಲಾಗಿರುವ 5,300 ಕೋಟಿ ರೂ.ನೆರವನ್ನು ಬಿಡುಗಡೆ ಮಾಡಿ ಮತ್ತು ಅದನ್ನು ರಾಷ್ಟ್ರೀಯ ಯೋಜನೆ ಎಂದು ಘೋಷಿಸಿ. ಕರ್ನಾಟಕಕ್ಕೆ ಹಣಕಾಸು ಆಯೋಗ ಶಿಫಾರಸು ಮಾಡಿರುವ 11,495 ಕೋಟಿ ರೂ.ಅನುದಾನವನ್ನು ಬಿಡುಗಡೆ ಮಾಡಿ.

ಸೆಸ್‌ಗಳು ಮತ್ತು ಸರ್‌ಚಾರ್ಜ್‌ಗಳನ್ನು ವಿಭಾಗಿಸಬಹುದಾದ



ಪೂಲ್‌ಗೆ ಸೇರಿಸಿ ಇದರಿಂದ ರಾಜ್ಯಗಳು ಕೇಂದ್ರ ತೆರಿಗೆಗಳಲ್ಲಿ ತಮ್ಮ ಸರಿಯಾದ ಪಾಲನ್ನು ಪಡೆಯಬಹುದು. ಬೆಂಗಳೂರು ಅಭಿವೃದ್ಧಿ ಮತ್ತು ಕಲ್ಯಾಣ ಕರ್ನಾಟಕ ಅಭಿವೃದ್ಧಿಗಾಗಿ ಎಸ್ಪಿ ಪ್ಯಾಕೇಜ್ ಅನ್ನು ಘೋಷಿಸಿ. ಅಂಗನವಾಡಿ, ಆಶಾ ಮತ್ತು ಮಧ್ಯಾಹ್ನದ ಊಟದ ಕಾರ್ಯಕರ್ತೆಯರಿಗೆ ಗೌರವಧನವನ್ನು ಹೆಚ್ಚಿಸಿ. ವಸತಿ ಯೋಜನೆಗಳಲ್ಲಿ ಫಲಾನುಭವಿಗಳಿಗೆ ನೀಡಲಾಗುವ ಭಾರತ ಸರ್ಕಾರದ ಪಾಲನ್ನು ನಗರ ಪ್ರದೇಶದಲ್ಲಿ 1.5 ರಿಂದ 5 ಲಕ್ಷ ರೂ.ಗೆ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ 1.2 ರಿಂದ 3 ಲಕ್ಷ ರೂ.ಗಳಿಗೆ ಹೆಚ್ಚಿಸಿ. ರಾಯಚೂರಿಗೆಏಮ್ಸ್ ಘೋಷಿಸಿ.

# 'ಸಾಹಿತಿಗಳೂ ರಾಜಕಾರಣಿಗಳೇ' ಡಿಕೆಶಿ ಹೇಳಿಕೆಗೆ ಪ್ರಗತಿಪರರ ಆಕ್ರೋಶ: ಸಿಎಂಗೆಪತ್ರ

**ಗದಗ:** ಸಾಹಿತಿಗಳೂ ರಾಜಕಾರಣಿಗಳೇ ಎಂಬ ಡಿಸಿಎಂ ಡಿಕೆ ಶಿವಕುಮಾರ್‌ಹೇಳಿಕೆಸದ್ಯ ಚರ್ಚೆಗೆ ಗ್ರಾಸವಾಗಿದೆ. ಅಷ್ಟೇ ಅಲ್ಲದೆಪ್ರಗತಿಪರರು ಆಕ್ರೋಶವ್ಯಕ್ತಪಡಿಸಿದ್ದಾರೆ.ಈ ವಿಚಾರವಾಗಿ ಸಿಎಂ ಸಿದ್ದರಾಮಯ್ಯ ಅವರಿಗೆಪತ್ರಬರೆಯಲಾಗಿದೆ. ಈ ವಿಚಾರವಾಗಿ ನಗರದಲ್ಲಿ ಮಾಧ್ಯಮದವರೊಂದಿಗೆಮಾತನಾಡಿದ ಸಾಹಿತಿ ಬಸವರಾಜ್ ಸೂಳಿಭಾವಿ, ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ಡಿಕೆ ಶಿವಕುಮಾರ್ ಅವರಿಗೆಬುದ್ಧಿಹೇಳಲು ಕೇಳಿಕೊಂಡಿದ್ದೇವೆ ಎಂದರು. ವಿಚಾರವಾದಿಗಳ, ಪ್ರಗತಿಪರರ ಆಶಯದಂತೆ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದಿದೆ.ಬರಹಗಾರರನ್ನ, ಸಾಹಿತಿಗಳನ್ನ ಅವಮಾನಿಸುವ, ದರ್ಪತೋರುವ ಕೃತ್ಯ ದುರಂತ ಎಂದು ವಾಗ್ದಾಳಿ ಮಾಡಿದ್ದಾರೆ.

ಡಿಕೆ ಶಿವಕುಮಾರ್‌ನಾನೇಸಭೆ ಕರೆದಿದ್ದೇನೆ ಅದರಲ್ಲಿ ತಪ್ಪೇನಿದೆ ಅಂತಾರೆ. ಆದರೆಸಾಹಿತಿಗಳೂ ರಾಜಕಾರಣಿಗಳು ಅಂತಾ ಹೇಳಿ ಸಾಂಸ್ಕೃತಿಕ ವಲಯವನ್ನ ಅವಮಾನಿಸಿದ್ದಾರೆ. ಇನ್ನು ಪಕ್ಷದ ಕಚೇರಿಯಲ್ಲಿ ಸಭೆ ನಡೆಸಿದ್ದು ತಪ್ಪೇನು ಎಂದು ಸಚಿವ ತಂಗಡಗಿ ಅಂತಾರೆ.ಅವರ ಹೇಳಿಕೆ ಕಾಂಗ್ರೆಸ್ ಪಕ್ಷದ ಸಂಸ್ಕೃತಿಕ ಅಧಃಪತನಕ್ಕೆ ಸಾಕ್ಷಿ ಎಂದು ಕಿಕಾರಿದ್ದಾರೆ.

ಪಕ್ಷದ ಸರ್ಕಾರ ಅನ್ನೋದಾದರೆ ಸಚಿವ ಸಂಪುಟ ಸಭೆಯನ್ನ ಪಕ್ಷದ ಕಚೇರಿಯಲ್ಲಿ ಕರೆಯಿರಿ.ಸಾಂಸ್ಕೃತಿಕ ರಂಗದ ಮೇಲೆ ಹಿಡಿತ ಸಾಧಿಸುವ ಪ್ರಯತ್ನ ಸರಿಯಲ್ಲ. ಸಂಪುಟದ ಸದಸ್ಯರಿಗೆ ತಿಳಿಹೇಳುವಂತೆ ಸಿಎಂಗೆ ಪತ್ರ ಬರೆದು ಕೇಳಿಕೊಂಡಿದ್ದೇವೆ. ಸಿಎಂ ಮಾತ್ನಾಡ್ತಿರೋದು ಅನುಮಾನ ಮೂಡಿಸಿದೆ ಎಂದಿದ್ದಾರೆ. ಸಂಸ್ಕೃತಿಕ ಕ್ಷೇತ್ರಕ್ಕೆ ಸೇರಿದ ಅಕಾಡಮಿಗಳು ಸ್ವಾಯತ್ತವಾಗಿ ಕೆಲಸ ಮಾಡುತ್ತವೆ. ಅಕಾಡಮಿಗಳ ಅಧ್ಯಕ್ಷರನ್ನ ಪಕ್ಷದ ಕಚೇರಿಗೆ ಕರೆದು ಸಭೆ ಮಾಡಿದ್ದು ಸಂವಿಧಾನಾತ್ಮಕ ಕ್ರಮವಲ್ಲ. ಸಭೆಯಲ್ಲಿ ಪಕ್ಷದ ಪ್ರತಿನಿಧಿಯಾಗಿ ಕೆಲಸ ಮಾಡಲು ಹೇಳಿದ್ದಾರೆ.





## ಬಿಜೆಪಿ–ಜೆಡಿಎಸ್ ಒಂದಾಗಿ ಕಾಂಗ್ರೆಸ್
# ಸೊಕ್ಕು ಮುರಿಯುತ್ತೇವೆ

**ಬೆಂಗಳೂರು:** ಮುಂದಿನ ದಿನಗಳು ಹೋರಾಟದ ದಿನಗಳು. ಅಧಿವೇಶನದ ಬಳಿಕ ರಾಜ್ಯವ್ಯಾಪಿಪ್ರವಾಸಮಾಡಿ ಸಂಘಟನೆಗೆಶಕ್ತಿ ತುಂಬುತ್ತೇವೆ. ಬಿಜೆಪಿ-ಜೆಡಿಎಸ್ ಒಂದಾಗಿ ಆಡಳಿತ ಪಕ್ಷದಸೊಕ್ಕುಮುರಿಯುತ್ತೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು. ರಾಜ್ಯದಿಂದ ಆಯ್ಕೆಯಾದ ನೂತನ ಬಿಜೆಪಿ ಹಾಗೂ ಜೆಡಿಎಸ್ ಸಂಸದರಿಗೆ ಮತ್ತು ಕೇಂದ್ರ ಸಚಿವರಿಗೆ ಅರಮನೆ ಮೈದಾನದಲ್ಲಿ ಅಭಿನಂದನಾ ಕಾರ್ಯಕ್ರಮ ನೆರವೇರಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಬಿವೈ ವಿಜಯೇಂದ್ರ, ಲೋಕಸಭೆ ಚುನಾವಣೆಯಲ್ಲಿ ಜನರು ಕಾಂಗ್ರೆಸ್‌ಗೆತಕ್ಕಪಾಠ ಕಲಿಸಿದ್ದಾರೆ ಎಂದರು.

ಕಾಂಗ್ರೆಸ್ ಪಕ್ಷದ ಆಮಿಷದ ನಡುವೆಯೂ ಜನ ಬಿಜೆಪಿ-ಜೆಡಿಎಸ್‌ಗೆ ಆಶೀರ್ವಾದಮಾಡಿದ್ದಾರೆ. ಕಾಂಗ್ರೆಸ್ ಗೂಬೆ ಕೂರಿಸುತ್ತಿದ್ದರೂ ಅದನ್ನುಧಿಕ್ಕರಿಸಿ ಜನ ಆಶೀರ್ವಾದಮಾಡಿದ್ದಾರೆ.9 ಕ್ಷೇತ್ರಗಳಲ್ಲಿ ಗೆದ್ದು ಕಾಂಗ್ರೆಸ್ ತನ್ನ ಬೆನ್ನನ್ನು ತಾನೇ ತಟ್ಟಿಕೊಳ್ಳುತ್ತಿದೆ. ಸಚಿವರು ಇರುವ ಕ್ಷೇತ್ರಗಳಲ್ಲಿ ಕೂಡ ಎನ್‌ಡಿಎಲೀಡ್ ಪಡೆದುಕೊಂಡಿದೆ ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಕಾಂಗ್ರೆಸ್ ದುರಾಡಳಿತದ ವಿರುದ್ಧ ನಾವು ಹೋರಾಟ ಮಾಡಬೇಕಾಗಿದೆ. ಕಾಂಗ್ರೆಸ್ ದುರಾಡಳಿತದಿಂದ ಕರ್ನಾಟಕ ಎಲ್ಲ ವಿಧಗಳಲ್ಲೂ ಹಿಂದೆ ಸರಿದಿದೆ.ಬೋರ್ಡ್ ಅಧ್ಯಕ್ಷರು ಅನುದಾನಕ್ಕೆ ಕಾಯುತ್ತಿರುವ ರೀತಿ ಸಿಎಂ ವರ್ತಿಸುತ್ತಿದ್ದಾರೆ.ಮುಂದಿನ ದಿನಗಳು ಹೋರಾಟದ ದಿನಗಳು. ಜಿಲ್ಲಾ ಪಂಚಾಯತ್,



ತಾಲೂಕುಪಂಚಾಯತ್ ಚುನಾವಣೆಗಳುಬರುತ್ತವೆ. ನಮ್ಮ ಕಾರ್ಯಕರ್ತರಿಗೆಶಕ್ತಿ ತುಂಬುವ ಚುನಾವಣೆಯಲ್ಲಿಸಂಸದರುಹೆಚ್ಚು ಶ್ರಮ ಹಾಕಬೇಕು ಎಂದು ಸೂಚನೆ ನೀಡಿದರು.

ಸಮಾರಂಭದಲ್ಲಿ ವಿಧಾನಸಭೆ ವಿಪಕ್ಷ ನಾಯಕ ಆರ್. ಅಶೋಕ್, ಮಾಜಿ ಸಿಎಂಗಳಾದ ಬಿ.ಎಸ್. ಯಡಿಯೂರಪ್ಪ, ಡಿ.ವಿ. ಸದಾನಂದ ಗೌಡ, ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ಶೋಭಾ ಕರಂದ್ಲಾಜೆ, ಹೆಚ್‌ಡಿ ಕುಮಾರಸ್ವಾಮಿ, ವಿಸೋಮಣ್ಣಲೋಕಸಭಾ ಚುನಾವಣಾ ರಾಜ್ಯಸಹ ಉಸ್ತುವಾರಿ ಸುಧಾಕರ್ ರೆಡ್ಡಿ, ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ. ದೇವೇಗೌಡ ಭಾಗಿಯಾಗಿದ್ದಾರೆ.

ಬಿಜೆಪಿ ಮತ್ತು ಜೆಡಿಎಸ್‌ನ ಎಲ್ಲಸಂಸದರು, ಬಿಜೆಪಿಶಾಸಕರು, ವಿಧಾನಪರಿ?ತ್ ಸದಸ್ಯರು, ರಾಜ್ಯಪದಾಧಿಕಾರಿಗಳುಮತ್ತು ಜಿಲ್ಲಾಪದಾಧಿಕಾರಿಗಳು ಉಪಸ್ಥಿತರಿದ್ದರು.

# ಟಿಕೆಟ್ ಹಂಚಿಕೆ ವ್ಯತ್ಯಾಸ; 2–3 ಕ್ಷೇತ್ರದಲ್ಲಿ ಸೋಲು

**ಬೆಂಗಳೂರು:** ಕಾರ್ಯಕರ್ತರ ಪರಿಶ್ರಮದಿಂದ ಲೋಕಸಭೆ ಚುನಾವಣೆಯಲ್ಲಿ ಗೆಲುವು ಸಾಧ್ಯವಾಯಿತು. ಟಿಕೆಟ್ ಕೊಡುವುದರಲ್ಲಿ ಆದವ್ಯತ್ಯಾಸದಿಂದ 3-4 ಸೀಟುನಾವು ಕಳೆದುಕೊಂಡೆವು.ಮುಂದಿನ ವಿಧಾನಸಭಾ ಚುನಾವಣೆಯಲ್ಲಿ 130-140 ಸೀಟು ಗೆಲ್ಲಲು ಈಗಿನಿಂದಲೇ ಪ್ರಯತ್ನ ಆರಂಭಿಸಬೇಕು ಎಂದು ಮಾಜಿ ಮುಖ್ಯಮಂತ್ರಿ, ಕೇಂದ್ರ ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ ಹೇಳಿದರು.



ರಾಜ್ಯದಿಂದ ಆಯ್ಕೆಯಾದ ನೂತನ ಬಿಜೆಪಿ ಹಾಗೂ ಜೆಡಿಎಸ್ ಸಂಸದರಿಗೆ ಮತ್ತು ಕೇಂದ್ರ ಸಚಿವರಿಗೆ ಅರಮನೆ ಮೈದಾನದಲ್ಲಿ ಅಭಿನಂದನಾ ಕಾರ್ಯಕ್ರಮ ನೆರವೇರಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಬಿಎಸ್ ಯಡಿಯೂರಪ್ಪ, ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಪಕ್ಷಮೂರಂಕಿ ಸಾಧನೆಮಾಡಲಾಗಿಲ್ಲ. ಸುಳ್ಳು ಆಶ್ವಾಸನೆ ಕೊಟ್ಟರೂ ಕಾಂಗ್ರೆಸ್ ದಯನೀಯ ಸೋಲು ಅನುಭವಿಸಿದೆ ಎಂದು ವಾಗ್ದಾಳಿ ಮಾಡಿದರು. ಕಾಂಗ್ರೆಸ್ ವಿರುದ್ಧದ ಆಕ್ರೋಶವನ್ನು ಜನ ಚುನಾವಣೆ ಮೂಲಕ ವ್ಯಕ್ತಪಡಿಸಿದ್ದಾರೆ. ಆಮಿಷ, ಹಣಬಲದ ಹೊರತಾಗಿಯೂ 19 ಕ್ಷೇತ್ರಗಳಲ್ಲಿ ಜನರು ಎನ್‌ಡಿಎ ಅಭ್ಯರ್ಥಿಗಳನ್ನು ಗೆಲ್ಲಿಸಿದ್ದಾರೆ. ಸಂಸದರು ಅವರವರ ಕ್ಷೇತ್ರಗಳಲ್ಲಿಮೋದಿಯ ಜನಸೇವಕರಾಗಿ ಕೆಲಸಮಾಡಬೇಕಿದೆ.ಕಾಂಗ್ರೆಸ್ ಅಂದರೆ ಅಭಿವೃದ್ಧಿಶೂನ್ಯ ಎಂಬುದನ್ನುಮನವರಿಕೆಮಾಡಬೇಕಾಗಿದೆ. ಜಿಲ್ಲಾಪಂಚಾಯತ್, ತಾಲೂಕು ಪಂಚಾಯತ್, ಗ್ರಾಮಪಂಚಾಯತ್ ಚುನಾವಣೆಗಳನ್ನುಬಿಜೆಪಿ-ಜೆಡಿಎಸ್ ಒಟ್ಟಾಗಿ ಹೋಗಬೇಕಿದೆ ಎಂದುಹೇಳಿದರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆ ವಿಪಕ್ಷ ನಾಯಕ ಆರ್. ಅಶೋಕ್, ಮಾಜಿ ಸಿಎಂ ಡಿ.ವಿ. ಸದಾನಂದ ಗೌಡ, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಷಿ, ಶೋಭಾ ಕರಂದ್ಲಾಜೆ, ಹೆಚ್‌ಡಿ ಕುಮಾರಸ್ವಾಮಿ, ವಿಸೋಮಣ್ಣಲೋಕಸಭಾ ಚುನಾವಣಾ ರಾಜ್ಯಸಹ ಉಸ್ತುವಾರಿ ಸುಧಾಕರ್ ರೆಡ್ಡಿ, ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ. ದೇವೇಗೌಡಭಾಗಿಯಾಗಿದ್ದಾರೆ.

ಬಿಜೆಪಿ ಮತ್ತು ಜೆಡಿಎಸ್‌ನ ಎಲ್ಲಸಂಸದರು, ಬಿಜೆಪಿಶಾಸಕರು, ವಿಧಾನಪರಿಷತ್ ಸದಸ್ಯರು, ರಾಜ್ಯ ಪದಾಧಿಕಾರಿಗಳು ಮತ್ತು ಜಿಲ್ಲಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಅಪ್ರಾಪ್ತನಿಂದ ಬೈಕ್ ಚಾಲನೆ; ತಂದೆಗೆ 25,000 ರೂ. ದಂಡ!

**ಶಿವಮೊಗ್ಗ:** ಅಪ್ರಾಪ್ತನೊಬ್ಬ ದ್ವಿಚಕ್ರ ವಾಹನ ಚಾಲನೆ ಮಾಡಿದ್ದಕ್ಕೆ ತಂದೆಗೆ 25 ಸಾವಿರ ರೂ.ದಂಡ ವಿಧಿಸಿದ ಘಟನೆ ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲ್ಲೂಕಿನಲ್ಲಿ ನಡೆದಿದೆ.

ತನ್ನ ಮಗನಿಗೆ ತಂದೆಯೇ ವಾಹನ ಚಾಲನೆ ಮಾಡಲು ಅವಕಾಶ ಮಾಡಿಕೊಟ್ಟಿದ್ದಕ್ಕೆ ತೀರ್ಥಹಳ್ಳಿ ನ್ಯಾಯಾಲಯವು ತಂದೆಗೆ 25,000 ರೂ. ದಂಡ ವಿಧಿಸಿದೆ. ದ್ವಿಚಕ್ರ ವಾಹನ ಚಾಲನೆ ಮಾಡಿದ 17 ವ?ದ ಬಾಲಕ ಮೂಲತಃ ತೀರ್ಥಹಳ್ಳಿಯವನು ಎಂದು ತಿಳಿದುಬಂದಿದೆ.

ತೀರ್ಥಹಳ್ಳಿ ಟೌನ್ ದೊಡ್ಮನೆ ಕೇರಿ ಬಳಿಕ ಶಿವಮೊಗ್ಗ ಸಂಚಾರ ಪೊಲೀಸರು ವಾಹನ ತಪಾಸಣೆ ಮಾಡುತ್ತಿದ್ದರು. ಈ ವೇಳೆ ದ್ವಿಚಕ್ರ ವಾಹನ ಚಾಲನೆ ಮಾಡಿಕೊಂಡು ಬಂದಿದ್ದ 17 ವ?ದ ಅಪ್ರಾಪ್ತನನ್ನು ತಡೆದು ಪರವಾನಗಿ ಪರಿಶೀಲಿಸಿದರು. ನಂತರ ಆತ ಅಪ್ರಾಪ್ತ ಮತ್ತು ಪರವಾನಗಿಯಿಲ್ಲದೇ ಬೈಕ್ ಚಾಲನೆ ಮಾಡುತ್ತಿದ್ದ ಕಾರಣಕ್ಕೆ ಪೊಲೀಸರು ಆತನನ್ನ ಕೋರ್ಟ್‌ಗೆ ಹಾಜರು ಪಡಿಸಿದ್ದರು.ಇದನ್ನು ಗಮನಿಸಿದ ತೀರ್ಥಹಳ್ಳಿ ಪಿಸಿಜೆ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ 25,000 ದಂಡ ವಿಧಿಸಿ ಆದೇಶಿಸಿತು.




**ಮೊದಲನೇ ಪುಟದಿಂದ...**

## ರಾಜ್ಯದಲ್ಲಿ ಮಳೆ ಅಬ್ಬರ

ಬೆಳಗಾವಿ, ಬೀದರ್, ಕಲಬುರಗಿ, ಮೈಸೂರಿಗೆ ಯೆಲ್ಲೋ ಅಲರ್ಟ್ ಘೋಷಿಸಿದ್ದರೆ, ಶಿವಮೊಗ್ಗ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರಕ್ಕೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

ಇನ್ನುಳಿದಂತೆ ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ, ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಹಾಸನ, ಕೋಲಾರ, ಮಂಡ್ಯ, ರಾಮನಗರ, ತುಮಕೂರು, ವಿಜಯನಗರದಲ್ಲಿ ಮಳೆಯಾಗಲಿದೆ.

ಅಂಕೋಲಾ, ಕುಮಟಾ, ಕಾರವಾರ, ಉಡುಪಿ, ಸಿದ್ದಾಪುರ, ಕೊಲ್ಲೂರು, ಕೋಟ, ಸಿದ್ದಾಪುರ, ಮಂಕಿ, ಶಿರಾಲಿ, ಕಾರ್ಕಳ, ಮಂಗಳೂರು, ಪಣಂಬೂರು, ಗೋಕರ್ಣ, ಮಂಗಳೂರು ವಿಮಾನ ನಿಲ್ದಾಣ, ಇಳಕಲ್, ಕುಂದಾಪುರ, ಸುಳ್ಯ, ಲೋಂಡಾ, ಔರಾದ್, ಹಾರಂಗಿ, ಕುಣಿಗಲ್, ಗುಬ್ಬಿ, ನಾಪೋಕ್ಲು, ಮುಲ್ಕಿ, ಮಾಣಿ, ಧರ್ಮಸ್ಥಳ, ಉಪ್ಪಿನಂಗಡಿ, ಬೆಳ್ತಂಗಡಿ, ಜೋಯ್ಡಾ, ಹುಕ್ಕೇರಿ, ಬಾಗಲಕೋಟೆ, ಸಂಕೇಶ್ವರ, ಬಿಳಗಿ, ಗಂಗಾವತಿ, ಆಗುಂಬೆ, ಮಧುಗಿರಿ, ಮಾಗಡಿ, ಕೊಪ್ಪ, ತ್ಯಾಗರ್ತಿ, ಚನ್ನಗಿರಿಯಲ್ಲಿ ಮಳೆಯಾಗಿದೆ.

ಇಂದು ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಹಾಸನ, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು, ವಿಜಯನಗರ ಜಿಲ್ಲೆಗಳ ಹಲವೆಡೆ ಮತ್ತು ಉತ್ತರ ಒಳನಾಡಿನ ಬೀದರ್, ಬಾಗಲಕೋಟೆ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗಲಿದೆ.

ಬೆಂಗಳೂರಿನಲ್ಲಿ ಮೋಡಕವಿದ ವಾತಾವರಣವಿದ್ದು ಸಂಜೆ ವೇಳೆಗೆ ಮಳೆಯಾಗುವ ಸಾಧ್ಯತೆ ಇದೆ. ಎಚ್‌ಎಎಲ್‌ನಲ್ಲಿ 29.7 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 19.5 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ನಗರದಲ್ಲಿ 29.2 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 21.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕೆಐಎಎಲ್‌ನಲ್ಲಿ 30.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 21.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಜಿಕೆವಿಕೆಯಲ್ಲಿ 29.8 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 19.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

ಹೊನ್ನಾವರದಲ್ಲಿ 28.4 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 23.9 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕಾರವಾರದಲ್ಲಿ 30.2 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 24.5 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಶಿರಾಲಿಯಲ್ಲಿ 64.0ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 19.6 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

## ಮೊಬೈಲ್ ತಪಾಸಣೆಗೆ ಅನುಮತಿ

ಆರೋಪಿ ರಾಘು ಹಾಗೂ ಸಂತ್ರಸ್ತ ರೇಣುಕಾ ಸ್ವಾಮಿಯ ಮೊಬೈಲ್ ಅನ್ನು ಆರೋಪಿಗಳು ಮೋರಿಗೆ ಎಸದಿದ್ದು, ಸತತ ಹುಡುಕಾಟದ ಬಳಿಕವೂ ಆ ಮೊಬೈಲ್‌ಗಳು ಸಿಕ್ಕಿಲ್ಲವಾದ್ದರಿಂದ ಅವರ ಮೊಬೈಲ್ ಸಿಮ್‌ಗಳನ್ನು ಹೊಸದಾಗಿ ಪಡೆದು, ಸಿಮ್‌ನ ಕರೆ ಮಾಹಿತಿಗಳನ್ನು ಪೊಲೀಸರು ತೆಗೆದುಕೊಳ್ಳಲು ನ್ಯಾಯಾಲಯ ಸೂಚಿಸಿದೆ. ಒಂದೊಮ್ಮೆ ಆ ಎರಡು ಮೊಬೈಲ್ ಸಿಕ್ಕಿದ್ದಲ್ಲಿ ಪೊಲೀಸರು ತನಿಖೆಗೆ ದೊಡ್ಡ ಯಶಸ್ಸು ದೊರೆತಿರುತ್ತಿತ್ತು.

ಇನ್ನು ಈ ಪ್ರಕರಣದಲ್ಲಿ ಈವರೆಗೆ 139 ಸಾಕ್ಷಿಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಎಫ್‌ಎಸ್‌ಎಲ್ ಪರೀಕ್ಷೆಗೆ ಕಳಿಸಿದ ಕೆಲವು ವಸ್ತುಗಳ ವರದಿಗಳು ಬಂದಲ್ಲಿ ಸಾಕ್ಷ್ಯಗಳ ಸಂಖ್ಯೆ ಇನ್ನೂ ಹೆಚ್ಚಾಗಲಿದೆ. ಈ ಎಲ್ಲ ಸಾಕ್ಷ್ಯಗಳನ್ನು ಒಂದಕ್ಕೊಂದು ಹೇಗೆ ಕನೆಕ್ಟ್ ಮಾಡಿ ಚಾರ್ಜ್ ಶೀಟ್ ತಯಾರಿಸುತ್ತಾರೆ ಎಂಬುದರ ಮೇಲೆ ದರ್ಶನ್ ಪ್ರಕರಣ ನಿಂತಿದೆ. ಈಗ ಹೇಳುತ್ತಿರುವಂತೆ ಕೊಲೆಗೆ ಮೂಲ ಕಾರಣಕರ್ತರಲ್ಲಿ ದರ್ಶನ್ ಸಹ ಒಬ್ಬರಾಗಿದ್ದರು ಎಂಬುದು ವಿಚಾರಣೆಯಿಂದ ಬೆಳಕಿಗೆ ಬಂದಿದ್ದು, ಅದಕ್ಕೆ ಪೂರಕವಾಗಿ ಕೆಲವು ಸಮರ್ಥನೀಯ ಸಾಕ್ಷ್ಯಗಳು ದೊರಕಿವೆ ಎನ್ನಲಾಗುತ್ತಿದೆ.

ಜೂನ್ 11 ರಂದು ರೇಣುಕಾ ಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ದರ್ಶನ್, ಪವಿತ್ರಾ, ಗೌಡ ಸೇರಿದಂತೆ ಹಲವು ಆರೋಪಿಗಳನ್ನು ಕಾಮಾಕ್ಷಿಪಾಳ್ಯ ಪೊಲೀಸರು ಬಂಧಿಸಿದರು. ಈವರೆಗೆ ಸುಮಾರು 17 ಆರೋಪಿಗಳನ್ನು ಬಂಧಿಸಲಾಗಿದೆ. ಎಲ್ಲ ಆರೋಪಿಗಳು ಸಹ ನ್ಯಾಯಾಂಗ ಬಂಧನದಲ್ಲಿದ್ದು, ಜುಲೈ 4ಕ್ಕೆ ಅವರ ನ್ಯಾಯಾಂಗ ಬಂಧನ ಅಂತ್ಯವಾಗಲಿದೆ ಅಂದು ಜಾಮೀನು ಸಿಗುತ್ತದೆಯೋ ಅಥವಾ ಮತ್ತೆ ನ್ಯಾಯಾಂಗ ಬಂಧನ ವಿಸ್ತರಣೆ ಆಗಲಿದೆಯೋ ಕಾದು ನೋಡಬೇಕಿದೆ.

## ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ ಮುಖ್ಯಸ್ಥ ವಜಾ

ಅವರ ಸ್ಥಾನಕ್ಕೆ ನಿವೃತ್ತ ಭಾರತೀಯ ಆಡಳಿತ ಸೇವೆ (ಐಎಎಸ್) ಅಧಿಕಾರಿ ಪ್ರದೀಪ್ ಸಿಂಗ್ ಖರೋಲಾ ಅವರನ್ನು ನೇಮಿಸಲಾಗಿದೆ ಎಂದು ಕೇಂದ್ರ ಸರ್ಕಾರ ಪ್ರಕಟಿಸಿದೆ.

ಖರೋಲಾ ಅವರು ಇಂಡಿಯಾ ಟ್ರೇಡ್ ಪ್ರಮೋಷನ್ ಆರ್ಗನೈಸೇಶನ್‌ನಅಧ್ಯಕ್ಷರುಮತ್ತುವ್ಯವಸ್ಥಾಪಕಸಂಪಾದಕರಾಗಿದ್ದಾರೆ. ನಿಯಮಿತ ಪದಾಧಿಕಾರಿಯ ನೇಮಕದವರೆಗೆ ಅಥವಾ ಮುಂದಿನ ಆದೇಶದವರೆಗೆ ಎನ್‌ಟಿಎ ಯ ಮಹಾನಿರ್ದೇಶಕರಾಗಿ ಹೆಚ್ಚುವರಿ ಜವಾಬ್ದಾರಿಯನ್ನು ಖರೋಲಾ ಅವರಿಗೆ ನೀಡಲಾಗಿದೆ.

ಏಜೆನ್ಸಿಯ ಕಾರ್ಯನಿರ್ವಹಣೆಯನ್ನು ಸುಧಾರಿಸಲು ಶಿಫಾರಸು ನೀಡುವ ಸಮಿತಿಯನ್ನು ಸರ್ಕಾರವು ರಚಿಸಿದ ಕೆಲವೇ ಗಂಟೆಗಳ ನಂತರ ಈ ಕ್ರಮವು ಬಂದಿದೆ.

## ಮೆಡಿಕಲ್ ವಿದ್ಯಾರ್ಥಿಗಳಿಗೆ ಶಾಕ್!

ವೈದ್ಯಕೀಯ ಕಾಲೇಜುಗಳು ಶೇ15 ರಷ್ಟು ಶುಲ್ಕ ಹೆಚ್ಚಳದ ಪ್ರಸ್ತಾವನೆ ಇಟ್ಟರೂ, ಶೇ10 ರಷ್ಟು ಶುಲ್ಕ ಏರಿಕೆಗೆ ವೈದ್ಯಕೀಯ ಶಿಕ್ಷಣ ಇಲಾಖೆ ಚಿಂತನೆ ನಡೆಸಿದೆ. ಬೆಲೆ ಏರಿಕೆ ಮಧ್ಯೆ ಶಿಕ್ಷಣದ ಬೆಲೆ ಹೆಚ್ಚಳದ ಬಗ್ಗೆ ಜನರು, ಕನ್ನಡಪರ ಸಂಘಟನೆಗಳು ಆಕ್ರೋಶ ಹೊರಹಾಕಿದ್ದಾರೆ.

2018-19ರಲ್ಲಿ ಸರಾಸರಿ ಶೇ26 ರಷ್ಟು ಶುಲ್ಕ ಹೆಚ್ಚಳಕ್ಕೆ ಸರ್ಕಾರ ಹಸಿರು ನಿಶಾನೆ ತೋರಿಸಿತ್ತು. ತದನಂತರದಲ್ಲಿ 2019-20, 2020-21ರಲ್ಲಿ ಶೇಕಾಡ ಶೇ15ರಷ್ಟು ಶುಲ್ಕ ಹೆಚ್ಚಳ ಮಾಡಲಾಗಿತ್ತು. ಆದರೆ ಈ ಮಧ್ಯೆ ಕೊರೊನಾ ಕಾರಣ ಕಳೆದ ಎರಡು ವರ್ಷಗಳಿಂದ ಯಾವುದೇ ಶುಲ್ಕ ಹೆಚ್ಚಳ ಮಾಡಿಲ್ಲ. ಸದ್ಯ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಮೆಡಿಕಲ್ ಸೀಟಿಗೆ 50 ಸಾವಿರ ಇದ್ದರೆ, ಖಾಸಗಿ ಕಾಲೇಜುಗಳಲ್ಲಿ ಸರ್ಕಾರಿ ಕೋಟಾದಡಿ 1,28,726 ರೂ. ಶುಲ್ಕ ಇದೆ.

## ನೀಟ್–ಪಿ.ಜಿ ಪರೀಕ್ಷೆ ಮುಂದೂಡಿಕೆ

ಕೆಲವು ಸ್ಪರ್ಧಾತ್ಮಕ ಪರೀಕ್ಷೆಗಳ ಸಮಗ್ರತೆಯ ಬಗ್ಗೆ ಇತ್ತೀಚಿನ ಆರೋಪಗಳನ್ನು ಪರಿಗಣಿಸಿ, ಆರೋಗ್ಯ ಸಚಿವಾಲಯವು ವೈದ್ಯಕೀಯ ವಿದ್ಯಾರ್ಥಿಗಳ ರಾಷ್ಟ್ರೀಯ ಪರೀಕ್ಷಾ ಮಂಡಳಿಯು ನಡೆಸುವ ನೀಟ್-ಯುಜಿ ಪ್ರವೇಶ ಪರೀಕ್ಷೆಯ ಪ್ರಕ್ರಿಯೆಗಳ ದೃಢತೆಯ ಸಂಪೂರ್ಣ ಮೌಲ್ಯಮಾಪನವನ್ನು ಕೈಗೊಳ್ಳಲು ನಿರ್ಧರಿಸಲಾಗಿದೆ ಎಂದು ಸಚಿವಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಮತ್ತು ಪರೀಕ್ಷೆಯ ಪಾವಿತ್ರ್ಯತೆ ಕಾಪಾಡಲು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಸಚಿವಾಲಯ ಹೇಳಿದೆ.

## 220 ಕೇಸ್‌ಗಳಲ್ಲಿ ಬೇಕಾಗಿದ್ದ ನಕಲ್ ದಂಪತಿ ಪೊಲೀಸರ ಮುಂದೆ ಶರಣಾಗತಿ

ಈಗ ಇಬ್ಬರೂ ತಮ್ಮ ಶಸ್ತ್ರಾಸ್ತ್ರಗಳನ್ನು ತ್ಯಜಿಸಲು ನಿರ್ಧರಿಸಿದ್ದಾರೆ.

ಗಿರಿಧರ್ 1996 ರಲ್ಲಿ ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ (ಮಾವೋವಾದಿ) ಎಡಪಲ್ಲಿ ದಳಕ್ಕೆ ಸೇರಿದ್ದ. ಗಡ್ಚಿರೋಲಿಯಲ್ಲಿ ಅದರ ಚಟುವಟಿಕೆಗಳ ಮುಖ್ಯಸ್ಥನಾಗಿದ್ದ. ಈತನ ವಿರುದ್ಧ 86 ಎನ್‌ಕೌಂಟರ್‌ಗಳು ಮತ್ತು 15 ಬೆಂಕಿ ಹಚ್ಚುವಿಕೆ ಸೇರಿದಂತೆ 179 ಪ್ರಕರಣಗಳಿವೆ. ಆತನ ಪತ್ನಿ ಲಲಿತಾ ಕೂಡ 17 ಪ್ರಕರಣಗಳನ್ನು ಎದುರಿಸುತ್ತಿದ್ದಾಳೆ. ಶರಣಾಗತಿ ಮತ್ತು ಪುನರ್ವಸತಿ ಯೋಜನೆಯಡಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಗಿರಿಧರ್‌ಗೆ 15 ಲಕ್ಷ ರೂ. ಮತ್ತು ಲಲಿತಾಗೆ 8.50 ಲಕ್ಷ ರೂ. ನೀಡಲಾಗಿದೆ.

ಗಿರಿಧರ್ ಶರಣಾಗತಿಯಿಂದ ಗಡ್ಚಿರೋಲಿಯಲ್ಲಿ ಮಾವೋವಾದಿ ಚಳವಳಿಯ ಬೆನ್ನೆಲುಬು ಮುರಿದಿದೆ. ನಕ್ಸಲ್ ಹಾವಳಿಯನ್ನು ಕೊನೆಗೊಳಿಸಲು ಗಡ್ಚಿರೋಲಿ ಪೊಲೀಸರ ಅವಿರತ ಪ್ರಯತ್ನಗಳನ್ನು ನಾನು ಪ್ರಶಂಸಿಸುತ್ತೇನೆ ಎಂದು ದೇವೇಂದ್ರ ಫಡ್ನವಿಸ್ ಎಂದು ತಿಳಿಸಿದ್ದಾರೆ.

## ಪರಪ್ಪನ ಅಗ್ರಹಾರದಲ್ಲಿ ಮೊದಲ ದಿನ ಕಳೆದ ದರ್ಶನ್

ರಾತ್ರಿ ದರ್ಶನ್‌ಗೆ ಮುದ್ದೆ, ಚಪಾತಿ, ಸಾಂಬಾರ್ ಮತ್ತು ಮಜ್ಜಿಗೆ ನೀಡಲಾಗಿತ್ತು. ಆದ್ರೆ ಸರಿಯಾಗಿ ಊಟ ಮಾಡದ ದರ್ಶನ್ ತಡವಾಗಿಯೇ ನಿದ್ರೆಗೆ ಜಾರಿದ್ದಾರೆ. ಕಸ್ಟಡಿಯಲ್ಲಿ ಪೊಲೀಸ್ ವಿಚಾರಣೆಯಿಂದ ಹೈರಾಣಾಗಿದ್ದ ನಟ, ಮೊದಲ ದಿನ ಜೈಲೂಟ ಸರಿಯಾಗಿ ಮಾಡಲಾಗದೇ ತಡರಾತ್ರಿ ವರೆಗೂ ಮಂಕಾಗಿಯೇ ಕುಳಿತಿದ್ದರು. ರಾತ್ರಿ 11:30ರ ನಂತರ ನಿದ್ರೆಗೆ ಜಾರಿದ್ದಾರೆ ಎಂಬುದಾಗಿ ಎಂದು ಜೈಲರ್‌ವೊಬ್ಬರು ತಿಳಿಸಿದ್ದಾರೆ.

ಬೆಳಗ್ಗೆ 6:30ರ ವೇಳೆಗೆ ಎಚ್ಚರಗೊಂಡ ದರ್ಶನ್, ನಿತ್ಯಕರ್ಮ ಮುಗಿಸಿ, ಸೆಲ್‌ನಲ್ಲಿ ಕುಳಿತಿದ್ದಾರೆ, ದರ್ಶನ್ ಇರುವ ಅದೇ ಸೆಲ್‌ನಲ್ಲಿ ಸಹಖೈದಿ ವಿನಯ್ ಸೆರೆವಾಸ ಅನುಭವಿಸುತ್ತಿದ್ದಾರೆ. ಇಂದು (ಭಾನುವಾರ) ಜೈಲಿನ ಮೆನುವಿನ ಪ್ರಕಾರ ದರ್ಶನ್‌ಗೆ ಪಲಾವ್ ನೀಡಲಿದ್ದಾರೆ ಎಂದು ಜೈಲರ್ ಮಾಹಿತಿ ನೀಡಿದ್ದಾರೆ.

ಜೈಲಿಗೆ ತೆರಳುವ ಮುನ್ನ ಆಗಿದ್ದೇನು?: ಗೆಳತಿ ಪವಿತ್ರಾಗೌಡಗೆ ಅಶ್ಲೀಲ ಮೆಸೇಜ್ ಕಳಿಸಿದ ಅಂತ ಚಿತ್ರದುರ್ಗದ ರೇಣುಕಾಸ್ವಾಮಿಯನ್ನು ಶೆಡ್‌ನಲ್ಲಿ ಕೂಡಿ ಹಾಕಿ, ಚಿತ್ರಹಿಂಸೆ ಕೊಟ್ಟು ಕೊಂದ ಕೇಸಲ್ಲಿ ದರ್ಶನ್‌ಗೆ 13 ದಿನ ನ್ಯಾಯಾಂಗ ಬಂಧನ ವಿಧಿಸಲಾಯಿತು. 24ನೇ ಎಸಿಎಂಎಂ ಕೋರ್ಟ್ ಜುಲೈ 4ರ ವರೆಗೆ ನ್ಯಾಯಾಂಗ ಬಂಧನ ವಿಧಿಸಿತು. ಹೀಗಾಗಿ, ಪರಪ್ಪನ ಅಗ್ರಹಾರ ಜೈಲಿನಲ್ಲಿ ನ್ಯಾಯಾಂಗ ಬಂಧನದಲ್ಲಿ ಇಡಲಾಯಿತು. ಪತ್ನಿ ವಿಜಯಲಕ್ಷ್ಮಿ ಮೇಲೆ 2011ರಲ್ಲಿ ಹಲ್ಲೆ ಮಾಡಿದ್ದಾಗ 13 ವರ್ಷಗಳ ಹಿಂದೆ ಜೈಲು ಸೇರಿದ್ದರು. ಈಗ ಕೊಲೆ ಕೇಸಲ್ಲಿ ದರ್ಶನ್, ಪವಿತ್ರಾಗೌಡ ಸೇರಿದಂತೆ ಪ್ರಕರಣದ 17 ಜನ ಸೆಂಟ್ರಲ್ ಜೈಲಿನಲ್ಲಿ ನ್ಯಾಯಾಂಗ ಬಂಧನದಲ್ಲಿದ್ದಾರೆ.

ಶನಿವಾರ ಮಧ್ಯಾಹ್ನ ಮಲ್ಲತಹಳ್ಳಿಯ ಸರ್ಕಾರಿ ಆಸ್ಪತ್ರೆ ವೈದ್ಯರನ್ನು ಕರೆತಂದು ಅನ್ನಪೂರ್ಣೇಶ್ವರಿ ನಗರ ಠಾಣೆಯಲ್ಲೇ ದರ್ಶನ್, ಪ್ರದೋಶ್, ವಿನಯ್, ಧನರಾಜ್‌ಗೆ ಮೆಡಿಕಲ್ ಟೆಸ್ಟ್ ಮಾಡಿಸಲಾಯಿತು. ಬಳಿಕ 4 ಗಂಟೆ ಸುಮಾರಿಗೆ ಕೋರ್ಟ್‌ಗೆ ಹಾಜರು ಪಡಿಸಲಾಯಿತು. ಈ ವೇಳೆ, ಎಲ್ಲಾ ಆರೋಪಿಗಳು ಒಟ್ಟಿಗೆ ಇದ್ದರೆ ಗಲಾಟೆ ಮಾಡಿಕೊಳ್ಳುವ, ಒಳಸಂಚು ಮಾಡುವ, ಸಾಕ್ಷ್ಯ ನಾಶ ಮಾಡುವ ಸಾಧ್ಯತೆ ಇದೆ ಅಂತ ಕೋರ್ಟ್‌ಗೆ ಪೊಲೀಸರು ಮನವಿ ಮಾಡಿದರು. ಇದಕ್ಕೆ ದರ್ಶನ್ ಗ್ಯಾಂಗ್ ಪರ ವಕೀಲರು ಆಕ್ಷೇಪಿಸಿದರು. ಆದರೆ, ಸೋಮವಾರ ಈ ಬಗ್ಗೆ ತೀರ್ಮಾನ ಮಾಡೋದಾಗಿ ಜಡ್ಜ್ ಹೇಳಿದರು. ಬಳಿಕ, ದರ್ಶನ್ ಸೇರಿ ನಾಲ್ವರು ಆರೋಪಿಗಳನ್ನು ಪೊಲೀಸರು ಬಿಗಿಭದ್ರತೆಯಲ್ಲಿ ಸೆಂಟ್ರಲ್ ಜೈಲಿಗೆ ರವಾನಿಸಿದರು. ದರ್ಶನ್‌ಗೆ ಖೈದಿ ನಂಬರ್ 6109 ಕೊಡಲಾಗಿದೆ.

## ಸೂರಜ್ ರೇವಣ್ಣ ಬಂಧನ ಕೇಸ್; ಇವೆಲ್ಲ ವಿಚಿತ್ರ ವಿಕೃತ

ಅವರಿಗೂ ಏನು ಅನ್ನಿಸುತ್ತಿಲ್ಲವಲ್ಲ, ಅವರು ಆತ್ಮಾವಲೋಕನ ಮಾಡಿಕೊಳ್ಳುತ್ತಿಲ್ಲ ಎಂದು ಕಿಡಿ ಕಾರಿದ್ದಾರೆ. ನಾವು ಜವಾಬ್ದಾರಿ ಕುಟುಂಬದಿಂದ ಬಂದಿರೋದು, ಈ ಪ್ರಕರಣದ ಕುರಿತು ದೊಡ್ಡ ಮನೆ, ದೊಡ್ಡ ಕುಟುಂಬದವರಿಗೆ ನೀವು ಕೇಳಬೇಕು. ಈ ಕಳಂಕ ಅಳಿಸೋವರೆಗೂ ಅಧಿಕಾರ ಬಿಟ್ಟಿರುತ್ತೇವೆ ಅಂತನಾದರೂ ಹೇಳ್ತಾರಾ? ಕುಮಾರಸ್ವಾಮಿ, ದೇವೇಗೌಡ, ರೇವಣ್ಣ ಅವರ ಬಗ್ಗೆ ನಾನು ಮಾತನಾಡೋದಿಲ್ಲ. ಅವರ ಆತ್ಮಸಾಕ್ಷಿಗೆ ತಿಳಿದಂತೆ ಅವರು ಕೆಲಸ ಮಾಡಬೇಕು. ಆದ್ರೆ ಬಿಜೆಪಿಯವರ ಸ್ಮಶಾನ ಮೌನ ಯಾಕೆ ಅಂತಾ ಗೊತ್ತಾಗ್ತಿಲ್ಲ. ಉಳಿದ ಸಮಯದಲ್ಲಿ ನ್ಯಾಯದ ಬಗ್ಗೆ ಮಾತಾಡುವ ಬಿಜೆಪಿಯವರು ಇವಾಗ ಮೌನ ಯಾಕೆ? ಸಂವಿಧಾನ ಉಲ್ಲಂಘನೆ , ಕಾನೂನು ಉಲ್ಲಂಘನೆ ಆದಾಗ ಮಾತಾಡೋದಿಲ್ಲ ಎಂದು ಕುಟುಕಿದ್ದಾರೆ. ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಹಾಸನದ ಸೆನ್ ಠಾಣೆ ಪೊಲೀಸರು ಸೂರಜ್ ರೇವಣ್ಣ ಅವರನ್ನ ಬಂಧಿಸಿದ್ದಾರೆ. ಸದ್ಯ ಅವರನ್ನ ಬೆಂಗಳೂರಿಗೆ ಕರೆತರಲಾಗಿದೆ. ಮೆಡಿಕಲ್ ಟೆಸ್ಟ್ ಮುಗಿದ ನಂತರ ಸಂಜೆ 4 ಗಂಟೆ ವೇಳೆಗೆ ಜಡ್ಜ್ ಮುಂದೆ ಹಾಜರುಪಡಿಸಲಿದ್ದಾರೆ.

# ತಂಬಾಕು ನಿಷೇಧಕ್ಕೆ ಸಂಕಲ್ಪ ಮಾಡಿ

**ಹುಳಿಯಾರು:** ತಂಬಾಕು ಉತ್ಪನ್ನ ಮತ್ತು ಮಾದಕ ವಸ್ತುಗಳನ್ನು ಬಳಸದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕೆಲಸವನ್ನು ವಿದ್ಯಾರ್ಥಿಗಳು ಮಾಡಬೇಕು. ಸ್ವಾಸ್ಥ್ಯ ಸಮಾಜದ ನಿರ್ಮಾಣಕ್ಕಾಗಿ ಎಲ್ಲರೂ ಸಂಕಲ್ಪ ಮಾಡಿ ಎಂದು ಶಿಕ್ಷಕ ಶ್ಯಾಮಸುಂದರ್ ತಿಳಿಸಿದರು.

ಹುಳಿಯರಿನ ವಾಸವಿ ವಿದ್ಯಾ ಸಂಸ್ಥೆಯಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಆಯೋಜಿಸಿದ್ದ ತಂಬಾಕು ಉತ್ಪನ್ನಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತು ಅರಿವು ಕಾರ್ಯಕ್ರಮಕದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ತಂಬಾಕು ಉತ್ಪನ್ನಗಳ ಬಳಕೆಯಿಂದ ಆರೋಗ್ಯ ಮೇಲೆ ನಾನಾ ದುಷ್ಪರಿಣಾಮ ಉಂಟಾಗುತ್ತದೆ. ಬಾಯಿ ಕ್ಯಾನ್ಸರ್, ಶ್ವಾಸಕೋಶದ ಕ್ಯಾನ್ಸರ್, ಧ್ವನಿ ಪೆಟ್ಟಿಗೆ ಕ್ಯಾನ್ಸರ್, ಅನ್ನನಾಳದ ಕ್ಯಾನ್ಸರ್ ಬರುತ್ತದೆ. ವೈಯಕ್ತಿಯ ಆರೋಗ್ಯ ಹಾಗೂ ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಎಲ್ಲರೂ ತಂಬಾಕು ಬಳಸಬಾರದು ಎಂದರು.

ಧರ್ಮಸ್ಥಳ ಯೋಜನೆಯ ಯೋಜನಾಧಿಕಾರಿಗಳಾದ ರಾಮಚಂದ್ರ ಮಾತನಾಡಿ ತಂಬಾಕು ಉತ್ಪನ್ನಗಳ ಪ್ರತ್ಯಕ್ಷ ಅಥವಾ ಪರೋಕ್ಷ ಜಾಹಿರಾತನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. 18 ವರ್ಷದೊಳಗಿನ ಮಕ್ಕಳಿಂದ ಮತ್ತು ಮಕ್ಕಳಿಗೆ ತಂಬಾಕು ಉತ್ಪನ್ನಗಳ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಅಲ್ಲದೆ ಶೈಕ್ಷಣಿಕ ಸಂಸ್ಥೆಗಳ 100 ಗಜ ಅಂತರದಲ್ಲಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದು ತಿಳಿಸಿದರು.

ವಾಸವಿ ಶಾಲೆಯ ಮುಖ್ಯಶಿಕ್ಷಕ ಗಂಗಾಧರ್, ವಲಯದ ಮೇಲ್ವಿಚಾರಕರಾದ ಚೈತ್ರ, ಸೇವಾಪ್ರತಿನಿಧಿ ಗಂಗಾ, ವಿಜಯ ಹಾಗೂ ವಿದ್ಯಾರ್ಥಿಗಳಿಗೆ ಹಾಜರಿದ್ದರು.



# ಮರಗಿಡಗಳಿಂದ ತಾಪಮಾನ ಸಮತೋಲನ

**ಹುಳಿಯಾರು:** ಏರುತ್ತಿರುವ ತಾಪಮಾನವನ್ನು ಸಮತೋಲನದಲ್ಲಿ ಕಾಡಿಕೊಳ್ಳಲು ಮರಗಿಡಗಳು ಹೆಚ್ಚಾಗಬೇಕಿದೆ. ಹಾಗಾಗಿ ರಸ್ತೆ ಬದಿ, ಹೊಲತೋಟದ ಬದು ಸೇರಿದಂತೆ ಎಲ್ಲೆಲ್ಲಿ ಮರಗಿಡಗಳನ್ನು ಬೆಳೆಸಲು ಸಾಧ್ಯವೋ ಅಲೆಲ್ಲಾ ಬೆಳಸುವಂತೆ ದಸೂಡಿ ಗ್ರಾಪಂ ಸದಸ್ಯರು ಹಾಗು ಲೇಖಕರಾದ ಕೆ.ಮರಿಯಪ್ಪ ಕರೆ ನೀಡಿದರು.

ಹುಳಿಯಾರು ಹೋಬಳಿಯ ದಸೂಡಿ ಗ್ರಾಮ ಪಂಚಾಯ್ತಿಯಿಂದ ಆಯೋಜಿಸಿದ್ದ ಹಸಿರು ಗ್ರಾಮ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಗತ್ತಿನಲ್ಲಿ ಮಾನವ ಅಭಿವೃದ್ಧಿ ಹೆಸರಿನಲ್ಲಿ ಪರಿಸರವನ್ನು ನಾಶ ಮಾಡುತ್ತಿದ್ದಾನೆ. ಇದರಿಂದ ಪ್ರಾಣಿಗಳ ಜೀವ ರಕ್ಷಣೆಗೆ ಹಾನಿ ಉಂಟಾಗುತ್ತಿದೆ. ಜಲಮಾಲಿನ್ಯ, ವಾಯುಮಾಲಿನ್ಯ, ಮಣ್ಣಿನಮಾಲಿನ್ಯ, ಅರಣ್ಯನಾಶ ಹೀಗೆ ಹತ್ತು ಹಲವು ಸಮಸ್ಸೆಗಳು ಇಂದು ಪರಿಸರದಲ್ಲಿ ಉಂಟಾಗುದೆ ಹಾಗಾಗಿ ಪರಿಸರವನ್ನು ಸಂರಕ್ಷಿಸುವ ಕರ್ತವ್ಯ ಪ್ರತಿಯೊಬ್ಬರದ್ದು ಆಗಿದೆ ಎಂದರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮುದ್ದಲಿಂಗಯ್ಯ ಮಾತನಾಡಿ ಈ ಜಗತ್ತಿನ ಪ್ರತಿಯೊಬ್ಬ ವ್ಯಕ್ತಿಯೂ ವೈಯಕ್ತಿಕವಾಗಿ ಪರಿಸರ ಪೂರಕ ಜೀವನ ಶೈಲಿಯನ್ನು ಅಳವಡಿಕೊಳ್ಳುವುದು ಅನಿವಾರ್ಯ. ಆರೋಗ್ಯ ಕಾಪಾಡಿಕೊಳ್ಳುವುದು, ಸ್ವಚ್ಛತೆ ಕಾಪಾಡುವುದು, ನೀರು, ಕಾಗದ ಮುಂತಾದ ಸಂಪನ್ಮೂಲಗಳನ್ನು ಉಳಿಸುವುದು, ಸಾವಯವ ಕೃಷಿ ಮಾಡುವುದು ಇತ್ಯಾದಿ ಕ್ರಮಗಳಿಂದ ನಾವೆಲ್ಲರೂ ಪರಿಸರ ಸಂರಕ್ಷಣೆ ಮಾಡಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಪಂಚಾಯ್ತಿ ಸದಸ್ಯರುಗಳಾದ ನಾಗರಾಜು, ಸಹಕಾರ ಸಂಘದ ಅಧ್ಯಕ್ಷ ಅಶ್ವತ್ಥಪ್ಪ, ಮುಖಂಡರಾದ ರೇಣುಕಯ್ಯ ಹಾಗೂ ಪಂಚಾಯ್ತಿ ಸಿಬ್ಬಂಧಿಗಳು ಉಪಸ್ಥಿತರಿದ್ದರು.




# ಚಿಕ್ಕನಾಯಕನಹಳ್ಳಿ ತಾಲ್ಲೂಕಿನನಲ್ಲಿ ವಿದ್ಯುತ್ ವ್ಯತ್ಯಯ

**ಹುಳಿಯಾರು:** ಕೆ.ಬಿ ಕ್ರಾಸ್ ಸ್ವೀಕರಣಾಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಜೂನ್ 20 ರ ಗುರುವಾರದಂದು ಹಮ್ಮಿಕೊಂಡಿರುವುದರಿಂದ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆ ವರೆಗೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಚಿಕ್ಕನಾಯಕನಹಳ್ಳಿ, ಹುಳಿಯಾರು, ತಿಮ್ಮನಹಳ್ಳಿ, ಕಾತ್ರಿಕೆಹಾಲ್, ಶೆಟ್ಟೀಕೆರೆ, ಹಂದನಕೆರೆ, ಹಾಗೂ ದೊಡ್ಡೆಣ್ಣೇಗೆರೆ ಉಪಸ್ಥಾವರದಿಂದ ವಿದ್ಯುತ್ ಸರಬರಾಜಾಗುವ ಎಲ್ಲಾ ನಿರಂತರ ಜ್ಯೋತಿ ಮತ್ತು ಐಪಿ 11 ಕೆವಿ ಪೂರಕಗಳಿಗೆ ವಿದ್ಯುತ್ ಸರಬರಾಜು ಇರುವುದಿಲ್ಲ. ಗ್ರಾಹಕರು ಎಂದಿನಂತೆ ಬೆವಿಕಂನೊಂದಿಗೆ ಸಹಕರಿಸಲು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಎನ್.ಬಿ. ಗವಿರಂಗಯ್ಯ ತಿಳಿಸಿದ್ದಾರೆ.

# ಶಿಸ್ತಿಲ್ಲದ ಜೀವನ ವ್ಯರ್ಥ: ಶಿಕ್ಷಣ ತಜ್ಞ ಚೇತನ್‌ರಾಮ್ ಅಭಿಮತ

**ಮೈಸೂರು:** ನಗರದ ಕೃಷ್ಣಮೂರ್ತಿಪುರಂನಲ್ಲಿರುವ ಶಾರದಾ ವಿಲಾಸ ಪದವಿ ಪೂರ್ವ ಕಾಲೇಜಿನಲ್ಲಿ ಇಂದು (ಜೂ.21) ವಿದ್ಯಾರ್ಥಿ ವೇದಿಕೆ ಉದ್ಘಾಟನಾ ಸಮಾರಂಭ ಹಾಗೂ ಪ್ರತಿಭಾ ಪುರಸ್ಕಾರವನ್ನು ಆಯೋಜಿಸಲಾಗಿತ್ತು. ಜ್ಯೋತಿ ಬೆಳಗಿಸಿ ಮಾತನಾಡಿದ ಶಿಕ್ಷಣ ತಜ್ಞ ಚೇತನ್‌ರಾಮ್ ಆರ್.ಎ. ಅವರು ಮಾತನಾಡಿ, ಶಿಸ್ತಿಲ್ಲದ ಜೀವನ ವ್ಯರ್ಥ, ಏಕೆಂದರೆ ಅಧ್ಯಯನದಲ್ಲಿ ಶಿಸ್ತಿಲ್ಲದಿದ್ದರೆ ಓದು ಗೊಂದಲವಾಗುತ್ತದೆ. ಹಾಗೂ ಶಿಸ್ತಿಲ್ಲದ ಜೀವನ ನಾವಿಕನಿಲ್ಲದ ಹಡಗಿನಂತಾಗುತ್ತದೆ. ಆದ್ದರಿಂದ ವಿದ್ಯಾರ್ಥಿಗಳು ಏಕಾಗ್ರತೆಯನ್ನು ಬೆಳೆಸಿಕೊಂಡು, ಸಮಯ ಪರಿಪಾಲನೆಯೊಂದಿಗೆ ಶಿಸ್ತಿನಿಂದ ಓದಿನಲ್ಲಿ ಹೆಚ್ಚಿನ ಆಸಕ್ತಿಯನ್ನು ಹೊಂದಬೇಕೆಂದು ಕರೆ ನೀಡಿದರು. ಜಗತ್ತಿನಲ್ಲಿ ಪ್ರತಿಭಾವಂತರಲ್ಲದವರು ಇಲ್ಲವೇ ಇಲ್ಲ. ಎಲ್ಲರಲ್ಲಿಯೂ ಒಂದಲ್ಲಾ ಒಂದು ರೀತಿಯ ಪ್ರತಿಭೆ ಇದ್ದೇ ಇರುತ್ತದೆ. ಅದನ್ನು ಗುರುತಿಸುವ ಜವಾಬ್ದಾರಿ ಶಾಲಾ-ಕಾಲೇಜಿನ ಶಿಕ್ಷಕರ ಮೇಲೆ ಇದೆ. ಶಿಕ್ಷಕರಾದವರಿಗೆ ಬೋಧನೆಯೊಂದೇ ಮುಖ್ಯವಲ್ಲ. ವಿದ್ಯಾರ್ಥಿಗಳ ಮನಸ್ಸನ್ನು ಗೆಲ್ಲಬೇಕು. ಆನಂತರ ಪಾಠ, ಪ್ರವಚನವನ್ನು ಮಾಡಿ ಜೀವನ ಮೌಲ್ಯಗಳೊಂದಿಗೆ ಬದುಕನ್ನು ಕಟ್ಟಿಕೊಳ್ಳಲು ಮಾರ್ಗದರ್ಶನ ನೀಡುವುದೇ ಅವರ ಜವಾಬ್ದಾರಿ ಆಗಿರುತ್ತದೆ. ಆದ್ದರಿಂದ ಗುರುಗಳು ವಿದ್ಯಾರ್ಥಿಗಳ ಸರ್ವತೋಮುಖ ಏಳಿಗೆಯತ್ತ ಗಮನ ಹರಿಸಬೇಕೆಂದು ಕಿವಿಮಾತು ಹೇಳಿದರು. ಪ್ರೋತ್ಸಾಹ ಶಿಕ್ಷಕರದ್ದಾಗಿದ್ದರೆ, ಉತ್ಸಾಹ ವಿದ್ಯಾರ್ಥಿಗಳಲ್ಲಿರಬೇಕು. ಆಗ ಮಾತ್ರ ಆಸಕ್ತಿಯಿಂದ ವಿದ್ಯಾರ್ಥಿ ಓದಿನಲ್ಲಿ ತೊಡಗಲು ಸಾಧ್ಯವಾಗುತ್ತದೆ. ಇದಕ್ಕೆ ಸುತ್ತಮುತ್ತಲಿನ ವಾತಾವರಣವೂ ಕೂಡ ಸಹಕಾರಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.



ವೇದಿಕೆಯಲ್ಲಿ ವಿಶೇಷ ಆಹ್ವಾನಿತರಾಗಿ ಆಗಮಿಸಿದ್ದ ಸಂಸ್ಥೆಯ ಗೌರವ ಕಾರ್ಯದರ್ಶಿ ಎನ್.ಚಂದ್ರಶೇಖರ್ ಅವರು ಮಾತನಾಡಿ, ಇಂದು ಅಂತರರಾಷ್ಟ್ರೀಯ ಯೋಗ ಹಾಗೂ ಸಂಗೀತ ದಿನವನ್ನು ಬಹಳ ಅರ್ಥಪೂರ್ಣವಾಗಿ ಆಚರಿಸುತ್ತಿದ್ದೇವೆ. ವಿದ್ಯಾರ್ಥಿಗಳು ಪ್ರತಿ ನಿತ್ಯವೂ ಯೋಗ, ಧ್ಯಾನದಲ್ಲಿ ಒಂದು ಗಂಟೆಯಾದರೂ ತೊಡಗಿಸಿಕೊಂಡರೆ ಓದಿನಲ್ಲಿ ಹೆಚ್ಚು ಹೆಚ್ಚು ಮನಸ್ಸು, ಏಕಾಗ್ರತೆ ಹಾಗೂ ನೆನಪಿನ ಶಕ್ತಿ ವೃದ್ಧಿಸುತ್ತದೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜಿನ ಪ್ರಾಂಶುಪಾಲರಾದ ಸಿ.ಕೆ.ಅಶೋಕಕುಮಾರ್ ಅವರು, ವಿದ್ಯಾರ್ಥಿಗಳಲ್ಲಿ ಪರಿಶ್ರಮವೊಂದಿದ್ದರೆ ಯಶಸ್ಸು ತಾನಾಗಿಯೆ ಬರುತ್ತದೆ. ಆತ್ಮವಿಶ್ವಾಸ ಮತ್ತು ಸಮಯಪ್ರಜ್ಞೆ ಹಾಗೂ ದೃಢ ಸಂಕಲ್ಪ ಹೊಂದಬೇಕು. ವಿದ್ಯಾರ್ಥಿಗಳು ಓದಿನ ಕಡೆ ಗಮನ ಇದ್ದರೆ ಗುರಿಯನ್ನು ಮುಟ್ಟಬಹುದು ಎಂದು ತಿಳಿಸಿದರು. ವೇದಿಕೆಯಲ್ಲಿ ಕಳೆದ ಬಾರಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಿ, ಗೌರವಿಸಲಾಯಿತು. ಹಾಗೆಯೇ ಯೋಗ ದಿನದ ಅಂಗವಾಗಿ ಕಾಲೇಜಿನ ವಿದ್ಯಾರ್ಥಿಗಳಿಂದ ಯೋಗ ಪ್ರದರ್ಶನ ನಡೆಯಿತು. ಮುಖ್ಯ ಅತಿಥಿಗಳಾದ ಶಿಕ್ಷಣತಜ್ಞ ಚೇತನ್‌ರಾಮ್ ರವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಿ, ಗೌರವಿಸಲಾಯಿತು. ಕಾರ್ಯಕ್ರಮಕ್ಕೆ ಉಪನ್ಯಾಸಕರಾದ ರಾಜೇಂದ್ರಪ್ರಸಾದ್ ಹೊನ್ನಲಗೆರೆ ಅತಿಥಿಗಳನ್ನು ಸ್ವಾಗತಿಸಿ, ಪರಿಚಯಿಸಿದರೆ, ಉಪನ್ಯಾಸಕ ವೆಂಕಟರಾಮ್ ಜಿ. ವಂದಿಸಿದರು. ಕಾರ್ಯಕ್ರಮದ ನಿರೂಪಣೆಯನ್ನು ಆಂಗ್ಲ ವಿಭಾಗದ ಉಪನ್ಯಾಸಕರಾದ ಮನೋಜ್‌ಕುಮಾರ್ ನೆರವೇರಿಸಿದರು. ವಿದ್ಯಾರ್ಥಿ ಅಭಿರಾಂ ಪ್ರಾರ್ಥನೆ ನೆರವೇರಿಸಿದರೆ, ಉಪನ್ಯಾಸಕರಾದ ಡಾ.ಡಿ.ಸಿ.ಉಮೇಶ್ ಹಾಗೂ ಡಾ.ಪೂಜಾ ಮತ್ತು ಎಂ.ಕೆ.ರಶ್ಮಿಯವರು ಪ್ರತಿಭಾನ್ವಿತ ವಿದ್ಯಾರ್ಥಿಗಳ ಹೆಸರನ್ನು ವಾಚಿಸಿದರು. ನಂತರ ಯೋಗ ಪ್ರದರ್ಶನ ಅತ್ಯಂತ ಯಶಸ್ವಿಯಾಗಿ ನೆರವೇರಿತು.

## ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ

**ಚಾಮರಾಜನಗರ:** ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಖಂಡಿಸಿ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳುಚಾಮರಾಜನಗರದಲ್ಲಿ ಪ್ರತಿಭಟನೆ ನಡೆಸಿದರು. ಚಾಮರಾಜನಗರದ ಭುವನೇಶ್ವರಿ ವೃತ್ತದಲ್ಲಿಜಮಾಯಿಸಿದ ಪ್ರತಿಭಟನಾಕಾರರು ತಮಟೆ ಚಳವಳಿನಡೆಸಿದರು. ವೃತ್ತದಲ್ಲಿ ಕೆಲಕಾಲರಸ್ತೆ ತಡೆದು ಪ್ರತಿಭಟನೆ ನಡೆಸಿದರಲ್ಲದೇ ರಾಜ್ಯ ಸರ್ಕಾರದವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕನ್ನಡ ಸೇನಾಪಡೆಯ ಅಧ್ಯಕ್ಷ ಚಾ.ರಂ. ಶ್ರೀನಿವಾಸಗೌಡ ಮಾತನಾಡಿ,ರಾಜ್ಯ ಸರ್ಕಾರ ಏಕಾಏಕಿಪೆಟ್ರೋಲ್, ಡೀಸೆಲ್ ಬೆಲೆಯನ್ನು ಏರಿಕೆ ಮಾಡಿರುವುದುಖಂಡನೀಯ. ರಾಜ್ಯ ಸರ್ಕಾರ ಒಂದು ಕಡೆ ಉಚಿತವಾಗಿಜನರಿಗೆ ಒಂದಷ್ಟು ಯೋಜನೆಗಳನ್ನು ಕೊಡುತ್ತೇವೆ ಎಂದು ಹೇಳಿಕೊಳ್ಳುತ್ತಿದೆ. ಆದರೆ,ಜನರಿಂದ ಬೇರೆ ರೂಪದಲ್ಲಿಸುಲಿಗೆ ಮಾಡುತ್ತಿರುವುದುವಿಪರ್ಯಾಸ ಎಂದರು.ರಾಜ್ಯ ಸರ್ಕಾರಕ್ಕೆ ನೈತಿಕತೆ ಇದ್ದರೆ ಏರಿಕೆ ಮಾಡಿರುವ ಪೆಟ್ರೋಲ್,ಡೀಸೆಲ್ ದರವನ್ನು ಹಿಂಪಡೆಯಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಕನ್ನಡಪರ ಸಂಘಟನೆಗಳು ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

## ಹೊಲಿಗೆ ತರಬೇತಿ ಕಾರ್ಯಕ್ರಮ

**ತಾಂಡವಪುರ:** ನಂಜನಗೂಡು ತಾಲೂಕು ಚಿಕ್ಕಯ್ಯನ ಚಕ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ತಾಂಡವಪುರ ಹಾಲು ಉತ್ಪಾದಕರ ಸಹಕಾರ ಸಂಘದ ಅವಣದಲ್ಲಿ ಮೈಸೂರಿನ ಶ್ರೀಗಂಧ ಲಯನ್ ಸಂಸ್ಥೆಯಿಂದ ಮಹಿಳೆಯರಿಗೆ ಉಚಿತ ಹೊಲಿಗೆ ತರಬೇತ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಮಾತನಾಡಿದ ಲಯನ್ ಸಂಸ್ಥೆಯ ರಾಜ್ಯಪಾಲರಾದ ಕೃಷ್ಣೆಗೌಡರು ಗ್ರಾಮೀಣ ಭಾಗದ ಮಹಿಳೆಯರಿಗೆ ಸಂಸ್ಥೆಯಿಂದ ಉಚಿತ ಹೊಲಿಗೆ ತರಬೇತಿ ಕಾರ್ಯಕ್ರಮ ಕೊಡುವ ಮೂಲಕ ಮಹಿಳೆಯರು ಸ್ವಉದ್ಯೋಗ ಮಾಡುವ ಮೂಲಕ ಮಹಿಳೆಯರು ತಮ್ಮ ಮನೆಯ ಹಾರ್ದಿಕ ಹೊಣೆಯನ್ನು ನಿಭಾಯಿಸಲು ಸಹಕಾರಿ ಅಗಲಿದ್ದು ಮಹಿಳೆಯರು ಶ್ರಮಪಟ್ಟು ತರಬೇತಿ ಪಡೆದುಕೊಂಡರೆ ಸಂತ ದುಡಿಮೆ ಮಾಡುವ ಮೂಲಕ ತಮ್ಮ ಕಾಲ ಮೇಲೆ ತಾವು ನಿಂತುಕೊಂಡು ಸಂಸಾರವನ್ನು ನಿಭಾಯಿಸಿಕೊಂಡು ಹೋಗುವ ಮೂಲಕ ಈ ಕಾರ್ಯಕ್ರಮದ ಪ್ರಯೋಜನವನ್ನು ಪಡೆದುಕೊಳ್ಳಿ ಎಂದು ಮಹಿಳೆಯರಿಗೆ ಕರೆ ನೀಡಿದರು. ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಬಿ ಶಿವಣ್ಣನವರು ಮಾತನಾಡಿ ಲಯನ್ ಸಂಸ್ಥೆಯ ಅಧ್ಯಕ್ಷರಾದ ಜ್ಯೋತಿ ಮಂಜುನಾಥ ಕನಸು ಮಹಿಳೆಯರು ಸ್ವಂತ ದುಡಿಮೆಯಲ್ಲಿ ಸಂಸಾರವನ್ನು ನಿಭಾಯಿಸಿಕೊಂಡು ಆರ್ಥಿಕವಾಗಿ ಮುಂದೆ ಬರಬೇಕು ಎಂಬುವುದು ಆಸೆಯಾಗಿದ್ದು ಆದ್ರಿಂದ ಅವರು ಗ್ರಾಮೀಣ ಭಾಗದ ಮಹಿಳೆಯರಿಗೆ ನಮ್ಮ ಸಂಸ್ಥೆಯಿಂದ ಏನಾದರೂ ಸಹಾಯ ಮಾಡಬೇಕು ಎಂಬ ಉದ್ದೇಶದಿಂದ ನಮ್ಮ ತಾಂಡವಪುರ ಗ್ರಾಪಂ ವ್ಯಾಪ್ತಿಯಲ್ಲಿ ಮಹಿಳೆಯರಿಗೆ ತರಬೇತಿ ಕೊಡಿಸುವ ಮೂಲಕ ಮಹಿಳೆಯರ ಸಬಲೀಕರಣಕ್ಕೆ ಮುಂದಾಗಿದ್ದಾರೆ ಎಂದರು.

## ಮೈಮುಲ್‌ಗೆ ಪಿ.ಬಸವನಹಳ್ಳಿ ಪ್ರಕಾಶ್ ನಾಮ ನಿರ್ದೇಶನ

**ಪಿರಿಯಾಪಟ್ಟಣ:** ಪಿರಿಯಾಪಟ್ಟಣ ತಾಲೂಕಿನ ಪಿ.ಬಸವನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ನಿರ್ದೇಶಕ



ಪಿ.ಬಸವನಹಳ್ಳಿ ಪ್ರಕಾಶ್ ರವರನ್ನು ಮೈಸೂರು ಜಿಲ್ಲಾ ಹಾಲು (ಮೈಮುಲ್) ಒಕ್ಕೂಟದ ಆಡಳಿತ ಮಂಡಳಿಗೆ ನಾಮ ನಿರ್ದೇಶನ ಮಾಡಲಾಗಿದೆ ಎಂದು ಸಹಕಾರ ಸಂಘಗಳ ನಿಬಂಧಕರಾದ ಕ್ಯಾಪ್ಟನ್ ಕೆ.ರಾಜೇಂದ್ರ, ಆದೇಶ ಮಾಡಿರುತ್ತಾರೆ. ಪಿ.ಬಸವನಹಳ್ಳಿ ಪ್ರಕಾಶ್ ರವರನ್ನು ಮೈಸೂರು ಜಿಲ್ಲಾ ಹಾಲು ಒಕ್ಕೂಟಕ್ಕೆ ನಾಮ ನಿರ್ದೇಶನ ಮಾಡಲು ಸಹಕರಿಸಿದ ಪಶುಪಾಲನಾ ಮತ್ತು ರೇಷ್ಮೆ ಖಾತೆ ಸಚಿವ ಕೆ.ವೆಂಕಟೇಶ್ ಹಾಗೂ ಆಶ್ರಯ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

## ರಸ್ತೆ ಅಪಘಾತಕ್ಕೆ ಯುವಕನೋರ್ವ ಬಲಿ

**ಚಾಮರಾಜನಗರ:** ನಗರದ ಜಾಲಹಳ್ಳಿಹುಂಡಿ ಗ್ರಾಮದ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಮಂಗಳವಾರ ರಾತ್ರಿ ನಡೆದ ರಸ್ತೆ ಅಪಘಾತದಲ್ಲಿ ಯುವಕನೋರ್ವ ಮೃತಪಟ್ಟಿರುವ ಘಟನೆ ನಡೆದಿದೆ. ಚಾಮರಾಜನಗರದ 17ನೇ ವಾರ್ಡ್ ಉಪ್ಪಾರ ಬೀದಿಯ ನಿವಾಸಿ, ಪ್ರಸ್ತುತ ಜಾಲಹಳ್ಳಿಹುಂಡಿಯಲ್ಲಿ ವಾಸವಾಗಿದ್ದ ಕೃಷ್ಣ ಎಂಬುವವರ ಪುತ್ರ ಮೋಹನ್ (27) ಮೃತ ಯುವಕ. ಈತ ಮಂಗಳವಾರ ರಾತ್ರಿ 9 ಗಂಟೆ ಸಮಯದಲ್ಲಿ



ಚಾಮರಾಜನಗರದ ಜಿಮ್ ವೊಂದರಲ್ಲಿ ವರ್ಕೌಟ್ ಮುಗಿಸಿ ಸ್ನೇಹಿತ ಮನೋಹರ್ ಬೈಕ್‌ನಲ್ಲಿ ಜಾಲಹಳ್ಳಿಹುಂಡಿಗೆ ತೆರಳಿದ್ದಾನೆ. ಈ ವೇಳೆ ಗ್ರಾಮದ ಕಡೆ ಬೈಕ್ ಕ್ರಾಸ್ ಮಾಡುವ ಸಂದರ್ಭದಲ್ಲಿ ಚಾಮರಾಜನಗರ ಕಡೆಯಿಂದ ಬಂದ ಮತ್ತೊಂದು ಬೈಕ್ ಡಿಕ್ಕಿ ಹೊಡೆದಿದೆ. ಪರಿಣಾಮ ಹಿಂಬದಿಯಲ್ಲಿ ಕುಳಿತಿದ್ದ ಮೋಹನ್ ಕೆಳಗೆ ಬಿದ್ದು ತೀವ್ರ ರಕ್ತಸ್ರಾವವಾಗಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾನೆ. ಬೈಕ್ ಓಡಿಸುತ್ತಿದ್ದ ಮನೋ ಹರ್ ಹಾಗೂ ಮತ್ತೊಂದು ಬೈಕ್‌ನ ರಾಮಸಮುದ್ರದ ಮಹೇಶ್ ಎಂಬುವವರಿಗೂ ಗಾಯಗಳಾಗಿದ್ದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಚಾಮರಾಜನಗರ ಸಂಚಾರ ಠಾಣೆ ಪೊಲೀಸರು ಮೋಹನ್ ಮೃತದೇಹವನ್ನು ಸಿಮ್ಸ್ ಬೋಧನಾ ಆಸ್ಪತ್ರೆಗೆರವಾನಿಸಿ ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಒಪ್ಪಿಸಲಾಯಿತು. ಈ ಸಂಬಂಧ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಖಾಸಗಿ ಬಡಾವಣೆ ನಗರಸಭೆಗೆ ಹಸ್ತಾಂತರ



**ಮೈಸೂರು:** ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರವಾಗಿರುವ ಖಾಸಗಿ ಬಡಾವಣೆಗಳನ್ನು ಆಯಾ ವ್ಯಾಪ್ತಿಯ ನಗರ ಸಭೆ ಮತ್ತು ಪಟ್ಟಣ ಪಂಚಾಯ್ತಿಗಳಿಗೆ ಹಸ್ತಾಂತರಿಸಲು ಕ್ರಮಕೈಗೊಳ್ಳಲಾಗುವುದು ಎಂದು ಮುಡಾ ಅಧ್ಯಕ್ಷ ಕೆ.ಮರೀಗೌಡ ತಿಳಿಸಿದರು.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಜಿ.ಟಿ.ದಿನೇಶ್‌ಕುಮಾರ್ ನೇತೃತ್ವದ ಅಧಿಕಾರಿಗಳ ತಂಡದೊಂದಿಗೆ ಸೋಮನಾಥನಗರ, ಆರ್.ಟಿ.ನಗರ, ಸಿದ್ದರಾಮಯ್ಯ ಬಡಾವಣೆ, ಐಶ್ವರ್ಯನಗರ, ಎಸ್.ಬಿ.ಎಂ ಲೇಔಟ್, ಚಾಮುಂಡಿಬೆಟ್ಟದ ಬಳಿ ಇರುವ ವಿದ್ಯುತ್ ಚಿತಾಗಾರವನ್ನು ಪರಿಶೀಲಿಸಿ ಮಾತನಾಡಿದ ಅವರು, ಸೋಮನಾಥನಗರಕ್ಕೆ ಒಳಚರಂಡಿ ವ್ಯವಸ್ಥೆ ಮತ್ತು ಸೆಪ್ಟಿಕ್ ಟ್ಯಾಂಕ್ ನಿರ್ಮಾಣ ಮಾಡಲು ಕ್ರಮವಹಿಸಲಾಗುವುದು. ಕೇರ್ಗಳ್ಳಿ ಕೆರೆಯಿಂದ ಬರುವ ನೀರು ಹರಿದು ಹೋಗಲು ಚರಂಡಿ ನಿರ್ಮಿಸಲಾಗುವುದು. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸೂಚನೆ ಮೇರೆಗೆ ಲಿಂಗಾಬುದಿಪಾಳ್ಯದ ಸಿದ್ದರಾಮಯ್ಯ ಬಡಾವಣೆಗೆ ಒಳಚರಂಡಿ, ಕುಡಿಯುವ ನೀರು ಒದಗಿಸುವುದರೊಂದಿಗೆ ಸಂಪೂರ್ಣ ಅಭಿವೃದ್ಧಿಪಡಿಸಲಾಗುವುದು. ಆರ್.ಟಿ. ನಗರದಲ್ಲಿ ನಿಜವಾದ ಭೂ ಮಾಲೀಕನಿಗೆ ತಲುಪಬೇಕಾದ ಹಣವನ್ನು ತಲುಪಿಸಲು ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು. ಜನಸ್ಪಂದನಾ ಕಾರ್ಯಕ್ರಮದಲ್ಲಿ ಎಸ್‌ಬಿಎಂ ಲೇಔಟ್‌ನ 36 ಮನೆಗಳಿಗೆ ತಿರುಗಾಡಲು ರಸ್ತೆ ಇಲ್ಲದೇ ತೊಂದರೆಯಾಗಿದೆ ಎಂದು ದೂರು ಬಂದಿದ್ದು, ಅಧಿಕಾರಿಗಳು ಕಾಂಪೌಂಡ್ ಹಾಕಲು ಮುಂದಾಗಿರುವ ವ್ಯಕ್ತಿಗೆ ನೋಟೀಸ್ ನೀಡಿ ಸಾರ್ವಜನಿಕರಿಗೆ ರಸ್ತೆ ನಿರ್ಮಾಣ ಮಾಡಿಕೊಡಲು ಸೂಚಿಸಲಾಯಿತು.

ಶಾಸಕ ಟಿ.ಎಸ್.ಶ್ರೀವತ್ಸ ಸೂಚನೆ ಮೇರೆಗೆ ಐಶ್ವರ್ಯ ಬಡಾವಣೆಯಲ್ಲಿ ಒಳಚರಂಡಿ ನೀರು ಮುಂದೆ ಹೋಗಲು ತೊಂದರೆಯಾಗಿದ್ದು ಭೂಮಾಲೀಕರೊಂದಿಗೆ ಮಾತನಾಡಿ ಚೆನ್ನಾರೆಡ್ಡಿ ಜಮೀನಿನವರೆಗೆ ಒಳಚರಂಡಿ ಮಾಡಲು ಸೂಚಿಸಲಾಯಿತು. ನಾಯ್ಡು ಸ್ಟೋರ್‌ನಿಂದ ಜೋಡಿ ರಸ್ತೆ ಮಾಡಲು ಕ್ರಮಕೈಗೊಳ್ಳಲಾಗುವುದು, ಜೆ.ಪಿ.ನಗರ ಗೊಬ್ಬಳಿಮರ ಸರ್ಕಲ್ ನಿಂದ ದಕ್ಷಿಣಕ್ಕೆ ಹೋಗುವ ರಸ್ತೆಯಲ್ಲಿ ಸಾರ್ವಜನಿಕರಿಗೆ ತೊಂದರೆಯಾಗಿದ್ದು ಖಾಸಗಿ ವ್ಯಕ್ತಿಗೆ ಬದಲಿ ನಿವೇಶನ ನೀಡಿ ಸಮಸ್ಯೆ ಪರಿಹರಿಸಲು ತಿಳಿಸಲಾಯಿತು ಎಂದ ಅವರು, ಖಾಸಗಿ ಬಡಾವಣೆಗಳಲ್ಲಿ ವಾಸಿಸುವ ಜನರಿಗೆ ಇತ್ತ ಖಾಸಗಿ ಬಡಾವಣೆ ನಿರ್ಮಿಸಿದವರು ಸಾರ್ವಜನಿಕರಿಗೆ ಮೂಲ ಸೌಕರ್ಯ ಸರಿಯಾಗಿ ನೀಡಿಲ್ಲ, ಪಟ್ಟಣ ಪಂಚಾಯಿತಿ ನಗರಸಭೆಯವರೂ ಸಮಸ್ಯೆ ಪರಿಹರಿಸದೇ ತೊಂದರೆಯಾಗಿರುವುದರಿಂದ ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಗಮನಕ್ಕೆ ತಂದು ಎಲ್ಲಾ ಸಮಸ್ಯೆಗಳನ್ನು ಹಂತ ಹಂತವಾಗಿ ಪರಿಹರಿಸಲಾಗುವುದು ಎಂದ ಅವರು ಮುಂದಿನ ದಿನಗಳಲ್ಲಿ ಮುಡಾದಲ್ಲಿ ಜನಸ್ಪಂದನಾ ಕಾರ್ಯಕ್ರಮವನ್ನು ನಡೆಸಲಾಗುವುದು ಎಂದರು.

# ಮೂಲ ರೂಪದಲ್ಲೇ ಯೋಗ ಅನುಸರಣೆಯಾಗಲಿ: ಸಂಸದ



**ಮೈಸೂರು:** ಭಾರತೀಯರಾಗಿ ನಾವು ನಮ್ಮ ಗುರು ಪರಂಪರೆ ನೀಡಿರುವ ರೀತಿಯಲ್ಲಿಯೇ ಯೋಗವನ್ನು ಅನುಸರಿಸಬೇಕಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದ್ದಾರೆ.

ಓದುಗ ಪ್ರಕಾಶನ, ಮೈಸೂರು ಕಲ್ಚರಲ್ ಅಸೋಸಿಯೇಷನ್, ಭಾರತೀ ಯೋಗಧಾಮ ಸಹಯೋಗದಲ್ಲಿ ಶುಕ್ರವಾರ ಮೈಸೂರಿನ ಉತ್ತನಹಳ್ಳಿಯ ವಿಜಯಗಿರಿಯಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ನಡೆದ ವಿಜಯ ಕರ್ನಾಟಕ ಸ್ಥಾನಿಕ ಸಂಪಾದಕ ಐತಿಚಂಡ ರಮೇಶ್ ಉತ್ತಪ್ಪ ಅವರ ಯೋಗ ಸಂಗೀತ, ಮೈಸೂರು ಪರಂಪರೆ ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿದರು.

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಸಂಗೀತ ಮತ್ತು ಯೋಗಕ್ಕೆ ತನ್ನದೇ ಆದ ಪರಂಪರೆ ಇದೆ. ಮುಮ್ಮಡಿ ಕೃಷ್ಣರಾಜ ಒಡೆಯರ್ ಅವರು 108 ಯೋಗಾಸನಗಳನ್ನು ಪ್ರದರ್ಶಿಸುತ್ತಿದ್ದರು. ಅದೇ ರೀತಿ ಮೈಸೂರಿನ ಯೋಗ ಗುರು ತಿರುಮಲೈ ಕೃಷ್ಣಮಾಚಾರ್ ದೇಶದಾದ್ಯಂತ ಯೋಗ ಪಸರಿಸಿದರು. ಮೂರು ಸಾವಿರಕ್ಕೂ ಹೆಚ್ಚು ಆಸನಗಳನ್ನು ಪರಿಚಯಿಸಿದರು. ಯೋಗದಲ್ಲಿ ದೇಹವನ್ನು ಸಹಜ ಸ್ಥಿತಿಯಿಂದ ಕ್ರಿಯಾಶೀಲತೆಗೆ ಹೇಗೆ ತೆಗೆದುಕೊಂಡು ಹೋಗಬೇಕೆಂಬುದನ್ನು ಹೇಳಿಕೊಟ್ಟಿದ್ದಾರೆ. ಮಾತ್ರವಲ್ಲದೇ ನಾವೆಲ್ಲರೂ ಭಾರತೀಯರಾಗಿ ಗುರು ಪರಂಪರೆ ನೀಡಿರುವ ರೀತಿಯಲ್ಲಿಯೇ ಯೋಗವನ್ನು ಉಳಿಸಿ ಬೆಳೆಸಿಕೊಂಡು ಹೋಗಬೇಕಿದೆ, ಎಂದರು.

ಯದುವೀರ್ ಅವರು ರವೀಂದ್ರ ಹೆಗ್ಡೆ ಅವರು ಚಿತ್ರಿಸಿದ ತಮ್ಮದೇ ಕಲಾಕೃತಿಯನ್ನು ಸ್ವೀಕರಿಸಿದರು. ಬಳಿಕ ಪ್ರಕಾಶ್ ಚಿಕ್ಕಪಾಳ್ಯ ಅವರ ಓದುಗ ಪ್ರಕಾಶನ ಸಂಸ್ಥೆಯ ಲೋಗೋ ಬಿಡುಗಡೆಗೊಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಭಾರತೀಯ ಯೋಗಧಾಮ ಸಂಸ್ಥಾಪಕ ಡಾ.ಕೆ.ಎಲ್. ಶಂಕರನಾರಾಯಣ ಜೋಯ್ಸ್ ಮಾತನಾಡಿ, ಇತ್ತೀಚೆಗೆ ಯೋಗ ಪ್ರವರ್ಧಮಾನಕ್ಕೆ ಬಂದಿರುವುದು ಶ್ಲಾಘನೀಯ ವಿಚಾರವಾಗಿದೆ. ಆದರೆ, ಮೈಸೂರಿನಿಂದ ವಿಶ್ವಕ್ಕೆ ಕೊಡುಗೆಯಾಗಿ ನೀಡಿದ ಯೋಗವನ್ನು ಮೂಲ ಸ್ಥಿತಿಯಲ್ಲಿಯೇ ಉಳಿಸಿಕೊಳ್ಳಬೇಕಾದ ಅನಿವಾರ್ಯತೆ ಇದೆ. ಏಕೆಂದರೆ ವಿದೇಶದಲ್ಲಿ ಬಳಕೆಯಾಗುತ್ತಿರುವ ಯೋಗಾಸನಗಳನ್ನು ಗಮನಿಸಿದರೆ ಇದು ನಮ್ಮ ಕೊಡುಗೆಯೇ ಎಂಬ ಅನುಮಾನ ಬರುತ್ತದೆ. ಹಾಗಾಗಿ ಯೋಗವನ್ನು ರೂಪಾಂತರಗೊಳಿಸದೆ ಹಿರಿಯರಿಂದ ಬಳುವಳಿಯಾಗಿ ಬಂದಿರುವ ರೀತಿಯಲ್ಲಿಯೇ ಅದರ ಪರಂಪರೆಯನ್ನು ಮುಂದುವರಿಸಬೇಕು, ಎಂದು ಸಲಹೆ ನೀಡಿದರು.

ಕೇವಲ ಆಸನಗಳನ್ನು ಮಾಡುವುದು ಯೋಗವಲ್ಲ. ಸಮಚಿತ್ತದಿಂದ ಅರ್ಧ ಗಂಟೆ ಕುಳಿತುಕೊಳ್ಳುವುದೂ ಆಸನಕ್ಕಿಂತ ಮಿಗಿಲಾದ ಸ್ಥಿತಿಯಾಗಿದೆ. ಕನಸಿನ ಸ್ಥಿತಿ, ಗಾಢವಾದ ನಿದ್ರೆಯನ್ನು ಪ್ರಚೋದಿಸುತ್ತದೆ. ಈ ರೀತಿಯ ಎಲ್ಲಾ ವಿಷಯವನ್ನು ಒಳಗೊಂಡ ಸಮಗ್ರವಾದ ಯೋಗವನ್ನು ಮಕ್ಕಳಿಗೆ ಹೇಳಿಕೊಡಬೇಕಿದೆ, ಎಂದರು.

ಲಕ್ಷ ವೃಕ್ಷ ಆಂದೋಲನದ ರೂವಾರಿ ಎಚ್.ವಿ. ರಾಜೀವ್ ಮಾತನಾಡಿ, ಯೋಗ ಉಳಿಸಿದ್ದು ಮೈಸೂರು ಸಂಸ್ಥಾನ. ಇದರಿಂದ ಇಡೀ ವಿಶ್ವವೇ ಯೋಗವನ್ನು ಆಚರಿಸುವಂತಾಗಿದೆ. ಇದರ ಹಿಂದೆ ಸಾವಿರಾರು ಜನರ ತಪಸ್ಸು ಇದೆ ಎಂದು ಸ್ಮರಿಸಿದರು.

ಪತ್ರಕರ್ತ ಐತಿಚಂಡ ರಮೇಶ್ ಉತ್ತಪ್ಪ ಮಾತನಾಡಿ, ಯೋಗ ಪರಂಪರೆಯ ಮೂಲ ಮೈಸೂರು ಆಗಿದ್ದರೂ ಯೋಗವನ್ನು ಸಮಗ್ರವಾಗಿ ಅರ್ಥೈಸುವ ಹಾಗೂ ಅದನ್ನು ಆಚರಿಸುವವರಿಗೆ ಬೇಕಾದ ಮಾಹಿತಿ ನೀಡುವ ಸಮಗ್ರವಾದ ಪುಸ್ತಕದ ಕೊರತೆ ಇದೆ, ಎಂದರು.

# ಅಂಬೇಡ್ಕರರನ್ನು ಸಮಕಾಲೀನಗೊಳಿಸುವ ಪ್ರಯೋಗ ನಡೆದಿಲ್ಲ

**ಮೈಸೂರು:** ಬಾಬಾ ಸಾಹೇಬ್ ಬಿ.ಆರ್. ಅಂಬೇಡ್ಕರ್ ಅವರನ್ನು ಸಮಕಾಲೀನಗೊಳಿಸುವ ಮಹತ್ವದ ಪ್ರಯೋಗ ನಡೆದಿಲ್ಲ ಎಂದು ಸಂಸ್ಕೃತಿ ಚಿಂತಕ, ನಾಟಕಕಾರ ಕೋಟಗಾನಹಳ್ಳಿ ರಾಮಯ್ಯ ಅಭಿಪ್ರಾಯಪಟ್ಟರು. ಮಾನಸಗಂಗೋತ್ರಿಯ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದಲ್ಲಿ ಗುರುವಾರ ಆಯೋಜಿಸಿದ್ದ ವಿದ್ಯಾರ್ಥಿಗಳೊಂದಿಗೆ ಮುಕ್ತ ಸಂವಾದದಲ್ಲಿ ಮಾತನಾಡಿದ ಅವರು, ಅಂಬೇಡ್ಕರ್ ಪರಿನಿರ್ವಾಣವಾದ ಮೇಲೆ ಹುಟ್ಟಿಕೊಂಡ ಘೋಷಿತ ಅನುಯಾಯಿಗಳು, ಅಕಾಡೆಮಿಕ್ಸ್ ವಲಯ, ಅಂಬೇಡ್ಕರ್ ಬಗ್ಗೆ ಬರೆದವರು ಸಾಕಷ್ಟು ಕೃಷಿ ನಡೆಸಿದರು. ಆದರೆ, ಅವರಿಗೆ ಅಂಬೇಡ್ಕರ್ ಅವರನ್ನು ಸಮಕಾಲೀನಗೊಳಿಸುವ ಎದೆಗಾರಿಕೆ ಇಲ್ಲ ಎಂದರು. ಈವರೆಗೆ ನಮಗೇ ಬೇಕಾದಂತೆ ಅಂಬೇಡ್ಕರ್ ಜೀವನ ಚರಿತ್ರೆ ಗ್ರಹಿಸಿದ್ದೇವೆ. ಅವರ ಓದನ್ನು ನಮ್ಮ ಅನುಕೂಲಕ್ಕೆ ತಕ್ಕಂತೆ ಬೆಳೆಸಿದ್ದೇವೆ. ಅಂಬೇಡ್ಕರ್ ಜಯಂತಿ ಯಾವ ರೀತಿ ಆಚರಿಸಬೇಕು ತಿಳಿದಿಲ್ಲ. ಅಂಬೇಡ್ಕರ್ ಅವರನ್ನು ಪ್ರತಿಮೆ, ರಾಜಕಾರಣ, ನಾಮಾಂತರದ ಆಚೆಗೆ ಸಾಧ್ಯತೆ ಕಾಣದಿದ್ದರೆ ಸ್ಥಗಿತ ಬರುತ್ತದೆ ಎಂದು ಎಚ್ಚರಿಸಿದರು.

ಗ್ರಾಮಾಂತರ ಪ್ರದೇಶದಲ್ಲಿ ಪವರ್ ಕೇಂದ್ರಗಳನ್ನು ಎದುರು ಹಾಕಿಕೊಂಡ ದಲಿತ ಚಳವಳಿಯಲ್ಲಿ ಯಾಕೆ ಒಡುಕು ಶುರುವಾಯಿತು? ಮಾನಸಗಂಗೋತ್ರಿ ಆವರಣದಲ್ಲಿ ಯಾಕೆ ಬಾಬೂಜೀ, ಅಂಬೇಡ್ಕರ್ ಪ್ರತ್ಯೇಕ ಕೇಂದ್ರಗಳಿವೆ. ಇವತ್ತು ನಮ್ಮ ಪ್ರಜ್ಞೆ ಸೀಳು ಪ್ರಜ್ಞೆಯಾಗಿದೆ ಎಂದರು.

# ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ನುಡಿನಮನ ಕಾರ್ಯಕ್ರಮ

**ಬೆಂಗಳೂರು:** ಸದಾ ಬದಲಾವಣೆಗೆ ತೆರೆದುಕೊಳ್ಳುತ್ತಿದ್ದ ಸಾಹಸಿ ರಾಮೋಜಿ ರಾವ್ ಅವರಿಂದ ಮಾಧ್ಯಮ ಮತ್ತು ಸಿನಿಮಾ ಕ್ಷೇತ್ರಕ್ಕೆ ಅಪಾರ ಕೊಡುಗೆ ದೊರೆತಿದ್ದರೆ, ಉತ್ತರ ಕರ್ನಾಟಕ ಭಾಗದಲ್ಲಿ ಮಾಹಿತಿ ಕಣಜವೇ ಆಗಿದ್ದ ಹಿರಿಯ ಪತ್ರಕರ್ತ ಮತ್ತಿಹಳ್ಳಿ ಮದನ ಮೋಹನ ಅವರು ಮಾಧ್ಯಮ ಕ್ಷೇತ್ರಕ್ಕೆ ನೀಡಿದ ಕೊಡುಗೆ ಬೆಲೆ ಕಟ್ಟಲಾಗದು ಎಂದು ಕೆಯುಡಬ್ಲ್ಯೂಜೆ ಶ್ಲಾಘಿಸಿದೆ.

ಪದ್ಮವಿಭೂಷಣ ಪುರಸ್ಕೃತ ರಾಮೋಜಿ ರಾವ್ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಮತ್ತಿಹಳ್ಳಿ ಮದನ ಮೋಹನ ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಏರ್ಪಡಿಸಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದ ಗಣ್ಯರು ಅವರ ಗುಣಗಾನ ಮಾಡಿದರು.

ಕಾರ್ಯಕ್ರಮದ ಆರಂಭದಲ್ಲಿ ಇಬ್ಬರು ಪತ್ರಕರ್ತರ ಭಾವಚಿತ್ರಕ್ಕೆ ಪುಷ್ಪ ನಮನಗಳನ್ನು ಸಲ್ಲಿಸಿ, ಒಂದು ನಿಮಿಶ ಮೌನಾಚರಣೆ ಮಾಡಲಾಯಿತು.

ನ್ಯೂಸ್ ಫಸ್ಟ್ ಕನ್ನಡ ಟಿ.ವಿ. ವಾಹಿನಿಯ ಎಂ.ಡಿ. ಹಾಗೂ ಸಿ.ಇ.ಒ. ಎಸ್, ರವಿ ಕುಮಾರ್ ಮಾತನಾಡಿ, ಈಟಿವಿ ವಾಹಿನಿಯ ಮುಖ್ಯಸ್ಥರಾಗಿದ್ದ ರಾಮೋಜಿ ರಾವ್ ಅವರು ಉತ್ಸಾಹಿ ಪತ್ರಕರ್ತರಿಗೆ ಸದಾ ಮಾರ್ಗದರ್ಶರೂ, ಪ್ರೋತ್ಸಾಹಕರಾಗಿದ್ದರು. ಸದಾ ಸಮಯ ಬದ್ಧತೆಯಿಂದ ತಮ್ಮ ಜೀವನ ಸಾಗಿಸಿದವರು. ನಾಡಿನ ಸಾವಿರಾರು ಪತ್ರಕರ್ತರಿಗೆ ಉದ್ಯೋಗ ನೀಡಿದ್ದಲ್ಲದೆ, ಅವರ ಪ್ರೀತಿ ಪಾತ್ರರಾಗಿದ್ದರು ಎಂದರು. ಸದಾ ಹೊಸ ಬದಲಾವಣೆಗೆ ಹೊಂದಿಕೊಳ್ಳುವ ಛಲವನ್ನೂ ಬೆಳೆಸಿದ್ದರು. ಪ್ರತಿಯೊಂದು ವಿಷಯದ ಬಗ್ಗೆ ಅಪಾರ ಜ್ಞಾನ ಹೊಂದಿದ್ದ ಅವರ ವೃತ್ತಿ ಜೀವನದ ಕಾರ್ಯಗಳೆಲ್ಲವೂ ಶ್ಲಾಘನೀಯ ಎಂದರು.

**ಸಂಪಾದಕೀಯ ಸ್ವಾತಂತ್ರ:** ಅವಧಿ ಸಂಪಾದಕ ಜಿ.ಎನ್. ಮೋಹನ್, ತಮ್ಮ ಮತ್ತು ರಾಮೋಜಿ ರಾವ್ ಸುದ್ದಿ ಸಂಸ್ಥೆಯಲ್ಲಿ ಅವರು ಪತ್ರಕರ್ತರಿಗೆ ನೀಡುತ್ತಿದ್ದ ಸಂಪಾದಕೀಯ ಸ್ವಾತಂತ್ರ್ಯ ನಿಜಕ್ಕೂ ಪ್ರಶಂಸನೀಯವಾಗಿತ್ತು ಎಂದು ಒಡನಾಟವನ್ನು ಸ್ಮರಿಸಿಕೊಂಡರು.

# ಆನೆ ಬಾಗಿಲ ಹತ್ತಿರ ಕಸ ಹಾಕಬೇಕೆ, ಬೇಡವೇ?

**ಚಿತ್ರದುರ್ಗ:** ಪ್ರವಾಸಿಗರು ಹೆಚ್ಚು ಓಡಾಡುವ ಆನೆ ಬಾಗಿಲ ಬಳಿ ಇರುವ ವಿದ್ಯುತ್ತ್ ಪರಿವರ್ತಕದ ಬಳಿ, ಇಲ್ಲಿ ಕಸ ಹಾಕಬೇಡಿ, 100 ರೂ ದಂಡ ವಿಧಿಸುತ್ತೇವೆ ಎಂಬ ನಗರ ಸಭೆಯವರು ಬೋರ್ಡ್ ನೇತಾಕಿದ್ದಾರೆ, ಅಲ್ಲೇ ಜನ ಬಂದು ಕಸ ಎಸದಿದ್ದಾರೆ. ಜನ ಎಲ್ಲಿ ಕಸ ಹಾಕುತ್ತಿದ್ದರೋ, ಅಲ್ಲಿಗೆ ಬಂದು ನಗರಸಭೆಯವರು ಬೋರ್ಡ ಬರೆಸಿದ್ದಾರೆ ಎನಿಸುವಂತಿದೆ. ಇಲ್ಲಿ ಯಾರ ಹಠ ಮುಖ್ಯ, ಯಾರು ಹಿಂದಕ್ಕೆ ಸರಿಯುತ್ತಾರೆ ಎಂಬ ಕಾದಾಟ ನಡೆದೇ ಇದೆ, ಇಬ್ಬರ ಮಧ್ಯೆ ಸಾಮರಸ್ಯ ಇಲ್ಲದೆ, ಕಸ ಬಂದು ರಾಶಿ ರಾಶಿ ಬೀಳುತ್ತಿದೆ. ಆದ್ದರಿಂದ ಇಲ್ಲಿ ಜನರು ಮತ್ತು ಅಧಿಕಾರಿಗಳು ಯಾವುದಾದರೂಂದು ಹೊಸ ಪರಿಹಾರ ದಾರಿಯನ್ನ ಹುಡುಕಿಕೊಂಡು, ಅಲ್ಲಿ ಕಸ ಹಾಕುವುದನ್ನು ನಿಲ್ಲಿಸಬೇಕು ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಚಿತದುರ್ಗ ಜಿಲ್ಲಾಧ್ಯಕ್ಷರಾದ ಡಾ.ಎಚ್ ಕೆ ಎಸ್ ಸ್ವಾಮಿಯವರು ವಿನಂತಿಸಿಕೊಂಡಿದ್ದಾರೆ.

ಜನರಿಗೆ ಎಲ್ಲಿ ಕಸ ಹಾಕಬೇಕು ಎಂಬ ನಿರ್ದಿಷ್ಟ ಜಾಗ ನಗರಸಭೆಯವರು ಗೊತ್ತು ಮಾಡದೇ, ಜನರು ಹಾಕುತ್ತಿದ್ದ ಕಸದ ಜಾಗದ ಮೇಲೆ ಬೋರ್ಡ ಹಾಕಿದಂತೆ ಕಾಣುತ್ತಿದೆ.




ಹಾಗಾಗಿ ಜನರು ರೂಡಿಯಿಂದ ಅಲ್ಲಿ ಕಸ ಹಾಕುತ್ತಿದ್ದಾರೆ. ಜನರಿಗೆ ಬೇರೆ ದಾರಿ ಇಲ್ಲದೇ ಅಲ್ಲೇ ಕಸ ತಂದು ಹಾಕುತ್ತಿದ್ದಾರೆ. ಅದಕ್ಕಾಗಿ ನಗರಸಭೆಯವರು ಸಣ್ಣದಾದ ಡಬ್ಬಿಗಳನ್ನದರು ಇಡಬೇಕು, ಇಲ್ಲ ಅಲ್ಲಿ ಹಾಕಿರೋ ಬೋರ್ಡನ್ನಾದರೂ ತೆಗೆಯಬೇಕು. ನೂರು ರೂಪಾಯಿ ದಂಡ ಎಂದು ಹಾಕಿರುವ ಬೋರ್ಡಿನ ಕೆಳಗೆ ಕಸ ಹಾಕುತ್ತಿದ್ದಾರೆ ಎಂದರೆ, ಅವರಿಗೆ ನಗರಸಭೆಯವರ ಮೇಲೆ ಎಷ್ಟು ಮುನಿಸಿರಬಹುದು ಎಂದಿದ್ದಾರೆ.

# ಯೋಗದಿಂದ ವಿಶ್ವಶಾಂತಿ ಸಾಧ್ಯ: ಡಾ.ಬೆಟ್‌ಸೂರಮಠ್

**ಸುತ್ತೂರು:** ಇಡೀ ವಿಶ್ವಕ್ಕೆ ಯೋಗವನ್ನು ಕೊಡುಗೆಯಾಗಿ ನೀಡಿದ ಕೀರ್ತಿ ಭಾರತಕ್ಕೆ ಸಲ್ಲುತ್ತದೆ. ಇಡೀ ವಿಶ್ವವೇ ಸ್ವಯಂಪ್ರೇರಿತರಾಗಿ ಈ ವರ್ಷ ಯೋಗವು ನನಗಾಗಿ, ಸಮಾಜಕ್ಕಾಗಿ ಎಂಬ ವಿಷಯದೊಂದಿಗೆ ಯೋಗ ದಿನಾಚರಣೆಯನ್ನು ಆಚರಿಸುತ್ತಿದೆ. ಯೋಗದಿಂದ ವಿಶ್ವ ಶಾಂತಿ ಸಾಧ್ಯ ಎಂದು ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ. ಸಿ.ಜಿ. ಬೆಟ್ ಸೂರಮಠ್ ಹೇಳಿದರು.

ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಹಾಗೂ ಸುತ್ತೂರು ಜೆಎಸ್‌ಎಸ್ ವಸತಿ ಶಾಲೆ ಸಹಯೋಗದೊಂದಿಗೆ 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅತಿಥಿಗಳಾಗಿ ಆಗಮಿಸಿ ಮಾತನಾಡುತ್ತಾ, ಇತ್ತೀಚಿನ ದಿನಗಳಲ್ಲಿ ಸಮಾಜದಲ್ಲಿ ಭ್ರಷ್ಟಾಚಾರ, ಅತ್ಯಾಚಾರ, ಕೊಲೆ, ಸುಲಿಗೆ ನಡೆಯುತ್ತಿರುವುದು ವಿಷಾದದ ವಿಷಯವಾಗಿದೆ. ವಿಶ್ವಶಾಂತಿ ಬೇಕಾದರೆ ಮನಃಶಾಂತಿ ಮೊದಲು ಆಗಬೇಕು. ಯೋಗವು ಅಂತರಾಷ್ಟ್ರೀಯ ಸಂಬಂಧ, ಸಾಮರಸ್ಯ, ಶಾಂತಿ, ನೆಲೆಸುವಂತೆ ಮಾಡುತ್ತದೆ. ಧೈರ್ಯ, ಜ್ಞಾಪಕಶಕ್ತಿ, ರೋಗ ನಿರೋಧಕ ಶಕ್ತಿಯನ್ನು ಬೆಳೆಸುತ್ತದೆ. ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕಾಗಿ ಪ್ರತಿನಿತ್ಯವು ಯೋಗವನ್ನು ಮಾಡುವುದು ಒಳಿತು ಎಂದು ನುಡಿದರು. ಜೆಎಸ್‌ಎಸ್ ಸಂಸ್ಥೆಯ ಸಂಯೋಜನಾಧಿಕಾರಿಗಳಾದ ಜಿ. ಎಲ್. ತ್ರಿಪುರಾಂತಕರವರು ಮಾತನಾಡುತ್ತಾ, ಇತ್ತೀಚೆಗೆ ನಮ್ಮ ದೇಶದಲ್ಲಿ ವಿದೇಶಿ ವ್ಯಾಮೋಹ ಹೆಚ್ಚಾಗುತ್ತಿದ್ದು,



ದೇಹದ ಫಿಟ್ನೆಸ್‌ಗಾಗಿ ಯುವಜನತೆ ಜಿಮ್‌ಗಳಿಗೆ ತೆರಳುತ್ತಿದ್ದಾರೆ. ಆದರೆ ಪ್ರಾಚೀನ ಯೋಗದ ಬಗ್ಗೆ ನಮ್ಮಲ್ಲಿ ಉದಾಸೀನತೆಯಿದೆ. ಯೋಗವು ದೇಹ ಮತ್ತು ಮನಸ್ಸನ್ನು ಹತೋಟಿಯಲ್ಲಿಟ್ಟು, ದಿನಪೂರ್ತಿ ಉತ್ಸಾಹ ಮತ್ತು ಲವಲವಿಕೆಯಿಂದ ಕೂಡಿರುವಂತೆ ಮಾಡುತ್ತದೆ. ಯೋಗಕ್ಕೆ ಅನೇಕ ರೋಗಗಳನ್ನು ತಡೆಗಟ್ಟುವ ಶಕ್ತಿಯಿದೆ, ಆರೋಗ್ಯವೃದ್ಧಿಸಿಕೊಂಡು ನಿಮ್ಮ ಆಯಸ್ಸನ್ನು ವೃದ್ಧಿಮಾಡಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಉನ್ನತಶಿಕ್ಷಣಮತ್ತು ಸಂಶೋಧನಾ ಅಕಾಡೆಮಿ ವಿಭಾಗದ ರಿಜಿಸ್ಟ್ರಾರ್ ಆದ ಡಾ. ಬಿ. ಮಂಜುನಾಥ, ಅಕಾಡೆಮಿಕ್ಸ್‌ನ ಡೀನ್ ಆದ ಡಾ. ವಿಶಾಲ್ ಕುಮಾರ್ ಗುಪ್ತಾ ಹಾಗೂ ಮೈಸೂರು ಜೆಎಸ್ ಎಸ್ ಮೆಡಿಕಲ್ ಕಾಲೇಜಿನ ಆಡಳಿತಾಧಿಕಾರಿಗಳಾದ ಶ್ರೀ ಎಸ್.ಆರ್. ಸತೀಶ್ ಚಂದ್ರ, ಯೋಗ ವಿಭಾಗದ ಸಂಯೋಜನಾಧಿಕಾರಿಗಳಾದ ಡಾ. ಎಂ.ಯು. ಸುಜನ್, ಸುತ್ತೂರಿನ ಜೆಎಸ್‌ಎಸ್ ಸಂಸ್ಥೆಗಳ ಮುಖ್ಯಸ್ಥರುಗಳು, ಸಿಬ್ಬಂದಿ ವರ್ಗ ಹಾಗೂ ಸುತ್ತೂರು ವಸತಿ ಶಾಲೆಯ 4000ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಜೆಎಸ್‌ಎಸ್ ವಸತಿ ಶಾಲಾ ವಿದ್ಯಾರ್ಥಿಗಳಿಂದ ವಿಶ್ವಯೋಗ ದಿನಾಚರಣೆಯನ್ನು ಜೆಎಸ್ ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿಗಳಾದ ಶ್ರೀ ಬೆಟ್‌ಸೂರಮಠ್‌ರವರು ಉದ್ಘಾಟಿಸಿದರು.

# ಫಸಲ್ ಭೀಮಾ ಯೋಜನೆ ಬಗ್ಗೆ ರೈತರಿಗೆ ಅರಿವು ಮೂಡಿಸಿ: ಸಚಿವ ಕೆ.ವೆಂಕಟೇಶ್

**ಪಿರಿಯಾಪಟ್ಟಣ:** ರೈತರ ಸುರಕ್ಷೆಗಾಗಿ ಸರ್ಕಾರ ಜಾರಿಗೆ ತಂದಿರುವ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಕೃಷಿ ಇಲಾಖೆ ಅಧಿಕಾರಿಗಳು ಹೆಚ್ಚಿನ ಗಮನ ವಹಿಸಬೇಕು ಹಾಗೂ ಯೋಜನೆ ಬಗ್ಗೆ ರೈತರಿಗೆ ವ್ಯಾಪಕ ಅರಿವು ಮೂಡಿಸಬೇಕು ಎಂದು ಪಶುಪಾಲನಾ ಮತ್ತು ರೇಷ್ಮೆ ಖಾತೆ ಸಚಿವ ಕೆ.ವೆಂಕಟೇಶ್ ತಿಳಿಸಿದರು.

ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಗೆ ಸಂಬಂಧಿಸಿದ ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದರು.

ಸರ್ಕಾರ ಜಾರಿಗೆ ತಂದಿರುವ ಈ ಯೋಜನೆಯ ಲಾಭ ರೈತರಿಗೆ ಹೆಚ್ಚಿನ ಪ್ರಮಾಣದಲ್ಲಿ ದೊರೆಯಬೇಕು. ತಾಲೂಕಿನ ಎಲ್ಲಾ ರೈತರು ಬೆಳೆ ವಿಮಾ ಯೋಜನೆಗೆ ಒಳಪಡುವಂತಾಗಬೇಕು. ಅದಕ್ಕಾಗಿ ಗ್ರಾಮ ಮಟ್ಟದಲ್ಲಿ ಅರಿವು ಮೂಡಿಸುವ ಕೆಲಸ ಮಾಡಿ ಎಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು, ರೈತರ ಶ್ರೇಯೋಭಿವೃದ್ಧಿಗಾಗಿ ಸರ್ಕಾರಗಳು ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದರೂ ಅವುಗಳ ಸಂಪೂರ್ಣ ಅನುಕೂಲ ಪಡೆಯಲು ರೈತರು ಹೆಚ್ಚಿನ ಸಂಖ್ಯೆಯಲ್ಲಿ ಮುಂದೆ ಬರಬೇಕು. ಬರ ಮತ್ತು ಪ್ರಕೃತಿ ವಿಕೋಪಗಳ ಸಂದರ್ಭದಲ್ಲಿ ರೈತರಿಗೆ ಆಗುವ ಎಲ್ಲಾ ರೀತಿಯ ನಷ್ಟಗಳಿಗೂ ಪರಿಹಾರ ದೊರೆಯುವಂತೆ ಈ ಯೋಜನೆ ಇರುವುದು ಇದರ ಅನುಕೂಲ ಎಲ್ಲರಿಗೂ ದೊರಕಬೇಕು ಎಂದರು.

ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಪ್ರಸಾದ್ ಮಾತನಾಡಿ, 2024-25 ನೇ ಸಾಲಿನಲ್ಲಿ ಭತ್ತ, ಅಲಸಂದೆ , ಮುಸುಕಿನ ಜೋಳ, ರಾಗಿ ಬೆಳೆಗಳಿಗೆ



ರೈತರು ನಿರ್ಧರಿತ ಬೆಳೆವಾರು ವಿಮಾ ಮೊತ್ತ ಪಾವತಿಸಿ ನೋಂದಣಿ ಮಾಡಿಕೊಳ್ಳಲು ಜುಲೈ 31 ಕೊನೆಯ ದಿನವಾಗಿದ್ದು, ಬರ, ಶುಷ್ಕ ಪರಿಸ್ಥಿತಿ, ಆಲಿಕಲ್ಲು ಮಳೆ, ಭೂ ಕುಸಿತ, ಮುಳುಗಡೆ , ಮೇಘ ಸ್ಪೋಟ, ಗುಡುಗು ಮಿಂಚಿನಿಂದ ಅವಘಡ ಮುಂತಾದ ಪ್ರಕೃತಿ ವಿಕೋಪದ ಸಂದರ್ಭ, ಕಟಾವಿಗೆ ಬಂದ ಬೆಳೆ ಪ್ರಕೃತಿ ವಿಕೋಪಕ್ಕೆ ಸಿಲುಕಿ ನಷ್ಟ ಉಂಟಾದರೆ ಅಂತಹ ರೈತರು ರೈತ ಸುರಕ್ಷಾ ಪ್ರಧಾನ ಮಂತ್ರಿ ಫೈಸಲ್ ಭೀಮಾ ಯೋಜನೆ ಪಡೆಯಲು ಅರ್ಹರಾಗಿದ್ದು ಬೆಳೆಸಾಲ ಪಡೆಯದ/ ಪಡೆಯದ ರೈತರು ನೋಂದಣಿಗೆ ಪಹಣಿ, ಆಧಾರ್ ಸಂಖ್ಯೆ ಜೋಡಿಸಿದ ಬ್ಯಾಂಕ್ ಖಾತೆ/ಪಾಸ್ ಬುಕ್ ಮತ್ತು ಆಧಾರ್ ಸಂಖ್ಯೆಯೊಂದಿಗೆ ಡಿಸಿಸಿ, ಇತರೆ ಬ್ಯಾಂಕ್, ಗ್ರಾಮ್ ಒನ್ ಮತ್ತು ಸಿಎಸ್‌ಸಿ ಕೇಂದ್ರಗಳಿಗೆ ಸಂಪರ್ಕಿಸಬೇಕು. ರೈತರು ನೋಂದಣಿಗಾಗಿ (ಫ್ರೂಟ್ಸ್ ಐಡಿ) ಕಡ್ಡಾಯವಾಗಿ ಹೊಂದಿರಬೇಕು. ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಸಮೀಪದ ರೈತ ಸಂಪರ್ಕ ಕೇಂದ್ರ, ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಸಂಪರ್ಕಿಸಲು ಹಾಗೂ ಟೋಲ್ ಫ್ರೀ ನಂಬರ್ 18002093536 ಸಂಪರ್ಕಿಸಬೇಕು ಎಂದರು.

# ಹೈನುಗಾರಿಕೆಯಿಂದ ಆರ್ಥಿಕ ಅಭಿವೃದ್ಧಿ



**ಕೆ.ಆರ್.ನಗರ:** ಹೈನುಗಾರಿಕೆಯಲ್ಲಿ ತೊಡಗಿಸಿಕೊಳ್ಳುವುದರಿಂದ ಗ್ರಾಮೀಣ ಭಾಗದ ಜನರು ಆರ್ಥಿಕವಾಗಿ ಅಭಿವೃದ್ಧಿ ಹೊಂದುವುದರ ಜತೆಗೆ ಆರೋಗ್ಯವಂತಹರಾಗಿರಲು ಸಾಧ್ಯ. ಅದಕ್ಕಾಗಿ ಹೈನುಗಾರಿಕೆಗೆ ಹೆಚ್ಚು ಒತ್ತು ನೀಡಬೇಕು ಎಂದು ಶಾಸಕ ಡಿ.ರವಿಶಂಕರ್ ಹೇಳಿದರು.

ಸಾಲಿಗ್ರಾಮ ತಾಲೂಕಿನ ಚನ್ನಂಗೆರೆ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ವತಿಯಿಂದ ನಿರ್ಮಿಸಿರುವ ಬಿಎಂಸಿ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಹಾಲು ಉತ್ಪಾದಕರಿಗೆ ಪ್ರೋತ್ಸಾಹ ನೀಡುವ ಸದುದ್ದೇಶದಿಂದ ಕಾಂಗ್ರೆಸ್ ಸರ್ಕಾರ ಪ್ರತೀ ಲೀಟರ್ ಹಾಲಿಗೆ ಐದು ರೂಪಾಯಿ ಪ್ರೋತ್ಸಾಹಧನ ನೀಡುತ್ತಿದೆ ಎಂದರು.

ಮೈಮುಲ್ ವತಿಯಿಂದ ಲಭ್ಯವಿರುವ ಸವಲತ್ತುಗಳನ್ನು ಸದ್ಬಳಕೆ ಮಾಡಿಕೊಂಡು ಗ್ರಾಮೀಣ ಪ್ರದೇಶದ ಮಹಿಳೆಯರು ಸದಾ ಹೈನುಗಾರಿಕೆ ಮಾಡುವ ಮೂಲಕ ಸ್ಥಿತಿವಂತಾಗಬೇಕೆಂದು ಸಲಹೆ ನೀಡಿದ ಶಾಸಕರು, ಗ್ರಾಮದ ಜನತೆಯ ಬೇಡಿಕೆಯಂತೆ ಚನ್ನಂಗೆರೆ ಸುತ್ತಮುತ್ತಲಿನ ಗ್ರಾಮಗಳ ಜಾನುವಾರುಗಳಿಗೆ ಚಿಕಿತ್ಸೆಗೆ ಅನುಕೂಲ ಕಲ್ಪಿಸಲು ಪಶು ಆಸ್ಪತ್ರೆ ತೆರೆಯಲಾಗುತ್ತದೆ ಎಂದು ತಿಳಿಸಿದರು.

ಸಂಘದಲ್ಲಿ ಪ್ರತಿದಿನ 1450 ಲೀಟರ್ ಹಾಲು ಸಂಗ್ರಹಣೆ ಮಾಡುತ್ತಿದ್ದು, ಈ ಸಾಲಿನಲ್ಲಿ 5.87 ಲಕ್ಷ ರೂ ನಿವ್ವಳ ಲಾಭ ಗಳಿಸಿರುವುದು ಹೆಮ್ಮೆಯ ವಿಚಾರ. ಮುಂದಿನ ದಿನಗಳಲ್ಲಿ ಹಾಲು ಸಂಗ್ರಹಣಾ ಸಾಮರ್ಥ್ಯವನ್ನು ಹೆಚ್ಚಳ ಮಾಡಿ ಲಾಭ ಗಳಿಕೆಯ ಪ್ರಮಾಣ ವೃದ್ದಿಸಲು ಆಡಳಿತ ಮಂಡಳಿ ಮತ್ತು ಸಿಬ್ಬಂದಿ ವರ್ಗ ಶ್ರಮಿಸಬೇಕು ಎಂದು ಸೂಚಿಸಿದರು.

ಕಳೆದ ಒಂದು ವರ್ಷದಿಂದ ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸುವ ಸಲುವಾಗಿ ಸರ್ಕಾರ ಯಾವುದೇ ಅನುದಾನ ನೀಡಿಲ್ಲ. ಮುಂಬರುವ ದಿನಗಳಲ್ಲಿ ಸರ್ಕಾರದಿಂದ ಅನುದಾನ ಮಂಜೂರು ಮಾಡಿಸಿ ಗ್ರಾಮದ ರಸ್ತೆ ಅಭಿವೃದ್ಧಿ ಮತ್ತು ಚರಂಡಿ ನಿರ್ಮಾಣ ಸೇರಿದಂತೆ ಅಗತ್ಯ ಕಾಮಗಾರಿಗೆ ಹಣ ಬಿಡುಗಡೆ ಮಾಡಿಸಲಾಗುತ್ತದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸಂಘದ ವತಿಯಿಂದ ಶಾಸಕ ಡಿ.ರವಿಶಂಕರ್ ಅವರನ್ನು ಸನ್ಮಾನಿಸಲಾಯಿತು. ಮೈಮುಲ್‌ನ ನಿರ್ದೇಶಕ ಎ.ಟಿ.ಸೋಮಶೇಖರ್, ಸಂಘದ ಮಾಜಿ ಅಧ್ಯಕ್ಷ ಸಿ.ಬಿ.ಮಲ್ಲಿಕಾರ್ಜುನ ಮಾತನಾಡಿದರು.

ತಾ.ಪಂ ಮಾಜಿ ಅಧ್ಯಕ್ಷ ಹಾಡ್ಯ ಮಹದೇವಸ್ವಾಮಿ, ಸಿಆರ್‌ಪಿ ಸಿ.ಎನ್.ಪ್ರಭು, ವ್ಯವಸ್ಥಾಪಕ ನಿರ್ದೇಶಕ ಬಿ.ಎನ್. ವಿಜಯಕುಮಾರ್, ವ್ಯವಸ್ಥಾಪಕ ಎಲ್.ಆರ್. ಕರಿಬಸವರಾಜು, ಉಪವ್ಯವಸ್ಥಾಪಕ ಸಂತೋಷ್, ಸಹಾಯಕ ವ್ಯವಸ್ಥಾಪಕ ಡಾ.ಪ್ರವೀಣ್. ಎಂ.ಪತ್ತಾರ್, ಕಾಂಗ್ರೆಸ್ ಮುಖಂಡ ಎರೆಮನುಗನಹಳ್ಳಿ ಅಸ್ಲಾಂ, ಸಂಘದ ಅಧ್ಯಕ್ಷ ಸಿ.ಪಿ.ಪ್ರಕಾಶ್ ಇದ್ದರು.

# ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಖಂಡಿಸಿ ಪ್ರತಿಭಟನೆ

**ನಂಜನಗೂಡು:** ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಖಂಡಿಸಿ ನಂಜನಗೂಡಿನಲ್ಲಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಕಾರ್ಯಕರ್ತರು ಎತ್ತಿನಗಾಡಿ ಏರಿ ಪ್ರತಿಭಟನೆ ನಡೆಸಿದರು.

ನಂಜನಗೂಡು ನಗರದ ಹುಲ್ಲಹಳ್ಳಿ ವೃತ್ತದಲ್ಲಿ ಜಮಾಹಿಸಿದ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಕಾರ್ಯಕರ್ತರು ಮತ್ತು ಮುಖಂಡರು ರಾಷ್ಟ್ರೀಯ ಹೆದ್ದಾರಿಯನ್ನು ತಡೆದು ಎತ್ತಿನಗಾಡಿ ಏರಿ, ಮಾನವ ಸರಪಳಿ ನಿರ್ಮಿಸಿ ರಾಜ್ಯ ಸರ್ಕಾರದ ವಿರುದ್ಧ ದಿಕ್ಕಾರದ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಮಾಜಿ ಶಾಸಕ ಬಿ. ಹರ್ಷವರ್ಧನ್ ಮಾತನಾಡಿ, ರಾಜ್ಯ ಸರ್ಕಾರ ಏಕಾಏಕಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಮಾಡಿದ ಪರಿಣಾಮ ಜನಸಾಮಾನ್ಯರಿಗೆ ತೊಂದರೆಯಾಗಿದೆ. ಗ್ಯಾರಂಟಿ ಯೋಜನೆಗಳಿಂದ ಸರ್ಕಾರ ದಿವಾಳಿಯಾಗಿದೆ. ರಾಜ್ಯ ಸರ್ಕಾರದ ಆರ್ಥಿಕ ಪರಿಸ್ಥಿತಿ ಕುಗ್ಗಿದೆ. 53 ಸಾವಿರ ಕೋಟಿ ರೂ. ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಲಾಗುತ್ತಿದೆ. ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮದಲ್ಲಿ ಹಗರಣ ಮಾಡಲಾಗಿದೆ. ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಸ್ಕಾಲರ್ಶಿಪ್ ನಿಲ್ಲಿಸಲಾಗಿದೆ. ಇದು ದಲಿತ ವಿರೋಧಿ ಸರ್ಕಾರವಾಗಿದೆ. ಎಸ್ಸಿ,ಎಸ್ಟಿ ಮಕ್ಕಳಿಗೆ ಅನ್ಯಾಯ ಮಾಡುತ್ತಿದೆ ಎಂದು ಕಿಡಿಕಾರಿದರು.

ಬಡವರಿಗೆ ಮತ್ತು ಮಧ್ಯಮ ವರ್ಗದ ಜನರಿಗೆ ದೊಡ್ಡ ಹೊರೆಯಾಗುತ್ತಿದೆ. ನಿದ್ರೆ ಮಾಡುತ್ತಿರುವ ಸರ್ಕಾರ ಈ ಕೂಡಲೇ ಎಚ್ಚೆತ್ತುಕೊಂಡು ಬೆಲೆ ಏರಿಕೆಯನ್ನು ಮುಖ್ಯಮಂತ್ರಿಗಳು ವಾಪಸ್ ತೆಗೆದುಕೊಳ್ಳಬೇಕು. ಇಲ್ಲದಿದ್ದಲ್ಲಿ ಕರ್ನಾಟಕ ಬಂದ್ ಗೆ ಕರೆ ನೀಡಲಾಗುತ್ತದೆ ಎಂದು ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ. ಪ್ರತಿಭಟನೆಯಲ್ಲಿ ಬಿಜೆಪಿ ಮುಖಂಡ ಹಾಗೂ ಮಾಜಿ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಸ್. ಮಹದೇವಯ್ಯ ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷ ಕೆಂಡಗಣ್ಣಪ್ಪ, ಪಟ್ಟಣ ಬಿಜೆಪಿ ಅಧ್ಯಕ್ಷ ಸಿದ್ದರಾಜು, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಹಾಗೂ ಮಾಜಿ ಜಿಪಂ ಸದಸ್ಯ ಚಿಕ್ಕರಂಗನಾಯಕ, ಜೆಡಿಎಸ್ ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ, ಜಿಲ್ಲಾ ಕಾರ್ಯದರ್ಶಿ ಎಂ.ಸಿ. ಬಸವಣ್ಣ, ಮಾಜಿ ತಾಪಂ ಸದಸ್ಯ ಬದನವಾಳು ರಾಮು, ಯುವ ಮೋರ್ಚಾ ಅಧ್ಯಕ್ಷ ಗೋವರ್ಧನ್ ಪಕ್ಷದ ಕಾರ್ಯಕರ್ತರು ಭಾಗವಹಿಸಿದ್ದರು.

## ಮೂಲ ರೂಪದಲ್ಲೇ ಯೋಗ ಅನುಸರಣೆಯಾಗಲಿ

**ಮೈಸೂರು:** ಭಾರತೀಯರಾಗಿ ನಾವು ನಮ್ಮ ಗುರು ಪರಂಪರೆ ನೀಡಿರುವ ರೀತಿಯಲ್ಲಿಯೇ ಯೋಗವನ್ನು ಅನುಸರಿಸಬೇಕಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದ್ದಾರೆ. ಓದುಗ ಪ್ರಕಾಶನ, ಮೈಸೂರು ಕಲ್ಚರಲ್ ಅಸೋಸಿಯೇಷನ್, ಭಾರತೀ ಯೋಗಧಾಮ ಸಹಯೋಗದಲ್ಲಿ ಶುಕ್ರವಾರ ಮೈಸೂರಿನ ಉತ್ತನಹಳ್ಳಿಯ ವಿಜಯಗಿರಿಯಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ನಡೆದ ವಿಜಯ ಕರ್ನಾಟಕ ಸ್ಥಾನಿಕ ಸಂಪಾದಕ ಐತಿಚಂಡ ರಮೇಶ್ ಉತ್ತಪ್ಪ ಅವರ ಯೋಗ ಸಂಗೀತ, ಮೈಸೂರು ಪರಂಪರೆ ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿದರು.ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಸಂಗೀತ ಮತ್ತು ಯೋಗಕ್ಕೆ ತನ್ನದೇ ಆದ ಪರಂಪರೆ ಇದೆ. ಮುಮ್ಮಡಿ ಕೃಷ್ಣರಾಜ ಒಡೆಯರ್ ಅವರು 108 ಯೋಗಾಸನಗಳನ್ನು ಪ್ರದರ್ಶಿಸುತ್ತಿದ್ದರು. ಅದೇ ರೀತಿ ಮೈಸೂರಿನ ಯೋಗ ಗುರು ತಿರುಮಲೈ ಕೃಷ್ಣಮಾಚಾರ್ ದೇಶದಾದ್ಯಂತ ಯೋಗ ಪಸರಿಸಿದರು. ಮೂರು ಸಾವಿರಕ್ಕೂ ಹೆಚ್ಚು ಆಸನಗಳನ್ನು ಪರಿಚಯಿಸಿದರು. ಯೋಗದಲ್ಲಿ ದೇಹವನ್ನು ಸಹಜ ಸ್ಥಿತಿಯಿಂದ ಕ್ರಿಯಾಶೀಲತೆಗೆ ಹೇಗೆ ತೆಗೆದುಕೊಂಡು ಹೋಗಬೇಕೆಂಬುದನ್ನು ಹೇಳಿಕೊಟ್ಟಿದ್ದಾರೆ. ಮಾತ್ರವಲ್ಲದೇ ನಾವೆಲ್ಲರೂ ಭಾರತೀಯರಾಗಿ ಗುರು ಪರಂಪರೆ ನೀಡಿರುವ ರೀತಿಯಲ್ಲಿಯೇ ಯೋಗವನ್ನು ಉಳಿಸಿ ಬೆಳೆಸಿಕೊಂಡು ಹೋಗಬೇಕಿದೆ ಎಂದರು. ಯದುವೀರ್ ಅವರು ರವೀಂದ್ರ ಹೆಗ್ಡೆ ಅವರು ಚಿತ್ರಿಸಿದ ತಮ್ಮದೇ ಕಲಾಕೃತಿಯನ್ನು ಸ್ವೀಕರಿಸಿದರು. ಬಳಿಕ ಪ್ರಕಾಶ್ ಚಿಕ್ಕಪಾಳ್ಯ ಅವರ ಓದುಗ ಪ್ರಕಾಶನ ಸಂಸ್ಥೆಯ ಲೋಗೋ ಬಿಡುಗಡೆಗೊಳಿಸಿದರು. ಭಾರತೀಯ ಯೋಗಧಾಮ ಸಂಸ್ಥಾಪಕ ಡಾ.ಕೆ.ಎಲ್.ಶಂಕರನಾರಾಯಣ ಜೋಯ್ಸ್ ಇತರರು ಇದ್ದರು.

## ಶಾಲಾ ಮಂತ್ರಿಮಂಡಲ ರಚನೆ

**ಪಿರಿಯಾಪಟ್ಟಣ:** ತೆಲಗಿನಕುಪ್ಪೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 2024 –25 ನೇ ಸಾಲಿನ ಶಾಲಾ ಮಂತ್ರಿ ಮಂಡಲ ರಚಿಸಲಾಯಿತು. ಮುಖ್ಯ ಶಿಕ್ಷಕ ಬಿ.ಎಸ್ ವಿಜಯ್, ಶಿಕ್ಷಕರಾದ ಬಿ.ಎಸ್ ಮಹದೇವ್, ದಿವ್ಯಶ್ರೀ, ರಮೇಶ್, ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷೆ ರುಕ್ಮಿಣಿ ಅನಿಲ್, ಉಪಾಧ್ಯಕ್ಷೆ ರೇಖಾ ದಿವಾಕರ್, ಸಿಆರ್‌ಪಿ ಮಹೇಂದ್ರ, ಅವರ ಮಾರ್ಗದರ್ಶನದಲ್ಲಿ ನಡೆದ ಮಂತ್ರಿಮಂಡಲ ರಚನೆಯಲ್ಲಿ ಮುಖ್ಯಮಂತ್ರಿಯಾಗಿ ಹರ್ಷಿತ, ಉಪಮುಖ್ಯಮಂತ್ರಿಯಾಗಿ ಗೌತಮ್, ತೋಟಗಾರಿಕೆ ಮಂತ್ರಿಯಾಗಿ ಹೇಮಂತ್, ಉಮೇಶ್, ಆಹಾರ ಮಂತ್ರಿಯಾಗಿ ಸೋನಿಯಾ, ಐಶ್ವರ್ಯ, ನೀರಾವರಿ ಮಂತ್ರಿಯಾಗಿ ಚಂದು ಸ್ವಚ್ಛತಾ ಮಂತ್ರಿಯಾಗಿ ಪವನ್ ಕುಮಾರ್, ರಚನಾ ಶಿಕ್ಷಣ ಮಂತ್ರಿಯಾಗಿ ಸಾಕ್ಷಿ, ಚೇತನ್ ಆರೋಗ್ಯಮಂತ್ರಿಯಾಗಿ ರಾಹುಲ್, ಯಶ್ಮಿತಾ ಸಾಂಸ್ಕೃತಿಕ ಮಂತ್ರಿಯಾಗಿ ಅನುಶ್ರೀ, ಕ್ರೀಡಾ ಮಂತ್ರಿಯಾಗಿ ಚರಣ್, ಭರತ್ ಪರಿಸರ ನೈರ್ಮಲ್ಯ ಮಂತ್ರಿಯಾಗಿ ಲಕ್ಷ್ಮಿ, ದಿಗಂತ್ ವಾರ್ತಾ ಮಂತ್ರಿಯಾಗಿ ಪ್ರಣಿತ, ಖುಷಿ ಹಣಕಾಸು ಮಂತ್ರಿಯಾಗಿ ದೀಪಕ್, ಲೇಖನ ಹಾಗೂ ವಿರೋಧ ಪಕ್ಷದ ನಾಯಕನಾಗಿ ಕಿರಣ್ ಆಯ್ಕೆಯಾದರು ಹಾಗೂ ವಿವಿಧ ಇಲಾಖೆ ಮಂತ್ರಿಗಳಾಗಿ ವಿದ್ಯಾರ್ಥಿಗಳು ಆಯ್ಕೆಯಾದರು.



## ವಿವಿಧ ಯೋಜನೆಗಳಡಿ ಅರ್ಜಿ

**ಮಡಿಕೇರಿ:** ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮಗಳಿಂದ ಸಂಬಂಧಪಟ್ಟ ತಾಲ್ಲೂಕುಗಳ ಪರಿಶಿಷ್ಟ ಜಾತಿಯ ಜನಾಂಗದವರಿಂದ ಗಂಗಾ ಕಲ್ಯಾಣ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ಉದ್ಯಮ ಶೀಲತಾ ಯೋಜನೆ(ಬ್ಯಾಂಕುಗಳ ಸಹಯೋಗದೊಂದಿಗೆ),ಟ್ಯಾಬ್ ವಿತರಣೆ ಯೋಜನೆ ಕಾರ್ಯಕ್ರಮಗಳ ಅನುಷ್ಠಾನ ಸಂಬಂಧ ನಿಗಧಿತ ಗುರಿಗಳಿಗೆ ತಕ್ಕಷ್ಟು ಅರ್ಹ ಫಲಾಪೇಕ್ಷಿಗಳಿಂದ ಅರ್ಜಿಗಳು ಬಾರದಿರುವುದರಿಂದ ಮತ್ತೊಮ್ಮೆ ಅರ್ಜಿ ಆಹ್ವಾನಿಸಲಾಗಿದೆ.

ಗಂಗಾ ಕಲ್ಯಾಣ ಯೋಜನೆ: ಫಲಾಪೇಕ್ಷಿಯು 1 ಎಕರೆಯಿಂದ 5 ಎಕರೆ ವ್ಯವಸಾಯದ ಜಮೀನು ಹೊಂದಿದ್ದು ಈ ಹಿಂದೆ ನಿಗಮದಿಂದ ಯಾವುದೇ ಸೌಲಭ್ಯ ಪಡೆದುಕೊಂಡಿರಬಾರದು. ಅಂತವರ ಜಮೀನಿನಲ್ಲಿ ಕೊಳವೆ ಬಾವಿ ಕೊರೆದು ಪಂಪ್ ಮೋಟಾರ್ ಅಳವಡಿಸಿ ವಿದ್ಯುತ್ ಸಂಪರ್ಕ ಕಲ್ಪಿಸಿ ನೀರಾವರಿ ಸೌಲಭ್ಯ ಒದಗಿಸಲಾಗುವುದು.

**ಟ್ಯಾಬ್ ವಿತರಣೆ ಯೋಜನೆ:** ಸಫಾಯಿ ಕರ್ಮಚಾರಿ, ಮ್ಯಾನ್ಯುಯಲ್ ಸ್ಕಾವೆಂಜರ್ಸ್ ಮತ್ತು ಅವರ ಅವಲಂಬಿತರ ಮಕ್ಕಳು 8ನೇ ತರಗತಿಯಿಂದ ಪಿಯುಸಿ, ಐಟಿಐ, ಡಿಪ್ಲೋಮಾ, ಎಂಜಿನಿಯರಿಂಗ್, ಬಿಎ, ಬಿಎಸ್ಸಿ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವರಿಗೆ ಆನ್‌ಲೈನ್ ಪಾಠ ಕೇಳಲು ಅನುಕೂಲವಾಗುವಂತೆ ಪ್ರತಿ ವಿದ್ಯಾರ್ಥಿಗಳಿಗೆ ಒಂದು ಟ್ಯಾಬ್ ಉಚಿತವಾಗಿ ವಿತರಿಸಲಾಗುವುದು. ವಿದ್ಯಾರ್ಥಿ, ವಿದ್ಯಾರ್ಥಿನಿಯರು ಕೊಡಗು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಂದ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಕಚೇರಿಯ ದೂ.ಸಂ. 08272–228857ನ್ನು ಸಂಪರ್ಕಿಸಬಹುದು. ಅರ್ಜಿ ಸಲ್ಲಿಸಲು ಜೂನ್, 29 ಕೊನೆಯ ದಿನವಾಗಿದೆ. ಅರ್ಜಿ ಈ ಕಚೇರಿಯಿಂದ ಪಡೆದುಕೊಳ್ಳಬಹುದು ಎಂದು ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಚಂದ್ರಪ್ಪ ತಿಳಿಸಿದ್ದಾರೆ.

# ದೇಹ-ಮನಸ್ಸಿನ ಸಮನ್ವಯತೆಗೆ ಯೋಗಾಭ್ಯಾಸ ಸಹಕಾರಿ

**ಮಡಿಕೇರಿ:** ದೇಹ ಮತ್ತು ಮನಸ್ಸಿನ ನಡುವೆ ಸಮನ್ವಯ ಸಾಧಿಸಲು ಯೋಗಾಭ್ಯಾಸ ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ ವತಿಯಿಂದ ಶುಕ್ರವಾರ ಮಡಿಕೇರಿಯ ಗೌಡ ಸಮಾಜದ ಸಭಾಂಗಣದಲ್ಲಿ ನಡೆದ ಅಂತರರಾಷ್ಟ್ರೀಯ 10 ನೇ ಯೋಗ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಕೊಡಗು ವೈದ್ಯಕೀಯ ಶಿಕ್ಷಣ, ಜಿಲ್ಲಾ ಪೊಲೀಸ್, ಯುವ ಸಬಲೀಕರಣ ಮತ್ತು ಕ್ರೀಡೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ, ಸಮಾಜ ಕಲ್ಯಾಣ, ಪದವಿ ಪೂರ್ವ ಶಿಕ್ಷಣ, ಎನ್‌ಎಸ್‌ಎಸ್ ಮತ್ತು ಎನ್‌ಸಿಸಿ ಘಟಕ, ನೆಹರು ಯುವ ಕೇಂದ್ರ, ಕೊಡಗು ಯುವ ಒಕ್ಕೂಟ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಯೋಗ ಭಾರತಿ, ಪ್ರಣವ ಯೋಗ ಕೇಂದ್ರ, ಪತಂಜಲಿ ಯೋಗ ಶಿಕ್ಷಣ, ಆರ್ಟ್ ಆಪ್ ಲಿವಿಂಗ್, ಸ್ಕೌಟ್ಸ್ ಮತ್ತು ಗೈಡ್ಸ್, ನೀಮಾ ಸಂಸ್ಥೆ ಹೀಗೆ ಸರ್ಕಾರಿ ಮತ್ತು ಸರ್ಕಾರೇತರ ವಿವಿಧ ಸಂಸ್ಥೆಗಳ ಸಹಕಾರದಲ್ಲಿ ನಡೆದ 10ನೇ ಅಂತರ ರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ 700 ಕ್ಕೂ ಹೆಚ್ಚು ಮಂದಿ ಭಾಗಿಯಾಗಿದ್ದರು.

ಯೋಗ ಫಾರ್ ಸೆಲ್ಫ್ ಅಂಡ್ ಸೊಸೈಟಿ ಹೆಸರಿನಲ್ಲಿ ನಡೆದ ಅಂತರರಾಷ್ಟ್ರೀಯ 10 ನೇ ಯೋಗ ದಿನಾಚರಣೆಯಲ್ಲಿ ಜಿಲ್ಲಾಧಿಕಾರಿ ವೆಂಕಟ್ ರಾಜಾ, ಜಿ.ಪಂ.ಸಿಇಒ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ನಗರಸಭೆ ಮಾಜಿ ಅಧ್ಯಕ್ಷರಾದ ಅನಿತಾ ಪೂವಯ್ಯ, ಜಿಲ್ಲಾ ಆಯುಷ್ ಅಧಿಕಾರಿ ಡಾ.ರೇಣುಕಾ ದೇವಿ, ಯೋಗ ಶಿಕ್ಷಕರಾದ ಮಹೇಶ್ ಕುಮಾರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿ.ಟಿ.ವಿಸ್ಮಯಿ, ಕ್ಷೇತ್ರ ಶಿಕ್ಷಣಾಧಿಕಾರಿ ದೊಡ್ಡೇಗೌಡ, ನೀಮಾ ಜಿಲ್ಲಾ ಅಧ್ಯಕ್ಷರಾದ ಡಾ.ರಾಜಾರಾಮ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಆರೋಗ್ಯವೇ ಭಾಗ್ಯವಾಗಿದ್ದು, ಆ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಯೋಗ ಸಹಕಾರಿಯಾಗಿದೆ ಎಂದು ವೆಂಕಟ್‌ರಾಜಾ ಹೇಳಿದರು.

ಯೋಗ/ ವ್ಯಾಯಾಮ ಮಾಡುವುದರಿಂದ ಪ್ರತಿನಿತ್ಯ ಚಟುವಟಿಕೆಯಿಂದ ಇರಲು ಸಾಧ್ಯ. ಆ ನಿಟ್ಟಿನಲ್ಲಿ ಉತ್ತಮ ಆರೋಗ್ಯಕ್ಕೆ ಯೋಗ ಮತ್ತು ವ್ಯಾಯಾಮ ಮಾಡುವುದು ಅತ್ಯಗತ್ಯ ಎಂದು ಜಿಲ್ಲಾಧಿಕಾರಿ ಅವರು ತಿಳಿಸಿದರು.

ಯೋಗ ಶಿಕ್ಷಕರಾದ ಮಹೇಶ್ ಕುಮಾರ್ ಅವರು ಮಾತನಾಡಿ, ಅಂತರರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಹಲವು ದಿನಗಳಿಂದ ಯೋಗ ಪೂರ್ವಾಭ್ಯಾಸ ನಡೆಸಿ ಅಂತರ ರಾಷ್ಟ್ರೀಯ ಯೋಗ ದಿನಾಚರಣೆ ಹಮ್ಮಿಕೊಳ್ಳಲಾಗಿದೆ ಎಂದರು. ಜಿಲ್ಲಾ ಆಯುಷ್ ಅಧಿಕಾರಿ ಡಾ.ರೇಣುಕಾದೇವಿ ಅವರು ಮಾತನಾಡಿ ಅಂತರರಾಷ್ಟ್ರೀಯ 10 ನೇ ಯೋಗ ದಿನಾಚರಣೆಗೆ ಸರ್ಕಾರದ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು, ಸರ್ಕಾರೇತರ ಸಂಸ್ಥೆಯ ಪ್ರತಿನಿಧಿಗಳು ಹೀಗೆ ಎಲ್ಲರೂ ಜಿಲ್ಲಾಡಳಿತದ ಜೊತೆ ಕೈಜೋಡಿಸಿ ಯಶಸ್ಸುಗೊಳಿಸಿದ್ದಾರೆ ಎಂದು ತಿಳಿಸಿದರು. ಯೋಗ ಶಿಕ್ಷಕರಾದ ಮಹೇಶ್ ಕುಮಾರ್ ಅವರು ಯೋಗಾಭ್ಯಾಸ ಶಿಕ್ಷಣ ನೀಡಿದರು. ಸೂರ್ಯ ನಮಸ್ಕಾರ, ವೃಕ್ಷಾಸನ, ಪಾದಹಸ್ತಾಸನ, ಊರ್ಧ್ವಾಸನ, ತಾಡಾಸನ, ಅರ್ಧಮತ್ಸೇಂದ್ರಾಸನ, ಭುಜಂಗಾಸನ, ಪವನಮುಕ್ತಾಸನ, ಭದ್ರಾಸನ, ತ್ರಿಕೋನಾಸನ, ಉಷ್ಟ್ರಾಸನ, ವಜ್ರಾಸನ, ಶಲಭಾಸನ, ಶಶಾಂಕಾಸನ, ಮಂಡೂಕಾಸನ, ವಕ್ರಾಸನ, ಮಕರಾಸನ, ಸೇತುಬಂಧಾಸನ, ಉತ್ಥಾನ ಪಾದಾಸನ, ಅರ್ಧಹಲಾಸನ, ಶವಾಸನ, ಕಪಾಲಭಾತಿ, ಶೀತಲಿ ಪ್ರಾಣಾಯಾಮ, ಭ್ರಾಮರಿ ಪ್ರಾಣಾಯಾಮ, ಧ್ಯಾನ, ನಾಡಿಶೋಧ ಪ್ರಾಣಾಯಾಮ ಹೀಗೆ ಹಲವು ರೀತಿಯ ಯೋಗ ಮಾಡಲಾಯಿತು.

# ಯೋಗಾಭ್ಯಾಸ ಸ್ವಂತ ಶ್ರಮದ ಆರೋಗ್ಯ ವಿಮೆ




**ಮಂಡ್ಯ:** ರೋಗವನ್ನು ದೂರವಿಟ್ಟಿ ಆರೋಗ್ಯವನ್ನು ವೃದ್ದಿಸುವ ಶಕ್ತಿ ಯೋಗಾಭ್ಯಾಸಕ್ಕೆ ಇದೆ. ಯೋಗ ಎಂಬುದು ದಿನನಿತ್ಯ ರೂಡಿಸಿಕೊಂಡರೆ, ಅದು ಹಣ ಕಟ್ಟದೆ ಸ್ವಂತ ಶ್ರಮದಿಂದ ಪಡೆಯುವ ಆರೋಗ್ಯ ವಿಮೆ ಇದ್ದಂತೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ 10 ನೇ ಅಂತರಾಷ್ಟ್ರೀಯ ಯೋಗದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು.

ಯೋಗ ಮನಸ್ಸು ಹಾಗೂ ದೇಹದ ಆರೋಗ್ಯಕ್ಕೆ ಪೂರಕವಾಗಿದ್ದು, ಯೋಗವನ್ನು ಸಂಜೀವಿನಿ ಎಂದು ಕರೆಯಬಹುದು. ಪ್ರತಿಯೊಬ್ಬರೂ ದಿನದ 24 ಗಂಟೆಯಲ್ಲಿ ಒಂದು ಗಂಟೆ ಯೋಗಾಭ್ಯಾಸಕ್ಕೆ ಮೀಸಲಿಡಿ ಎಂದರು.

ಯೋಗ ಬಲ್ಲವನಿಗೆ ರೋಗದ ಭಯವಿಲ್ಲ, ರೋಗ ಇರುವವನಿಗೆ ಯೋಗದ ಅರಿವಿಲ್ಲ. ರೋಗ ಬರುವ ಮುಂಚೆ ಯ ಯೋಗಾಭ್ಯಾಸ ಮಾಡುವ ಯೋಗ ನಮ್ಮದಾಗಲಿ ಎಂದರು.

ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಪ್ರದಾನ ಕಾರ್ಯದರ್ಶಿ ಪುರುಷೋತ್ತಮನಂದ ನಾಥ ಸ್ವಾಮೀಜಿ ಅವರು ಮಾತನಾಡಿ ದೇಹ ದಂಡನೆ ಮಾಡಲು ಹೋಗಿ ಎಷ್ಟೋ ಜನರು ಪ್ರಾಣ ಕುತ್ತು ತಂದು ಕೊಂಡಿರುವವರು ಕೂಡ ಇದ್ದಾರೆ, ಆದರೆ ಯೋಗ ಮಾಡುವುದರಿಂದ ಯಾವುದೇ ತರಹ ಪ್ರಾಣ ಹಾನಿ ಇಲ್ಲ, ಹಣ ಖರ್ಚು ಮಾಡುವ ಆಗಿಲ್ಲ. ಹೆಚ್ಚು ಶ್ರಮ ಕೂಡ ಹಾಕುವ ಆಗಿಲ್ಲ ಆದ್ದರಿಂದ ಪ್ರತಿಯೊಬ್ಬರು ಕೂಡ ಯೋಗವನ್ನು ಮಾಡಿ ಮನಸ್ಸಿನ ನೆಮ್ಮದಿಯನ್ನು ಪಡೆದುಕೊಳ್ಳಿ ಎಂದು ಹೇಳಿದರು.

ಯೋಗಾಭ್ಯಾಸವನ್ನು ಕೇವಲ ಒಂದು ದಿನ ಮಾಡಿದರೆ ಸಾಲದು ಅದರ ಪ್ರಯೋಜನ ಕಂಡುಕೊಳ್ಳಬೇಕು ಎಂದರೆ ಪ್ರತಿನಿತ್ಯ ಯೋಗಾಭ್ಯಾಸವನ್ನು ಮಾಡಬೇಕು ಎಂದು ತಿಳಿಸಿದರು.

ಶ್ರೀರಂಗಪಟ್ಟಣ ಬೇಬಿ ಮಠ ಮತ್ತು ಚಂದ್ರವನಾಶ್ರಮ ಪೀಠಧ್ಯಕ್ಷರಾದ ತ್ರಿನೇತ್ರ ಮಹಾಂತ ಶಿವಯೋಗಿ ಸ್ವಾಮೀಜಿಗಳು ಮಾತಾನಾಡಿ ಇಡೀ ವಿಶ್ವಕ್ಕೆ ಯೋಗ ಪರಿಚಯಿಸಿದ ಹೆಮ್ಮೆ ಭಾರತ ದೇಶಕ್ಕಿದೆ.

ಇಂದು ಎಲ್ಲಾ ರಾಷ್ಟ್ರಗಳ ಜೊತೆಗೆ ಏಕಕಾಲಿಕವಾಗಿ ಯೋಗದಿನಾಚರಣೆಯನ್ನು ಆಚರಿಸಲಾಗುತ್ತದೆ ಎಂದು ಹೇಳಿದರು.

ದೇಹವನ್ನು ದಂಡಿಸದೆ ದೇಹಕ್ಕೆ ಹಾಗೂ ಮನಸ್ಸಿಗೆ ಉಲ್ಲಾಸ ಕೊಡುವ ಜೊತೆಗೆ ಸದೃಢ ಆರೋಗ್ಯವನ್ನು ಹೊಂದಲು ಯೋಗ ಬಹಳ ಉಪಯುಕ್ತವಾಗಿದೆ. ಶಾಲಾ ಪಠ್ಯ ಪುಸ್ತಕದಲ್ಲಿ ಎಲ್ಲಾ ವಿಷಯದ ಬಗ್ಗೆ ಪಾಠಗಳನ್ನು ಅಳವಡಿಸಿದ್ದಾರೆ ಅದೇ ರೀತಿ ಪಠ್ಯ ಪುಸ್ತಕ ದಲ್ಲಿ ಯೋಗ ಶಾಸ್ತ್ರವನ್ನು ಅಳವಡಿಸಿದರೆ ಆರೋಗ್ಯದ ಬಗ್ಗೆ ಅರಿವು ಹೆಚ್ಚಾಗುತ್ತದೆ ಎಂದು ಹೇಳಿದರು.

ಯೋಗಾಭ್ಯಾಸದಿಂದ ಅಂಗಾಂಗಗಳು ಬಲವಾಗುತ್ತವೆ, ಕಣ್ಣುಗಳು ದೃಷ್ಟಿ ಚೆನ್ನಾಗಿರುತ್ತದೆ, ಯಾವುದೇ ಅನಾರೋಗ್ಯವು ಸಹ ನಮ್ಮ ಬಳಿ ಸುಳಿಯುವುದಿಲ್ಲ ಆದ್ದರಿಂದ ದಿನ ನಿತ್ಯ ಯೋಗಾಭ್ಯಾಸ ಮಾಡಿ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಣಾಧಿಕಾರಿ ಶೇಕ್ ತನ್ವೀರ್ ಆಸೀಫ್, ಜಿಲ್ಲಾ ಪೊಲೀಸ್ ವರಿಷ್ಠಧಿಕಾರಿ ಎನ್.ಯತೀಶ್, ಅಪರ ಜಿಲ್ಲಾಧಿಕಾರಿ ಡಾ.ಹೆಚ್.ಎಲ್ ನಾಗರಾಜ್, ಆಯುಷ್ ಇಲಾಖೆ ವೈದ್ಯಾಧಿಕಾರಿ ಡಾ.ಸೀತಾಲಕ್ಷ್ಮಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಓಂ ಪ್ರಕಾಶ್, ನೆಹರು ಯುವ ಕೇಂದ್ರದ ಅಧಿಕಾರಿ ರಾಜೇಶ್ ಕಾರಂತ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ತು?ಾರಮಣಿ, ಪತಂಜಲಿ ಯೋಗ ಶಿಕ್ಷಣ ಸಂಸ್ಥೆಯ ಸಂಚಾಲಕರಾದ ಶಂಕರನಾರಾಯಣ ಶಾಸ್ತ್ರಿ, ರೆಡ್ ಕ್ರಾಸ್ ಸಂಸ್ಥೆಯ ಗೌರವಾಧ್ಯಕ್ಷರಾದ ಮೀರಾಶಿವಲಿಂಗಯ್ಯ ಉಪಸ್ಥಿತರಿದ್ದರು.

# ಸಾಧಕರನ್ನು ಸ್ಫೂರ್ತಿಯಾಗಿಸಿಕೊಳ್ಳಿ



**ಮೈಸೂರು:** ವಿದ್ಯಾರ್ಥಿಗಳು ತಮ್ಮ ಮುಂದಿನ ವಿದ್ಯಾಭ್ಯಾಸದ ಜತೆಗೆ ಉತ್ತಮ ಸಾಧಕರನ್ನು ಸ್ಫೂರ್ತಿಯಾಗಿಸಿಕೊಂಡು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ಸಾಮರ್ಥ್ಯ ರೂಢಿಸಿಕೊಳ್ಳಬೇಕು ಎಂದು ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜಿನ ರಸಾಯನಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಎಂ.ಮಮತಾ ಹೇಳಿದರು.

ನಗರದ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಪದವಿ ಪೂರ್ವ ಕಾಲೇಜಿನ ವತಿಯಿಂದ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ 2023–24ನೇ ಸಾಲಿನಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮಾತನಾಡಿದ ಅವರು, ಪ್ರತಿ ವಿದ್ಯಾರ್ಥಿನಿಯೂ ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳುವುದರೊಂದಿಗೆ ಅದಕ್ಕೆ ಸೂಕ್ತ ಉತ್ತರ ಪಡೆಯಬೇಕು. ಜತೆಗೆ ವಿದ್ಯಾರ್ಥಿಗಳು ತಮ್ಮ ಮುಂದಿನ ಬದುಕಿನಲ್ಲಿ ಸೇವಾ ಮನೋಭಾವ ಬೆಳೆಸಿಕೊಂಡು ಜೀವನೋತ್ಸಾಹದ ಗಣಿಗಳಾಗಬೇಕು ಎಂದು ಹೇಳಿದರು. ಆದರ್ಶ ನಡೆ ನುಡಿಯ ಮೂಲಕ ಸವಾಜಮುಖಿಯಾಗಿ ಬೆಳೆಯಬೇಕು, ಸುತ್ತೂರು ಶ್ರೀಗಳ ಮೂಲಕ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು ಸಮಾಜಕ್ಕೆ ನೀಡುತ್ತಿರುವ ಕೊಡುಗೆ ಆದರ್ಶನೀಯವಾಗಿದೆ ಎಂದು ಶ್ಲಾಘಿಸಿದರು. ಸಮಾಜದಲ್ಲಿನ ಉನ್ನತ ವರ್ಗಗಳ ವಿದ್ಯಾರ್ಥಿಗಳೊಂದಿಗೆ ಕೆಳವರ್ಗದ ಮಕ್ಕಳು ಸ್ಪರ್ಧಿಸಲು ಪ್ರತಿಭೆ, ಸಾಮರ್ಥ್ಯ ಬೆಳೆಸಿಕೊಳ್ಳಬೇಕು. ವಿದ್ಯೆಯಿಂದ ಗೌರವ ಸಿಗುತ್ತದೆ. ಪೋಷಕರು ಮಕ್ಕಳ ವಿದ್ಯಾಭ್ಯಾಸ ಮೊಟಕುಗೊಳಿಸಬಾರದು. ಬಾಲ್ಯ ವಿವಾಹ ವಾಡಿಸಬಾರದು ಎಂದು ಸಲಹೆ ನೀಡಿದರು. ಜೆಎಸ್ ಎಸ್ ಕಾಲೇಜು ಶಿಕ್ಷಣ ವಿಭಾಗದ ಸಹಾಯಕ ನಿರ್ದೇಶಕ ಬಿ.ನಿರಂಜನಮೂರ್ತಿ ಮಾತನಾಡಿ, ಜೆಎಸ್‌ಎಸ್ ಸಂಸ್ಥೆ ಧರ್ಮ, ಜಾತಿ ನೋಡದೇ ಸಮಾನವಾಗಿ ಶಿಕ್ಷಣ ನೀಡುವ ಮೂಲಕ ದೇಶ ಮತ್ತು ವಿದೇಶಗಳಲ್ಲಿ ಹೆಸರು ಮಾಡಿದೆ. ಜತೆಗೆ ಮಕ್ಕಳಿಗೆ ವಿಶೇಷ ಆದ್ಯತೆ ನೀಡಲಾಗಿದೆ ಎಂದರು.

# 27ರಿಂದ ಅಗ್ನಿವೀರ್ ನೇಮಕಾತಿ ರ್‍ಯಾಲಿ



**ಮಡಿಕೇರಿ:** ಇದೇ ಜೂನ್, 27 ರಿಂದ ಜುಲೈ, 02 ರವರೆಗೆ ನಗರದ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಸೈನಿಕ ಕಲ್ಯಾಣ ಇಲಾಖೆಗೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಸೂಚಿಸಿದ್ದಾರೆ.

ನಗರದ ಜಿಲ್ಲಾಧಿಕಾರಿ ಅವರ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯು ಒಂದು ವಿಶಿಷ್ಟ ಕಾರ್ಯಕ್ರಮವಾಗಿದ್ದು, ಯಾರಿಗೂ ಯಾವುದೇ ರೀತಿಯ ತೊಂದರೆಯಾಗದಂತೆ ಗಮನಹರಿಸಬೇಕು. ವಸತಿ ಊಟೋಪಚಾರ ಸೇರಿದಂತೆ ಹಲವು ಮೂಲ ಸೌಕರ್ಯಗಳನ್ನು ವ್ಯವಸ್ಥಿತವಾಗಿ ನಿರ್ವಹಿಸುವಂತೆ ಸ್ಪಷ್ಟ ನಿರ್ದೇಶನ ನೀಡಿದರು.

ಸೈನಿಕ ಭರ್ತಿ ಕಾರ್ಯಾಲಯದ ನಿರ್ದೇಶಕರಾದ ಕರ್ನಲ್ ಗೌರವ್ ತಾಪ ಅವರು ಮಾತನಾಡಿ ಪೊಲೀಸ್ ಇಲಾಖೆಯಿಂದ ಸೂಕ್ತ ಬಂದೋಬಸ್ತ್ ಕಲ್ಪಿಸಬೇಕಿದೆ. ಲೋಕೋಪಯೋಗಿ, ಸೆಸ್ಕ್, ಪದವಿ ಪೂರ್ವ ಶಿಕ್ಷಣ, ಅಗ್ನಿಶಾಮಕ ದಳ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ವೈದ್ಯಕೀಯ ಶಿಕ್ಷಣ, ಸೆಸ್ಕ್, ಬಿಎಸ್‌ಎನ್‌ಎಲ್ ಹೀಗೆ ವಿವಿಧ ಇಲಾಖೆಗಳ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಅಗತ್ಯ ಸಹಕಾರ ನೀಡುವಂತೆ ನಿರ್ದೇಶನ ನೀಡಿದರು.

ಸೈನಿಕ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಹಾಗೂ ನೋಡಲ್ ಅಧಿಕಾರಿ ಮೇಜರ್ ಬಾಲಸುಬ್ರಹ್ಮಣ್ಯಂ ಅವರು ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ ಸಂಬಂಧಿಸಿದಂತೆ ಹಲವು ಮಾಹಿತಿ ನೀಡಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಬಿ.ಎನ್. ವೀಣಾ, ಲೋಕೋಪಯೋಗಿ ಇಲಾಖೆಯ ಇಇ ಸಿದ್ದೇಗೌಡ, ನಗರಸಭೆ ಪೌರಾಯುಕ್ತರಾದ ವಿಜಯ್, ಪ್ರಾದೇಶಿಕ ಸಾರಿಗೆ ಅಧಿಕಾರಿ ನಾಗರಾಜಾ ಆಚಾರ್, ಸೆಸ್ಕ್ ಕಾರ್ಯಪಾಲಕ ಅಭಿಯಂತರರಾದ ಅನಿತಾ ಬಾಯಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿ.ಟಿ.ವಿಸ್ಮಯಿ, ಭಾರತೀಯ ದೂರ ಸಂಚಾರ ನಿಗಮದ ವ್ಯವಸ್ಥಾಪಕ ಪ್ರದೀಪ್ ಇತರರು ಇದ್ದರು.

# ನಂ.ಗೂಡಿನಲ್ಲಿ ಸಾಮೂಹಿಕ ಯೋಗ ಪ್ರದರ್ಶನ



**ನಂಜನಗೂಡು:** ವಿಶ್ವ ಯೋಗ ದಿನಾಚರಣೆ ಅಂಗವಾಗಿ ನಗರದ ತಾಲೂಕು ಕ್ರೀಡಾಂಗಣದಲ್ಲಿ ಶುಕ್ರವಾರ ಶ್ರೀಪತಂಜಲಿ ಯೋಗ ಶಿಕ್ಷಣ ಸಮಿತಿ ವತಿಯಿಂದ ಆಯೋಜಿಸಿದ್ದ ಸಾಮೂಹಿಕ ಯೋಗ ಪ್ರದರ್ಶನದಲ್ಲಿ ನೂರಾರು ಯೋಗಬಂಧುಗಳು ಭಾಗವಹಿಸಿದರು.

ಸಮಿತಿಯ ಪ್ರಧಾನ ಯೋಗ ಶಿಕ್ಷಕ ಪ್ರಕಾಶ್ ಜಿ.ಉಡಿಗಾಲ ನೇತೃತ್ವದಲ್ಲಿ ನಡೆದ ಯೋಗಾಭ್ಯಾಸದಲ್ಲಿ ಸಮಿತಿಯ ಯೋಗಬಂಧುಗಳು ಸಮವಸ್ತ್ರಧಾರಿಯಾಗಿ ಪಾಲ್ಗೊಂಡು ಗಮನ ಸೆಳೆದರೆ, ಕಸ್ತೂರಬಾ ಬಾಲಕಿಯರ ವಸತಿ ಶಾಲೆಯ ನೂರಾರು ವಿದ್ಯಾರ್ಥಿಗಳು ಭಾಗವಹಿಸಿದರು.

ಪ್ರಸಕ್ತ ಬಾರಿ ಸರ್ಕಾರ ತನಗಾಗಿ ಹಾಗೂ ಸಮಾಜಕ್ಕಾಗಿ ಧ್ಯೇಯಘೋಷದೊಂದಿಗೆ ಜೋಡಿಸಿರುವ ಶಿಷ್ಟಾಚಾರದ ಆಸನಾಭ್ಯಾಸ, ಪ್ರಾಣಾಯಾಮ ಹಾಗೂ ಧ್ಯಾನ ಕ್ರಿಯೆಗಳನ್ನು ಎಲ್ಲರೂ ಸಾಮೂಹಿಕವಾಗಿ ಅಭ್ಯಾಸ ಮಾಡಿದರು.

ಸಾಮೂಹಿಕ ಯೋಗಾಭ್ಯಾಸಕ್ಕೆ ಚಾಲನೆ ನೀಡಿದ ಚಾಮರಾಜನಗರ ವೈದ್ಯಕೀಯ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ.ಸಂತೋಷ್ ಕುಮಾರ್ ಬೆನ್ನೂರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮಾನಸಿಕ ಖಿನ್ನತೆಗೆ ಒಳಗಾಗುವವರ ಸಂಖ್ಯೆ ಹೆಚ್ಚಳವಾಗುತ್ತಿದೆ. ಇದಕ್ಕೆ ಬದಲಾದ ಜೀವನಶೈಲಿಯೇ ಕಾರಣ. ನಿಯಮಿತ ಯೋಗ, ಆಹಾರ ಕ್ರಮವನ್ನು ನಾವು ಅಳವಡಿಸಿಕೊಳ್ಳದೇ ಮೈಮರೆಯುತ್ತಿರುವುದರಿಂದ ಸಾಕಷ್ಟು ಆರೋಗ್ಯ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ. ಮಾನಸಿಕ ಖಿನ್ನತೆಗೆ ಯೋಗವೇ ಮದ್ದು ಎಂಬುದು ನಿಮ್ಹಾನ್ಸ್ ಆಸ್ಪತ್ರೆಯಲ್ಲಿ ನಡೆದಿರುವ ಅನೇಕ ಸಂಶೋಧನೆಗಳ ಮೂಲಕ ರುಜುವಾತಾಗಿದೆ. ಓಂಕಾರ ಧ್ಯಾನದ ಮೂಲಕ ನಮ್ಮ ನರಮಂಡಲ ಉದ್ದೀಪನಗೊಂಡು ಚೈತನ್ಯ ಶಕ್ತಿ ಹೆಚ್ಚುವ ಜತೆಗೆ ಖಿನ್ನತೆಯಿಂದ ಬಳಲು ಅನೇಕರು ಸಹಜ ಸ್ಥಿತಿಗೆ ಮರಳಿರುವುದರಿಂದ ಸಂಶೋಧನೆಯಲ್ಲಿ ದೃಢಪಟ್ಟಿದೆ. ಹಾಗಾಗಿ ಎಲ್ಲರೂ ಸರಿಯಾದ ಗುರುವಿನ ಮಾರ್ಗದರ್ಶನದಲ್ಲಿ ಯೋಗಾಭ್ಯಾಸ ಮಾಡಬೇಕು ಎಂದು ಸಲಹೆ ನೀಡಿದರು.

ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ಪ್ರಧಾನ ಯೋಗ ಶಿಕ್ಷಕ ಪ್ರಕಾಶ್ ಜಿ.ಉಡಿಗಾಲ ಮಾತನಾಡಿ, ನಮ್ಮ ದೇಹ ಪ್ರಕೃತಿಗೆ ಅನುಗುಣವಾಗಿ ಮಾಡುವ ಆಸನಗಳನ್ನು ಅತ್ಯಂತ ಪ್ರೀತಿಯಿಂದ ಮಾಡಬೇಕು. ಮಾಡುವುದನ್ನು ಗಮನಿಸಿ ಅನುಭವಿಸಿ ಆನಂದಿಸುವುದನ್ನು ಕಲಿಯುವುದೇ ನಿಜವಾದ ಯೋಗ ಕ್ರಮ. ನಾವು ದ್ವೇಷ, ಅಸೂಹೆ, ಕೋಪದ ಕಡೆ ಹೆಚ್ಚು ಕೇಂದ್ರೀಕರಿಸುತ್ತಿದ್ದೇವೆ. ಅವೆಲ್ಲವನ್ನೂ ತ್ಯಜಿಸಿ ಪ್ರೀತಿ, ಕರುಣೆ, ದಯೆ ಗುಣಗಳತ್ತ ಮುಖ ಮಾಡಿದರೆ ನಮ್ಮ ಆರೋಗ್ಯ ಸುಧಾರಣೆ ಜತೆಗೆ ಉತ್ತಮ ಜೀವನ ಕಂಡುಕೊಳ್ಳಲು ಸಹಕಾರಿಯಾಗಲಿದೆ. ನಮ್ಮ ಪೂರ್ವಿಕರು ಕಟ್ಟಿಕೊಟ್ಟಿರುವ ಜೀವನ ಪದ್ಧತಿ ಅತ್ಯಂತ ವೈಜ್ಞಾನಿಕತೆಯಿಂದ ಕೂಡಿದೆ. ಅದರಿಂದ ನಾವು ವಿಮುಖರಾಗಿ ಆಧುನಿಕ ಜೀವನಶೈಲಿಗೆ ಮಾರುಹೋಗದಂತೆ ಎಚ್ಚರವಹಿಸಬೇಕಿದೆ ಎಂದರು.

ಆಯುಷ್ ಇಲಾಖೆ ತಾಲೂಕು ನೋಡಲ್ ಅಧಿಕಾರಿ ಡಾ.ಅಶೋಕ್‌ಕುಮಾರ್ ಮಾತನಾಡಿ, ನಾವು ಆರೋಗ್ಯವಾಗಿದ್ದರೆ ಸಾಲದು ನೆರೆಹೊರೆಯವರೂ ಆರೋಗ್ಯವಾಗಿರಬೇಕು ಎಂಬುದನ್ನು ಕೋವಿಡ್ ಸಂದರ್ಭದಲ್ಲಿ ಎಲ್ಲರಿಗೂ ಮನವರಿಕೆಯಾಗಿದೆ. ಈ ಕಾರಣಕ್ಕಾಗಿಯೇ ಕೇಂದ್ರ ಸರ್ಕಾರ ಈ ಬಾರಿ ತನಗಾಗಿ ಮತ್ತು ಸಮಾಜಕ್ಕಾಗಿ ಯೋಗ ಎಂಬ ಧ್ಯೇಯದೊಂದಿಗೆ ಯೋಗ ದಿನವನ್ನು ಆಚರಿಸಲಾಗುತ್ತಿದೆ. ಉತ್ತಮ ಸಮಾಜ ಕಟ್ಟುವ ಕಾಯಕದಲ್ಲಿ ಎಲ್ಲರೂ ಭಾಗಿಯಾಗೋಣ ಎಂದು ಹೇಳಿದರು.

# ಸದೃಢ ಆರೋಗ್ಯಕ್ಕೆ ಯೋಗ ಸಿದ್ದೌಷಧ



**ಬೇಲೂರು:** ಸದೃಢ ಆರೋಗ್ಯಕ್ಕೆ ಯೋಗ ಸಿದ್ದೌಷಧ. ಮನುಷ್ಯ ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಜೀವಿ, ಭಾರತದಲ್ಲಿ ಆಯುರ್ವೇದದಲ್ಲಿ ಹೇಳಿರುವಂತೆ ಸದೃಢ ಆರೋಗ್ಯದ ಸಮತೋಲನವನ್ನು ಅಭಿವೃದ್ಧಿಪಡಿಸಲು ಯೋಗ ಸಹಾಯ ಮಾಡುತ್ತದೆ. ಏರೋಬಿಕ್‌ನಂತಹ ಇತರ ವ್ಯಾಯಾಮಗಳು ದೈಹಿಕ ಯೋಗಕ್ಷೇಮವನ್ನು ಮಾತ್ರ ಖಚಿತಪಡಿಸುತ್ತವೆ ಎಂದುಶಾಸಕ ಹೆಚ್.ಕೆ.ಸುರೇಶ್ ಹೇಳಿದರು.

ವಿಶ್ವ ಯೋಗ ದಿನದ ಅಂಗವಾಗಿ ವಿಶ್ವ ವಿಖ್ಯಾತ ಬೇಲೂರು ಚನ್ನಕೇಶವಸ್ವಾಮಿ ದೇಗುಲದ ಒಳಾಂಗಣ ಪ್ರಕಾರದಲ್ಲಿ ತಾಲ್ಲೂಕು ಆಡಳಿತ ಸೇರಿದಂತೆ ವಿವಿಧ ಯೋಗ ಸಂಸ್ಥೆಗಳು ಮತ್ತು ಇಲಾಖೆವಾರು ವತಿಯಿಂದ ನಡೆದ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಉದ್ಘಾಟನೆ ಮೂಲಕ ಚಾಲನೆ ನೀಡಿ ಮಾತನಾಡಿದರು. ಯೋಗ ಮಾನವನ ಮತ್ತು ಪ್ರಕೃತಿಯ ನಡುವಿನ ಸಂಬಂಧದ ಜೊತೆಗೆ ಸಮಷ್ಟಿ ಆರೋಗ್ಯಕ್ಕೆ ಪರಿಪೂರ್ಣವಾಗುವ ಯೋಗವನ್ನು ಇಡೀ ವಿಶ್ವಕ್ಕೆ ಪರಿಚಯಿಸಿದ ಪ್ರಧಾನಿ ನರೇಂದ್ರ ಮೋದಿರವರಿಗೆ ಹೆಗ್ಗಳಿಕೆಗೆ ಸಲ್ಲುತ್ತದೆ. ಭಾರತವನ್ನು ಜಗತ್ತಿಗೆ ವಿಶ್ವ ಗುರು ಎಂಬ ಖ್ಯಾತಿಯನ್ನು ನೀಡಿದ್ದಾರೆ. ಬೇಲೂರಿನಲ್ಲಿ ನಡೆದ ವಿಶ್ವ ಯೋಗ ದಿನ ನಿಜಕ್ಕೂ ಅಗಮ್ಯವಾಗಿ ಮೂಡಿ ಬಂದ ಬಗ್ಗೆ ಹರ್ಷ ವ್ಯಕ್ತಪಡಿಸಿದರು.

ತಹಸೀಲ್ದಾರ್ ಎಂ.ಮಮತ ಮಾತನಾಡಿ, ಪ್ರತಿ ವರ್ಷ ಜೂನ್ 21 ರಂದು ಆಚರಿಸಲಾಗುವ ಅಂತರರಾಷ್ಟ್ರೀಯ ಯೋಗ ದಿನವು ಭಾರತದಲ್ಲಿ ಹುಟ್ಟಿಕೊಂಡ ಪ್ರಾಚೀನ ಅಭ್ಯಾಸದ ಜಾಗತಿಕ ಆಚರಣೆಯಾಗಿದೆ ಮತ್ತು ಪ್ರಪಂಚದಾದ್ಯಂತ ಅಪಾರ ಜನಪ್ರಿಯತೆಯನ್ನು ಗಳಿಸಿದೆ. ಈ ವಿಶೇಷ ದಿನವು ಯೋಗದ ಪರಿವರ್ತಕ ಶಕ್ತಿಯ ಜ್ಞಾಪನೆಯಾಗಿ ಕಾರ್ಯನಿರ್ವಹಿಸುತ್ತದೆ, ದೈಹಿಕ ಯೋಗಕ್ಷೇಮಕ್ಕಾಗಿ ಮಾತ್ರವಲ್ಲದೆ ಮಾನಸಿಕ ಮತ್ತು ಆಧ್ಯಾತ್ಮಿಕ ಸಾಮರಸ್ಯಕ್ಕೂ ಸಹ. ವೇಗದ ಜೀವನಶೈಲಿ, ಹೆಚ್ಚುತ್ತಿರುವ ಒತ್ತಡ ಮತ್ತು ಜಡ ಅಭ್ಯಾಸಗಳಿಂದ ವ್ಯಾಖ್ಯಾನಿಸಲಾದ ಯುಗದಲ್ಲಿ ಯೋಗದ ಅಭ್ಯಾಸವು ಕ್ಷೇಮ ಮತ್ತು ನೆಮ್ಮದಿಯ ದಾರಿದೀಪವಾಗಿ ಹೊರಹೊಮ್ಮಿದೆ. ಪ್ರಾಚೀನ ಭಾರತೀಯ ತತ್ತ್ವಶಾಸ್ತ್ರದಲ್ಲಿ ಬೇರೂರಿರುವ ಯೋಗವು ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಯೋಗಕ್ಷೇಮಕ್ಕಾಗಿ ಅದರ ಗಮನಾರ್ಹ ಪ್ರಯೋಜನಗಳಿಂದಾಗಿ ವಿಶ್ವಾದ್ಯಂತ ಹೆಚ್ಚು ಜನಪ್ರಿಯ ಅಭ್ಯಾಸವಾಗಿದೆ ಎಂದರು. ಕಾರ್ಯಕ್ರಮದಿಂದ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶಶಿಕಲಾ, ಚನ್ನಕೇಶವಸ್ವಾಮಿ ದೇಗುಲ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಡಾ.ನಾರಾಯಣಸ್ವಾಮಿ, ತಾಲ್ಲೂಕು ಪಂಚಾಯತ ಇಒ ಸತೀಶ್, ಆರೋಗ್ಯಾಧಿಕಾರಿ ಡಾ.ವಿಜಯ್, ವಕೀಲ ಪುಟ್ಟಸ್ವಾಮಿಗೌಡ, ಪುರಸಭಾ ಮುಖ್ಯಾಧಿಕಾರಿ ಸುಜಯ್, ಬೆಂಗಳೂರು ನಿಮ್ಹಾನ್ ತಂಡ, ರಾಘವೇಂದ್ರ ಯೋಗ ತರಬೇತಿ ಕೇಂದ್ರ, ಪತಾಂಜಲಿ ಯೋಗ ಕೇಂದ್ರ, ಸೇರಿದಂತೆ ಮುಂತಾದವರು ಭಾಗವಹಿಸಿದ್ದರು.

ಸಂಜೆ ಟಿಪ್ಸ್

KARDA CONSTRUCTIONS
...DERS & DEVELOPERS
GLOBAL LTD)

## 20 ಮಿಲಿಯನ್ ಡಾಲರ್ ಮೌಲ್ಯದ ಉಪ ಗುತ್ತಿಗೆ ಪಡೆದ ಕೆಬಿಸಿ ಗ್ಲೋಬಲ್ ಲಿಮಿಟೆಡ್

ಕೆಬಿಸಿ ಗ್ಲೋಬಲ್ ಲಿಮಿಟೆಡ್, ಬಿಎಸ್ಇ – 541161 ಗೆ ಸಿಆರ್ ಜೆಇ (ಈಸ್ಟ್ ಆಫ್ರಿಕಾ) ಲಿಮಿಟೆಡ್ ಸುಮಾರು 20 ಮಿಲಿಯನ್ ಯುಎಸ್ ಡಾಲರ್ ಮೌಲ್ಯದ ಮಹತ್ವದ ಉಪಗುತ್ತಿಗೆಯನ್ನು ನೀಡಿದೆ. ಸಿಆರ್ ಜೆಇ ಆಫ್ರಿಕಾದಾದ್ಯಂತ ರೈಲ್ವೆ ಮತ್ತು ಪಂಚತಾರಾ ಹೋಟೆಲ್ ಗಳನ್ನು ನಿರ್ಮಿಸುವಲ್ಲಿ ಶ್ರೀಮಂತ ಇತಿಹಾಸವನ್ನು ಹೊಂದಿರುವ ಆಧುನಿಕ ಉದ್ಯಮವಾಗಿದೆ. ಈ ಗಣನೀಯ ಒಪ್ಪಂದವು ಸಾಫ್ಟ್ ಇನ್ಫ್ರಾಸ್ಟ್ರಕ್ಚರ್ನ ಸಿವಿಲ್ ಎಂಜಿನಿಯರಿಂಗ್ ವಿಭಾಗದ ಮೇಲೆ ಕೇಂದ್ರೀಕರಿಸುತ್ತದೆ ಮತ್ತು ಕೆಬಿಸಿ ಗ್ಲೋಬಲ್ಗೆ ಪ್ರಮುಖ ಮೈಲಿಗಲ್ಲನ್ನು ಪ್ರತಿನಿಧಿಸುತ್ತದೆ. ಕೆಬಿಸಿ ಗ್ಲೋಬಲ್ನ ಸಂಪೂರ್ಣ ಸ್ವಾಮ್ಯದ ಕೀನ್ಯಾದ ಅಂಗಸಂಸ್ಥೆಯಾದ ಕಾರ್ಡಾ ಇಂಟರ್ನ್ಯಾಷನಲ್ ಇನ್ಫ್ರಾಸ್ಟ್ರಕ್ಚರ್ ಲಿಮಿಟೆಡ್ ಮೂಲಕ ಈ ಒಪ್ಪಂದವನ್ನು ಪಡೆಯಲಾಗಿದೆ, ಇದು ಆಫ್ರಿಕಾದ ಮಾರುಕಟ್ಟೆಯಲ್ಲಿ ಕಂಪನಿಯ ವಿಸ್ತರಿಸುತ್ತಿರುವ ಹೆಜ್ಜೆಗುರುತನ್ನು ಒತ್ತಿಹೇಳುತ್ತದೆ. ಅಂತರರಾಷ್ಟ್ರೀಯ ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಕೆಬಿಸಿ ಗ್ಲೋಬಲ್ನ ಬೆಳೆಯುತ್ತಿರುವ ಸಾಮರ್ಥ್ಯಗಳು ಮತ್ತು ಖ್ಯಾತಿಯನ್ನು ಗುತ್ತಿಗೆ ಪ್ರಶಸ್ತಿ ಎತ್ತಿ ತೋರಿಸುತ್ತದೆ. ಈ ಯೋಜನೆಯು ಆಫ್ರಿಕಾದ ಮೂಲಸೌಕರ್ಯ ಬೆಳವಣಿಗೆಗೆ ಕೊಡುಗೆ ನೀಡುವ ಕಂಪನಿಯ ಬದ್ಧತೆಗೆ ಸಾಕ್ಷಿಯಾಗಿದೆ. ಈ ಸಾಧನೆಯೊಂದಿಗೆ, ಕೆಬಿಸಿ ಗ್ಲೋಬಲ್ ಪೂರ್ವ ಆಫ್ರಿಕಾದ ಮೂಲಸೌಕರ್ಯ ಪ್ರದೇಶಕ್ಕೆ ಗಮನಾರ್ಹ ಕೊಡುಗೆಗಳನ್ನು ನೀಡಲು ಸಜ್ಜಾಗಿದೆ.ಇನ್ನು ಚೀನಾ ರೈಲ್ವೆ ಸಚಿವಾಲಯದ ಅಡಿಯಲ್ಲಿ ಜಿಯಾನ್ಘಾಂಗ್ ಎಂಜಿನಿಯರಿಂಗ್ ಬ್ಯೂರೋದ ತಜಾರಾ ಕನ್ಸ್ಟ್ರಕ್ಷನ್ ಏಯ್ಡಿಂಗ್ ತಂಡದಿಂದ ಹುಟ್ಟಿಕೊಂಡ ಸಿಆರ್ಜೆಇ ಪೂರ್ವ ಆಫ್ರಿಕಾದಲ್ಲಿ ವ್ಯವಹಾರ ಅಭಿವೃದ್ಧಿಯನ್ನು ಹೆಚ್ಚಿಸಲು ಸ್ಥಾಪಿಸಲಾದ ಪ್ರತಿಷ್ಠಿತ ಚೀನಾ ರೈಲ್ವೆ ಕನ್ಸ್ಟ್ರಕ್ಷನ್ ಗ್ರೂಪ್ ಕಂಪನಿಯ ಭಾಗವಾಗಿದೆ.2007 ರಲ್ಲಿ ಸ್ಥಾಪನೆಯಾದ ಈ ಕಂಪನಿಯು ರಿಯಲ್ ಎಸ್ಟೇಟ್ ಉದ್ಯಮದಲ್ಲಿ ಗಮನಾರ್ಹ ಪ್ರಗತಿ ಸಾಧಿಸಿದೆ.

## ಬಟಾಣಿ ಉಪ್ಪಿಟ್ಟು

ಪಾಕ ಶಾಲೆ



### ಬೇಕಾಗಿರುವ ಪದಾರ್ಥ

1 ಕಪ್ ಸೂಜಿ ರವೆ ( ಬಾಂಬೆ ರವೆ), 1 ಕಪ್ ಬಟಾಣಿ, 1 ಟೊಮೆಟೊ, 1ಈರುಳ್ಳಿ, 3 ಹಸಿ ಮೆಣಸು, 1 ಆಲೂಗಡ್ಡೆ (ತೆಳುವಾಗಿ ಕತ್ತರಿಸಿ), 1 ಚಮಚ ಎಣ್ಣೆ/ತುಪ್ಪ, ಕರಿಬೇವು, 1 ಚಮಚ ಉದ್ದು, 1/4 ಚಮಚ ಅರಿಶಿನ ಹುಡಿ

### ಮಾಡುವ ವಿಧಾನ

ರವೆಯನ್ನು ಹುರಿದು ಇಟ್ಟುಕೊಳ್ಳಿ. ಪ್ಯಾನ್‌ಗೆ ಎಣ್ಣೆ ಹಾಕಿ ಬಿಸಿ ಮಾಡಿ, ಎಣ್ಣೆ ಬಿಸಿಯಾದಾಗ ಉದ್ದಿನ ಬೇಳೆ ಹಾಕಿ (ಬೇಕಿದ್ದರೆ ನೆಲಗಡಲೆಯನ್ನು ಸೇರಿಸಬಹುದು). ಈಗ ಈರುಳ್ಳಿ, ಹಸಿ ಮೆಣಸಿನಕಾಯಿ ಹಾಕಿ ಫ್ರೈ ಮಾಡಿ. ಈಗ ಬಟಾಣಿ, ಆಲೂಗಡ್ಡೆ ಹಾಕಿ 2 ನಿಮಿಷ ಫ್ರೈ ಮಾಡಿ. ನಂತರ ಟೊಮೆಟೊ ಹಾಕಿ, ಟೊಮೆಟೊ ಮೆತ್ತಗಾಗುವವರೆಗೆ ಫ್ರೈ ಮಾಡಿ. ನಂತರ 4 ಕಪ್ ನೀರು ಹಾಕಿ ತರಕಾರಿ ಬೇಯಿಸಿ. ತರಕಾರಿ ಬೆಂದ ಮೇಲೆ ರವೆಯನ್ನು ನಿಧಾನಕ್ಕೆ ಉದುರಿಸಿ, ಹೀಗೆ ಉದುರಿಸುವಾಗ ಗಂಟು ಕಟ್ಟಲು ಬಿಡಬೇಡಿ, ತಿರುಗುಸುತ್ತಲೇ ಇರಿ. ಉಪ್ಪಿಟ್ಟು ಬೆಂದು ಗಟ್ಟಿಯಾಗಿವಾಗ ಉರಿ ಆಫ್ ಮಾಡಿ. ಹೀಗೆ ಮಾಡಿದರೆ ಉಪ್ಪಿಟ್ಟು ರುಚಿಯಾಗಿರುತ್ತೆ.

# ಕಲ್ಕಿ 2898 ಎಡಿ ಸಿನಿಮಾ ಟ್ರೈಲರ್ ಗೆ ಸಖತ್ ರೆಸ್ಪಾನ್ಸ್



ನಾಗ್ ಅಶ್ವಿನ್ ನಿರ್ದೇಶನದ ಕಲ್ಕಿ 2898 ಎಡಿ ಸಿನಿಮಾ ಜೂನ್ 27ರಂದು ವಿಶ್ವದಾದಂತ್ಯ ರಿಲೀಸ್ ಅಗಲಿದ್ದು, ಇದರ ಬೆನ್ನಲ್ಲೇ ಎರಡನೇ ಟ್ರೈಲರ್ ರಿಲೀಸ್ ಆಗಿದೆ. ಪ್ಯಾನ್ ಇಂಡಿಯಾ ಸಿನಿಮಾ ಪ್ರಭಾಸ್ ಜೊತೆ ಅಮಿತಾ ಬಚ್ಚನ್, ದಿಶಾ ಪಟಾನಿ, ಕಮಲ್ ಹಾಸನ್ ದೀಪಿಕಾ ಪಡುಕೋಣೆ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದು ಜೂನ್ 27ರಂದು ವಿಶ್ವದಾದ್ಯಂತ ಸಿನಿಮಾ ತೆರೆ ಕಾಣಲಿದೆ. ಈಗಾಗಲೇ ಮೊದಲ ಟ್ರೈಲರ್ ಸಕ್ಕತ್ ಸದ್ದು ಮಾಡಿದ್ದು, ಸಿನಿಮಾ ರಿಲೀಸ್ ಆಗುವ ಹೊಸ್ತಿಲಲ್ಲೇ ಎರಡನೇ ಟ್ರೈಲರ್ ರಿಲೀಸ್ ಆಗಿದ್ದು ಅಭಿಮಾನಿಗಳು ಖುಷಿ ಪಟ್ಟಿದ್ದಾರೆ. ಬಹು ನಿರೀಕ್ಷಿತ ಜೂನ್ 27 ರಂದು ಥಿಯೇಟ್ರಿಕಲ್ ಬಿಡುಗಡೆ ಜೂನ್ 27 ರಂದು ತೆರೆಕಾಣಲಿದ್ದು,ನಿರ್ಮಾಪಕರು ಶುಕ್ರವಾರ, ಜೂನ್ 21 ರಂದು ಹೊಸ ಟ್ರೈಲರ್ ಅನ್ನು ಬಿಡುಗಡೆ ಮಾಡಿದರು. ದೀಪಿಕಾ ಪಡುಕೋಣೆ ಅವರ ಪಾತ್ರ ಸಿನಿಮಾದ ಒಂದು ಬಹುಮುಖ್ಯ ಅಂಗವಾಗಿ ಕಾಣಿಸಿಕೊಂಡಿದ್ದು ಮತ್ತು ಅಮಿತಾಬ್ ಬಚ್ಚನ್ ಅಶ್ವತ್ಥಾಮ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ನಾಗ್ ಅಶ್ವಿನ್ ನಿರ್ದೇಶನದ ಈ ವೈಜ್ಞಾನಿಕ ಚಿತ್ರವು ಪ್ರಭಾಸ್, ದೀಪಿಕಾ ಪಡುಕೋಣೆ, ಅಮಿತಾಬ್ ಬಚ್ಚನ್ ಮತ್ತು ದಿಶಾ ಪಟಾನಿ ಪ್ರಮುಖ ಪಾತ್ರಗಳಲ್ಲಿದ್ದಾರೆ. ಹೊಸದಾಗಿ ಬಿಡುಗಡೆಯಾದ ಟ್ರೇಲರ್ ಯುದ್ಧದಿಂದ ಮಾತ್ರವಲ್ಲದೆ ಭಾವನೆಗಳಿಂದ ಕೂಡಿದ ಪ್ರಪಂಚದ ವಿವರವಾದ ನೋಟವನ್ನು ನೀಡುತ್ತದೆ. ಎರಡು ನಿಮಿಷ ಮತ್ತು ಇಪ್ಪತ್ತೆರಡು ಸೆಕೆಂಡುಗಳ ಕ್ಲಿಪ್ ನ ಹೊಸ ಟ್ರೈಲರ್ ಪಾತ್ರಗಳನ್ನು ಬಹಿರಂಗಪಡಿಸಿದೆ. ದೀಪಿಕಾಳ ಪಾತ್ರವು ಕಲಿಯುಗದ ಮುಂಬರುವ ಅವತಾರವಾದ ಕಲ್ಕಿಯನ್ನು ಹೊತ್ತುಕೊಂಡಿರುವುದು ತೋರಿಸುತ್ತದೆ. ಅಶ್ವತ್ಥಾಮನು ಭೈರವನ (ಪ್ರಭಾಸ್ ಪಾತ್ರ) ವಿರುದ್ಧ ಹೋರಾಡುವ ಮೊದಲು ದೇವರು ನಿನ್ನ ಗರ್ಭದಲ್ಲಿ ನೆಲೆಸಿದ್ದಾನೆ ಎಂದು ಹೇಳುವುದು ಕೇಳಿಬರುತ್ತದೆ. ಕಮಲ್ ಹಾಸನ್ ಅವರ ಪಾತ್ರವನ್ನು ಅಂತಿಮವಾಗಿ ಟ್ರೇಲರ್ನಲ್ಲಿ ಬಹಿರಂಗಪಡಿಸಲಾಗಿದೆ. ನಾಗ್ ಅಶ್ವಿನ್ ನಿರ್ದೇಶನದ ಚಿತ್ರದಲ್ಲಿ ತಮಿಳಿನ ಸೂಪರ್ ಸ್ಟಾರ್ ಋಷಿ ಪಾತ್ರದಲ್ಲಿ ನಟಿಸಿದ್ದಾರೆ.

# ಹಸಿರು ಬಟಾಣಿ ಪ್ರಯೋಜನ

ಹೆಲ್ತ್ ಟಿಪ್ಸ್



ಹಸಿರು ಬಟಾಣಿ ರುಚಿಕರ ಮಾತ್ರವಲ್ಲ, ಅವು ಪೋಷಕಾಂಶಗಳ ಸಮೃದ್ಧ ಮೂಲವಾಗಿದೆ. ಒಂದು ಕಪ್ ಹಸಿರು ಬಟಾಣಿ ಜೀವಸತ್ವಗಳು ಮತ್ತು ಖನಿಜಗಳನ್ನು ಹೊಂದಿರುತ್ತದೆ. ಹಸಿರು ಬಟಾಣಿ ಒಂದು ಕಪ್ನಲ್ಲಿ 8 ಗ್ರಾಂ ಪ್ರೋಟೀನ್ ಹೊಂದಿರುವ ಉತ್ತಮ ಸಸ್ಯ ಆಧಾರಿತ ಪ್ರೋಟೀನ್ ಮೂಲವಾಗಿದೆ.

ಹಸಿರು ಬಟಾಣಿ ಕಡಿಮೆ ಗ್ಲೈಸೆಮಿಕ್ ಇಂಡೆಕ್ಸ್ (ಜಿಐ) ಆಹಾರವಾಗಿದೆ. ಇದರರ್ಥ ಇವುಗಳನ್ನು ತಿಂದರೇ ನಿಮ್ಮ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಹೆಚ್ಚಾಗುವುದಿಲ್ಲ... ಇವುಗಳಲ್ಲಿ ನಾರಿನಂಶವೂ ಅಧಿಕವಾಗಿರುತ್ತದೆ. ಇದು ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

ಅಲ್ಲದೇ ಹಸಿರು ಬಟಾಣಿ ಹೃದಯದ ಆರೋಗ್ಯಕ್ಕೆ ತುಂಬಾ ಒಳ್ಳೆಯದು. ಪೊಟ್ಯಾಸಿಯಮ್ ರಕ್ತದೊತ್ತಡವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಇದು ಹೃದ್ರೋಗದ ಅಪಾಯವನ್ನು ಕಡಿಮೆ ಮಾಡುತ್ತದೆ.

ಹಸಿರು ಬಟಾಣಿ ಕ್ಯಾನ್ಸರ್ ತಡೆಗಟ್ಟಲು ಸಹಾಯ ಮಾಡುತ್ತದೆ ಎಂಬುದಕ್ಕೆ ಕೆಲವು ಪುರಾವೆಗಳಿವೆ. ಅವು ರೋಗ ನಿರೋಧಕಗಳು ಮತ್ತು ಇತರ ಪೋಷಕಾಂಶಗಳ ಉತ್ತಮ ಮೂಲವಾಗಿದ್ದು, ಜೀವಕೋಶಗಳನ್ನು ಹಾನಿಯಿಂದ ರಕ್ಷಿಸಲು ಮತ್ತು ಕ್ಯಾನ್ಸರ್ ಕೋಶಗಳ ಬೆಳವಣಿಗೆಯನ್ನು ತಡೆಯಲು ಸಹಾಯ ಮಾಡುತ್ತದೆ.

–ಈ ಹಣ್ಣನ್ನು ತಿನ್ನಿ ಸಾಕು.. ಮೂಳೆಯ ಸಂದುಗಳಲ್ಲಿ ಅಂಡಿಕೊಂಡ ಯುರಿಕ್ ಆಸಿಡ್ ಕರಗಿ ಹೊರ ಹೋಗುವುದು!

ಹಸಿರು ಬಟಾಣಿಯು ಪ್ರೋಟೀನ್, ಫೈಬರ್, ಜೀವಸತ್ವಗಳು ಮತ್ತು ಖನಿಜಗಳು ಸೇರಿದಂತೆ ಮಕ್ಕಳಿಗೆ ಅಗತ್ಯವಿರುವ ಅನೇಕ ಪೋಷಕಾಂಶಗಳ ಉತ್ತಮ ಮೂಲವಾಗಿದೆ.

ಹಸಿರು ಬಟಾಣಿ ಮ್ಯಾಂಗನೀಸ್ ಮತ್ತು ರಂಜಕದ ಉತ್ತಮ ಮೂಲವಾಗಿದೆ. ಇವು ಮೂಳೆಗಳನ್ನು ರಕ್ಷಿಸಲು ಮತ್ತು ಬಲಪಡಿಸಲು ಸಹಾಯ ಮಾಡುತ್ತವೆ..

ಹಸಿರು ಬಟಾಣಿ ವಿಟಮಿನ್ ಸಿ, ಮೆಗ್ನೀಸಿಯಮ್ ಮತ್ತು ಪೊಟ್ಯಾಸಿಯಮ್ನ ಉತ್ತಮ ಮೂಲವಾಗಿದೆ. ಈ ಪೋಷಕಾಂಶಗಳು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು, ಹೃದಯದ ಆರೋಗ್ಯವನ್ನು ಸುಧಾರಿಸಲು ಮತ್ತು ಒಟ್ಟಾರೆ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ.

## 'ಡಾರ್ಕ್ ಸರ್ಕಲ್' ಗೆ ಮನೆಮದ್ದು

ಬ್ಯೂಟಿ ಟಿಪ್ಸ್



ಸರಿಯಾಗಿ ನಿದ್ರೆ ಇಲ್ಲದಿದ್ದರೆ, ಅಥವಾ ಮೊಬೈಲ್, ಟಿವಿ ಅತೀಯಾದ ವೀಕ್ಷಣೆಯಿಂದ ಕೂಡ ಕೆಲವೊಮ್ಮೆ ಕಣ್ಣಿನ ಕೆಳಭಾಗದಲ್ಲಿ ಕಪ್ಪು ವರ್ತುಲ ಕಾಣಿಸಿಕೊಳ್ಳುವುದಕ್ಕೆ ಶುರುವಾಗುತ್ತೆ. ಇದರಿಂದ ಮುಖದ ಸೌಂದರ್ಯವೇ ಹಾಳಾಗುತ್ತದೆ. ಕಣ್ಣಿನ ಕೆಳಭಾಗ ಸೂಕ್ಷ್ಮವಾಗಿರುವುದರಿಂದ ಹಾನಿಕಾರವಾದ ಕ್ರೀಂಗಳನ್ನು ಬಳಸಲು ಸಾಧ್ಯವಿಲ್ಲ. ಹಾಗಾಗಿ ಮನೆಯಲ್ಲಿಯೇ ಸಿಗುವ ಕೆಲವು ವಸ್ತುಗಳನ್ನು ಉಪಯೋಗಿಸಿಕೊಂಡು ಈ ಕಪ್ಪು ವರ್ತುಲವನ್ನು ಕಡಿಮೆ ಮಾಡಿಕೊಳ್ಳಬಹುದು. 2 ಟೇಬಲ್ ಸ್ಪೂನ್ ನಷ್ಟು ಮೊಸರು ತೆಗೆದುಕೊಳ್ಳಿ. ಅದಕ್ಕೆ ೪ ಟೇಬಲ್ ಸ್ಪೂನ್ ನಷ್ಟು ಕಡಲೇ ಹಿಟ್ಟು, ೪ ಟೀ ಸ್ಪೂನ್ ನಷ್ಟು ಅರಿಶಿನ ಹಾಕಿ ಚೆನ್ನಾಗಿ ಮಿಶ್ರಣ ಮಾಡಿಕೊಳ್ಳಿ. ಮೊದಲು ಕಣ್ಣನ್ನು ಚೆನ್ನಾಗಿ ಒಂದು ಹತ್ತಿಯ ಬಟ್ಟೆಯ ಸಹಾಯದಿಂದ ಕ್ಲೀನ್ ಮಾಡಿಕೊಂಡು ಅದಕ್ಕೆ ಈ ಮಿಶ್ರಣವನ್ನು ಹಚ್ಚಿಕೊಳ್ಳಿ. 10 ನಿಮಿಷ ಬಿಟ್ಟು ತೊಳೆದುಕೊಳ್ಳಿ. ನಂತರ ಈ ಭಾಗವನ್ನು ಒರೆಸಿಕೊಂಡು, ಸ್ವಲ್ಪ ಆಲಿವ್ ಎಣ್ಣೆ ತೆಗೆದುಕೊಂಡು ಮಸಾಜ್ ಮಾಡಿಕೊಳ್ಳಿ. ಇದನ್ನು ವಾರದಲ್ಲಿ ಮೂರು ಬಾರಿ ಮಾಡುವುದರಿಂದ ಕಣ್ಣಿನ ಸುತ್ತ ಇರುವ ಕಪ್ಪು ವರ್ತುಲ ಕಡಿಮೆಯಾಗುತ್ತದೆ. ಇನ್ನು 8 ಗಂಟೆ ಹೊತ್ತು ಚೆನ್ನಾಗಿ ನಿದ್ರಿಸುವುದರಿಂದ ಕೂಡ ಈ ಕಪ್ಪು ವರ್ತುಲ ಕಡಿಮೆಯಾಗುತ್ತದೆ.

ಹಾಗೇ ವಿಟಮಿನ್ ಸಿ ಇರುವ ಹಣ್ಣು ತರಕಾರಿಗಳನ್ನು ಚೆನ್ನಾಗಿ ತಿನ್ನಿರಿ. ದಿನಕ್ಕೆ 3 ಲೀಟರ್ ನೀರನ್ನು ಕುಡಿಯುವುದರಿಂದ ಕೂಡ ಈ ಸಮಸ್ಯೆ ನಿವಾರಣೆಯಾಗುತ್ತದೆ.

# ಕರ್ನಾಟಕದಲ್ಲಿ ಹಬ್ಬದ ನೆಪದಲ್ಲಿ ಹಸುಗಳು, ಗೂಳಿಗಳ ಮಾರಣ ಹೋಮ



ಪ್ರತಿ ವರ್ಷ ಈ ಸಮಯದಲ್ಲಿ ಜಾನುವಾರು ಮಾಫಿಯಾ ಗರಿಗೆದರುತ್ತದೆ. ತಮ್ಮ ಅನೈತಿಕ ಚಟುವಟಿಕೆಗಳನ್ನು ತೀವ್ರಗೊಳಿಸುತ್ತದೆ. ಹಬ್ಬದ ನೆಪದಲ್ಲಿ ದನಗಳನ್ನು, ಗೂಳಿಗಳನ್ನು ಕಾಣೆಯಾಗಿಸುತ್ತದೆ. ಗೋ ಜ್ಞಾನ ಫೌಂಡೇಶನ್ (ಜಿಜಿಎಫ್) ಕಳೆದ ಒಂದು ದಶಕದಿಂದ ಗೋವುಗಳ ಅಕ್ರಮ ಕಳ್ಳಸಾಗಣೆ ಮತ್ತು ಹತ್ಯೆಯನ್ನು ಲಭ್ಯವಿರುವ ಎಲ್ಲಾ ಕಾನೂನು ಕಾನೂನು ಮಾರ್ಗಗಳ ನಿಗ್ರಹಿಸಲು ಅಪಾರ ಶ್ರಮ ಪಡುತ್ತಿದೆ. ಜಿಜಿಎಫ್ ಅನ್ನುವುದು ಸ್ವಯಂಸೇವಕರೇ ಕಟ್ಟಿಕೊಂಡಿರುವ ಒಂದು ಸಂಸ್ಥೆಯಾಗಿದ್ದು, ಈ ಸಂಸ್ಥೆಯಲ್ಲಿ ವಿವಿಧ ರಾಜ್ಯಗಳ, ವಿಭಿನ್ನ ವೃತ್ತಿಗಳ, ವಿಭಿನ್ನ ಧರ್ಮಗಳ ಮತ್ತು ವಿವಿಧ ವಯೋಮಾನದ ತಂಡಗಳು ಜೊತೆಯಾಗಿ ಅಕ್ರಮ ಕಳ್ಳಸಾಗಣೆ ಮತ್ತು ಜಾನುವಾರುಗಳ ಹತ್ಯೆಗೆ ಅಂತ್ಯ ಹಾಡುವ ಉದ್ದೇಶದಿಂದ ಕಾರ್ಯ ನಿರ್ವಹಿಸುತ್ತಿವೆ.

ಈ ಕುರಿತು ಕುತೂಹಲಕರ ಮಾಹಿತಿ ಹಂಚಿಕೊಳ್ಳುವ ಜಿಜಿಎಫ್ನಲ್ಲಿಏಳುವರ್ಷಗಳಿಂದಸ್ವಯಂಸೇವಕರಾಗಿರುವ ಶ್ರೀ ಸಂಜಯ್ (ಐಟಿ ಪ್ರೊಫೆಷನಲ್), ಯಾವುದೇ ಧರ್ಮ ಅಥವಾ ಯಾವುದೇ ಧಾರ್ಮಿಕ ಹಬ್ಬಗಳ ವಿರುದ್ಧ ನಾವು ಕೆಲಸ ಮಾಡುವುದಿಲ್ಲ ಎಂಬುದನ್ನು ಇಲ್ಲಿ ಸ್ಪಷ್ಟಪಡಿಸಲು ಬಯಸುತ್ತೇವೆ. ಅದರ ಜೊತೆಗೆ ನಮ್ಮ ದೇಶದ ಕಾನೂನು ಸರ್ವೋಚ್ಚವಾಗಿದೆ ಮತ್ತು ಧರ್ಮದ ಕಾರಣಕ್ಕೆ ಅದರಲ್ಲಿ ರಾಜಿಯಾವುದಿಲ್ಲ ಎಂಬುದನ್ನೂ ನಂಬುತ್ತೇವೆ. ಈದ್ ತ್ಯಾಗದ, ಬಲಿದಾನದ ಹಬ್ಬ. ಆ ಹಬ್ಬ ಕಾನೂನುಬಾಹಿರ ಗೋಹತ್ಯೆಗೆ ಕರೆ ನೀಡುವುದಿಲ್ಲ ಅಥವಾ ಗೋಹತ್ಯೆಯನ್ನು ಬಯಸುವುದೂ ಇಲ್ಲ. ಅದರಿಂದಾಗಿ ನಮ್ಮ ರಾಜ್ಯದ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ಬರುವುದು ಮಾತ್ರವಲ್ಲ, ಅಂಥಾ ಚಟುವಟಿಕೆಗುಳು ಎಲ್ಲಿ ನಡೆಯುತ್ತವೆಯೋ ಆಯಾ ಪ್ರದೇಶಗಳಲ್ಲಿ ವಾಸಿಸುವ ನಿವಾಸಿಗಳ ಕ್ಷೇಮ ಮತ್ತು ಸುರಕ್ಷತೆಯ ಬಗ್ಗೆ ತೀವ್ರ ಕಳವಳವನ್ನೂ ಉಂಟು ಮಾಡುತ್ತದೆ'' ಎಂದು ಹೇಳುತ್ತಾರೆ.

ಕಳೆದ ಒಂದು ವಾರದಲ್ಲಿ ಜಿಜಿಎಫ್ ಕರ್ನಾಟಕ ರಾಜ್ಯದಲ್ಲಿ ನಡೆದ ಗೋವುಗಳ ಅಕ್ರಮ ಸಂಗ್ರಹಣೆ ಮತ್ತು ಗೋವುಗಳು ಹಾಗೂ ಗೂಳಿಗಳ ಹತ್ಯೆಯ ವಿವಿಧ ಘಟನೆಗಳನ್ನು ಪತ್ತೆ ಹಚ್ಚಿದೆ. ಕೆಲವು ಪ್ರಕರಣಗಳಲ್ಲಿ ಪೊಲೀಸರು ಸೂಕ್ತ ಬೆಂಬಲ ನೀಡಿದ್ದಾರೆ, ಬಹುತೇಕ ಪ್ರಕರಣಗಳಲ್ಲಿ ಕಠಿಣ ಕ್ರಮಗಳನ್ನು ತೆಗೆದುಕೊಳ್ಳಬೇಕಾಗಿದೆ. ಕೆಲವು ಪ್ರಕರಣಗಳ ಪಟ್ಟಿಯನ್ನು ಈ ಕೆಳಗೆ ನೀಡಲಾಗಿದೆ:

ಜೆಜೆ ನಗರ ಪೊಲೀಸ್ ಸ್ಟೇಷನ್(ಪಿಎಸ್), ಬೆಂಗಳೂರು – ಅಕ್ರಮ ಹತ್ಯೆಗಾಗಿ 100ಕ್ಕೂ ಹೆಚ್ಚು ಜಾನುವಾರುಗಳನ್ನು ಸಂಗ್ರಹಿಸಲಾಗಿದ್ದು, ಬೀದಿಗಳಲ್ಲಿ ಮಾರಣ ಹೋಮ ನಡೆಯುತ್ತಿದೆ. ಜಿಜಿಎಫ್ ತಂಡ ಈಗಾಗಲೇ ಈ ಕುರಿತು ವಿಡಿಯೋ ಮಾಡಿ ಪೊಲೀಸರಿಗೆ ಲಿಖಿತದೂರುನೀಡಿದೆ.ಪೊಲೀಸರುಜಾನುವಾರುಗಳನ್ನು ರಕ್ಷಿಸಿರುವುದಾಗಿ ಹೇಳಿಕೊಂಡಿದ್ದರೂ, ಯಾವುದೇ ಎಫ್ಐಆರ್ ದಾಖಲಾಗಿಲ್ಲ ಮತ್ತು ಎಷ್ಟು ಮಂದಿಯನ್ನು ವಶಪಡಿಸಿಕೊಂಡಿದ್ದಾರೆ ಅಥವಾ ಎಲ್ಲಿ ಪುನರ್ವಸತಿ ಮಾಡಲಾಗಿದೆ ಎಂಬುದರ ಕುರಿತು ಯಾವುದೇ ಮಾಹಿತಿಯನ್ನು ನೀಡಲಾಗಿಲ್ಲ. ಬಹುಶಃ ಪೊಲೀಸರು ಮಾಫಿಯಾದೊಂದಿಗೆ ಕೈಜೋಡಿಸಲು ಪ್ರಯತ್ನಿಸುತ್ತಿದ್ದಾರೆಯೇ ಎಂಬ ಅನುಮಾನ ಬರುವಂತಾಗಿದೆ.

ಕೆ.ಜಿ.ಹಳ್ಳಿ ಪಿಎಸ್, ಬೆಂಗಳೂರು ನಗರ – 1 ಕರುವನ್ನು ರಕ್ಷಿಸಿ ಹೆಸರಘಟ್ಟದಲ್ಲಿರುವ ಗೋಶಾಲೆಗೆ ಕಳುಹಿಸಲಾಗಿದೆ, ದಿನಾಂಕ 16.06.2024 ರಂದು ಎನ್ಸಿಆರ್ 607/24 ಆಗಿದ್ದು, ಆದರೆ ಯಾವುದೇ ಎಫ್ ಐಆರ್ ಮಾಡಿಲ್ಲ. ಅಕ್ರಮ ಗೋಮಾಂಸ ಅಂಗಡಿಯಲ್ಲಿ ಕರು ಪತ್ತೆಯಾಗಿದ್ದು, ಅಕ್ರಮ ಕಸಾಯಿ ಖಾನೆ ವಿರುದ್ಧ ಕ್ರಮ ಕೈಗೊಂಡಿಲ್ಲ.

ಹೊಸಕೋಟೆ ಪಿಎಸ್, ಬೆಂಗಳೂರು ಜಿಲ್ಲೆ – 1 ಒಂಟೆಯನ್ನು ರಕ್ಷಿಸಿ ಹೊಸಕೋಟೆ ಗೋಶಾಲೆಗೆ ಕಳುಹಿಸಲಾಗಿದೆ. ಕುಮಾರಸ್ವಾಮಿ ಲೇಔಟ್, ಬೆಂಗಳೂರು ನಗರ – 2 ಗೂಳಿಗಳನ್ನು ರಕ್ಷಿಸಿ ಕನಕಪುರ ರಸ್ತೆಯ ಗೋಶಾಲೆಗೆ ಕಳುಹಿಸಲಾಗಿದೆ.

ಭಾರತಿ ನಗರ ಪಿಎಸ್, ಬೆಂಗಳೂರು ನಗರ – 38 ಜಾನುವಾರುಗಳಲ್ಲಿ 37 ಅನ್ನು ರಕ್ಷಿಸಲಾಗಿದೆ ಮತ್ತು ಮಹದೇವಪುರ ಗೋಶಾಲೆಗೆ ಕಳುಹಿಸಲಾಗಿದೆ. ದಿನಾಂಕ 04.06.2024 ರಂದು ಎನ್ ಸಿ ಆರ್ 80/24 ಆಗಿದ್ದು, ಯಾವುದೇ ಎಫ್ಐಆರ್ ಮಾಡಲಾಗಿಲ್ಲ. ಎಸಿಪಿ, ಬಿಬಿಎಂಪಿ ಮತ್ತು ಎಎಚ್ ಅಧಿಕಾರಿಗಳ ನೇತೃತ್ವದ 10 ಪೊಲೀಸ್ ಅಧಿಕಾರಿಗಳು ಯಾವುದೇ ಪತ್ರ ಅಥವಾ ನ್ಯಾಯಾಲಯದ ಆದೇಶವಿಲ್ಲದೆ 37 ಜಾನುವಾರುಗಳನ್ನು 4 ದಿನಗಳ ನಂತರ ಹಿಂತಿರುಗಿಸಿದ್ದಾರೆ. ಗೌರವಾನ್ವಿತ ನ್ಯಾಯಾಲಯವನ್ನು ಸಂಪರ್ಕಿಸುವ ಮೂಲಕ ಈ ಜಾನುವಾರುಗಳನ್ನು ರಕ್ಷಿಸಲು ಜಿಜಿಎಫ್ ಹೆಣಗಾಡುತ್ತಿದೆ. ಹಾಲೇನಹಳ್ಳಿ, ಕಲ್ಲಂಬೆಳ್ಳ ಪಿಎಸ್, ತುಮಕೂರು – ತಂಡದಿಂದ ಅಕ್ರಮ ಸಂಗ್ರಹಣೆ ಬಗ್ಗೆ ವರದಿ ಮಾಡಲಾಗಿತ್ತು. ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ, ವ್ಯಕ್ತಿಯ ವಿವರಗಳನ್ನು ತೆಗೆದುಕೊಂಡರು. ಆದರೆ ಜಾನುವಾರುಗಳನ್ನು ವಶಪಡಿಸಿಕೊಳ್ಳಲಿಲ್ಲ. ಪೊಲೀಸರ ಪ್ರಕಾರ ಅವರೆಲ್ಲಾ ರೈತರು ಮತ್ತು ಅವರು ಕಾಂಕ್ರೀಟ್ ಕಾಡಿನಲ್ಲಿ ಆ ದನಗಳನ್ನು ಉಳುಮೆಗೆ ಬಳಸುತ್ತಿದ್ದರು!

ಕಲಬುರ್ಗಿಯ ಬಸ್ಸ್ಟ್ಯಾಂಡ್ ಎದುರು ಜೇವರ್ಗಿ ಪಿಎಸ್, ಕಲಬುರ್ಗಿ – 4 ಗೂಳಿಗಳನ್ನು ಕೂಡಿಹಾಕಿರುವುದು ಕಂಡುಬಂದಿದೆ. ಪೊಲೀಸರು ಈ ಪ್ರಕರಣಕ್ಕೆ ಗಮನ ನೀಡಿದರು. ಆದರೆ ಅವುಗಳನ್ನು ಆರೋಪಿ ಕಲೀಲ್ ಪಾಷಾಗೆ ಹಿಂತಿರುಗಿಸಿದ್ದಾರೆ. ಯಾವುದೇ ಎಫ್ಐಆರ್ ದಾಖಲು ಮಾಡಿಲ್ಲ.

ಜೋಪಾದಪಟ್ಟಿ, ಜೇವರ್ಗಿ ಪಿಎಸ್, ಕಲಬುರ್ಗಿ – ತಂಡಕ್ಕೆ 1 ಜಾನುವಾರು ಕುರಿತು ತಿಳಿದಿದ್ದು, ಆ ಕುರಿತು ಜಿಪಿಎಸ್ ಲೊಕೇಷನ್ ಮತ್ತು ಫೋಟೋವನ್ನು ಸಹ ಹಂಚಿಕೊಳ್ಳಲಾಗಿದೆ. ಆದರೆ ಪೊಲೀಸರು ಯಾವುದೇ ಕ್ರಮ ಕೈಗೊಂಡಿಲ್ಲ.

ಶಹಾಪುರ ಪಿಎಸ್, ಯಾದಗಿರಿ ಜಿಲ್ಲೆ– 8 ಜಾನುವಾರುಗಳನ್ನು ರಕ್ಷಿಸಿ ಸಂಗಮೇಶ್ವರ ಗೋಶಾಲೆಗೆ ಕಳುಹಿಸಲಾಗಿದೆ. ಎಫ್ಐಆರ್ 111/24 ಅನ್ನು ಪಿಸಿಎ 1960, ಕರ್ನಾಟಕ ಪ್ರಿವೆನ್ಶನ್ ಆಫ್ ಸ್ಲಾಟರ್ ಆಂಡ್ ಪ್ರಿಸರ್ವೇಷನ್ ಆಫ್ ಕ್ಯಾಟಲ್ ಆಕ್ಟ್ 2020ರ ಪ್ರಕಾರ ದಾಖಲಿಸಲಾಗಿದೆ. ವಶಕ್ಕೆ ತೆಗೆದುಕೊಳ್ಳದೆ, ಅಕ್ರಮವಾಗಿ ಜಾನುವಾರು ಸಾಗಾಟ ಮಾಡುತ್ತಿದ್ದ ವಾಹನವನ್ನು ಆರೋಪಿಗಳಿಗೆ ಬಿಡುಗಡೆ ಮಾಡಲಾಗಿದೆ.

ರಾಯಚೂರು ಗ್ರಾಮಾಂತರ, ರಾಯಚೂರು ಜಿಲ್ಲೆ– 5 ಜಾನುವಾರುಗಳನ್ನು ರಕ್ಷಿಸಲಾಗಿದೆ. ಆದರೆ ಎಫ್ಐಆರ್ನಲ್ಲಿ ಪಿಸಿಎ 1960 ಅನ್ನು ಮಾತ್ರ ಹಾಕಲಾಗಿದೆ. ಈ ಸಂದರ್ಭದಲ್ಲಿ ದನದ ಮಾಫಿಯಾ ಜಿಜಿಎಫ್ ಸ್ವಯಂಸೇವಕರ ಮೇಲೆ ದಾಳಿ ನಡೆಸಿದ್ದು, ಅವರಲ್ಲಿ ಇಬ್ಬರು ತೀವ್ರವಾಗಿ ಗಾಯಗೊಂಡು ಈಗ ಆಸ್ಪತ್ರೆಯಲ್ಲಿದ್ದಾರೆ. ಪೊಲೀಸರು ಕೌಂಟರ್ 99, 100 ಮತ್ತು 101/24 ಸೇರಿದಂತೆ 3 ಎಫ್ಐಆರ್ಗಳನ್ನು ದಾಖಲಿಸಿದ್ದಾರೆ

ಧಾರವಾಡ ಉಪನಗರ ಪಿಎಸ್, ಧಾರವಾಡ ಜಿಲ್ಲೆ – 27 ಜಾನುವಾರುಗಳನ್ನು ಜೂನ್ 10 ರಂದು ರಕ್ಷಿಸಲಾಗಿದೆ ಮತ್ತು ಸರ್ಕಾರದ ಗೋಶಾಲೆಗೆ ಕಳುಹಿಸಲಾಗಿದೆ. ಎಫ್ ಐಆರ್ 106/24 ದಾಖಲಿಸಲಾಗಿದೆ. ಜಾನುವಾರುಗಳ ಕುರಿತು ಮಾಹಿತಿ ನೀಡಿದ ಜಿಜಿಎಫ್ ಸ್ವಯಂಸೇವಕನ ಮೇಲೆ ಮಾಫಿಯಾ ದಾಳಿ ನಡೆಸಿದೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಸಾಲ ತೀರಿಸಿದ ಸಂತೃಪ್ತಿ, ಶರೀರಕ್ಕೆ ಪೆಟ್ಟಾಗುವ ಸಾಧ್ಯತೆ, ಕೋರ್ಟ್ ವ್ಯವಹಾರಗಳಲ್ಲಿ ಜಯ.

**ವೃಷಭ:** ರಾಜಕಾರಣಿಗಳಿಗೆ ಪ್ರತಿಷ್ಠೆ, ಸಾಧು ಸಂತರ ದರ್ಶನದಿಂದ ಶುಭ, ಮನಸ್ಸು ನಿಯಂತ್ರಣದಲ್ಲಿ ಇರುವುದಿಲ್ಲ.

**ಮಿಥುನ:** ಹೈನುಗಾರಿಕೆಯಲ್ಲಿ ಲಾಭ, ಕಾರ್ಮಿಕರಿಗೆ ಶುಭ, ದುಶ್ಚಟಗಳಿಂದ ತೊಂದರೆ.

**ಕಟಕ:** ಆಸ್ತಿ ಖರೀದಿಯಲ್ಲಿ ಎಚ್ಚರಿಕೆ, ವೈದ್ಯಕೀಯ ವೃತ್ತಿಯವರಿಗೆ ಶುಭ, ಪಾಲುದಾರಿಕೆ ವ್ಯವಹಾರದಲ್ಲಿ ಏರುಪೇರು.

**ಸಿಂಹ:** ಪಾಲುದಾರಿಕೆ ವ್ಯವಹಾರದಲ್ಲಿ ಲಾಭ, ಉದ್ಯೋಗದಲ್ಲಿ ಬದಲಾವಣೆ, ಸರ್ಕಾರದಿಂದ ಧನಸಹಾಯ.

**ಕನ್ಯಾ:** ಬಂಧುಗಳಿಂದ ಕಿರಿಕಿರಿ, ಆಹಾರವಸ್ತುಗಳ ಪೂರೈಕೆದಾರರಿಗೆ ಲಾಭ, ಬೆನ್ನುನೋವಿನ ತೊಂದರೆ ಉಂಟಾಗಬಹುದು.

**ತುಲಾ:** ವಿದ್ಯಾರ್ಥಿಗಳು ಹೆಚ್ಚಿನ ಶ್ರಮ ವಹಿಸಬೇಕು, ಅಜೀರ್ಣದಿಂದ ಆರೋಗ್ಯದಲ್ಲಿ ವ್ಯತ್ಯಾಸ, ಧನ ಸಹಾಯ.

**ವೃಶ್ಚಿಕ:** ಅನಾವಶ್ಯಕ ವಾದ ವಿವಾದವಿರುತ್ತದೆ, ಆರ್ಥಿಕತೆಯಲ್ಲಿ ಸುಧಾರಣೆ ಕಾಣುವಿರಿ, ಆರೋಗ್ಯ ಉತ್ತಮವಾಗಿರುತ್ತದೆ.

**ಧನು:** ಹೈನುಗಾರಿಕೆಯಲ್ಲಿ ಸರಾಸರಿ ಲಾಭ, ವಿದ್ಯಾರ್ಥಿಗಳಿಗೆ ಹೆಚ್ಚಿನ ಅವಕಾಶಗಳು ಲಭ್ಯ, ಪ್ಲಾಸ್ಟಿಕ್ ಉದ್ದಿಮೆಯಲ್ಲಿ ನಷ್ಟ.

**ಮಕರ:** ವಕೀಲರಿಗೆ ಕೀರ್ತಿ ಲಭ್ಯ, ವಾಣಿಜ್ಯ ಅಧ್ಯಯನದಲ್ಲಿ ಶುಭ, ಸಾಲ ಮರುಪಾವತಿ ಯೋಗ,

**ಕುಂಭ:** ದೀರ್ಘ ಪ್ರಯಾಣ ಮಾಡಬೇಕಾಗುವುದು, ದೂರದ ವ್ಯವಹಾರಗಳಲ್ಲಿ ಪ್ರಗತಿ, ಉತ್ತಮ ಧನಲಾಭ ಸಂಭವ.

**ಮೀನ:** ಅನಿರೀಕ್ಷಿತ ಧನ ಸಹಾಯ, ವೈಯಕ್ತಿಕ ವಿಚಾರಗಳತ್ತ ಗಮನಹರಿಸಿ, ಉನ್ನತ ವ್ಯಾಸಂಗದಲ್ಲಿ ಶುಭ.

# ಅಂತಾರಾಷ್ಟ್ರೀಯ ವಿಧವೆಯರ ದಿನ




ಪ್ರತಿ ವರ್ಷ ಜೂನ್ 23 ಅಂತಾರಾಷ್ಟ್ರೀಯ ವಿಧವೆಯರ ದಿನವನ್ನು ಆಚರಿಸಲಾಗುತ್ತಿದೆ.

ಒಂದು ಹೆಣ್ಣು ಸಂಗಾತಿಯನ್ನು ಕಳೆದುಕೊಂಡು ಬದುಕುವುದು ಕಷ್ಟದ ಕೆಲಸ. ಮನೆ ಹಾಗೂ ಮಕ್ಕಳನ್ನು ಬೆಳೆಸುವ ಸಂಪೂರ್ಣ ಜವಾಬ್ದಾರಿಯೂ ಆಕೆಯ ಮೇಲೆ ಬೀಳುವ ಕಾರಣ ಅನಿವಾರ್ಯವಾಗಿ ಉದ್ಯೋಗವನ್ನು ಮಾಡಲೇಬೇಕು. ಆದರೆ ಇಂದಿನ ಮಹಿಳೆಯರು ಶೈಕ್ಷಣಿಕವಾಗಿ ಮುಂದುವರೆದಿದ್ದರೂ ಬದುಕನ್ನು ನಿಭಾಯಿಸಿಕೊಂಡು ಹೋಗುತ್ತಾರೇನೋ ನಿಜ. ಆದರೆ ಇವತ್ತಿಗೂ ನಮ್ಮ ಸಮಾಜವು ಆಕೆಯನ್ನು ನೋಡುವ ದೃಷ್ಟಿಯೇ ಬೇರೆ. ಭಾರತೀಯ ಸಂಸ್ಕೃತಿಯೂ ವಿಧವೆಯರನ್ನು ಎಲ್ಲಾ ರೀತಿಯಿಂದಲೂ ದೂರವೇ ಇಟ್ಟಿದೆ. ಧಾರ್ಮಿಕ ವಿಧಿ ವಿಧಾನಗಳಲ್ಲಿ ಪಾಲ್ಗೊಳ್ಳುವಂತಿಲ್ಲ ಎಂದು ಆಕೆಯನ್ನು ಕಟ್ಟಿ ಹಾಕಿದೆ. ಈ ಎಲ್ಲವನ್ನು ಮೀರಿ ಆಕೆಯೂ ತನ್ನ ಬದುಕನ್ನು ಕಟ್ಟಿಕೊಳ್ಳುವ ದೊಡ್ಡ ಸವಾಲು ಆಕೆಯ ಮುಂದಿದೆ. ಹೀಗಾಗಿ ವಿಧವೆಯರು ಎದುರಿಸುತ್ತಿರುವ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿ, ಅವರನ್ನು ಸಬಲೀಕರಣಗೊಳಿಸಿ, ಧೈರ್ಯವನ್ನು ತುಂಬುವ ನಿಟ್ಟಿನಲ್ಲಿ ಅಂತಾರಾಷ್ಟ್ರೀಯ ವಿಧವೆಯರ ದಿನವನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಪ್ರತಿ ವರ್ಷ ಜೂನ್ 23 ರಂದು ಅಂತಾರಾಷ್ಟ್ರೀಯ ವಿಧವೆಯರ ದಿನವನ್ನು ಆಚರಿಸಲಾಗುತ್ತದೆ. ಯುಎನ್ ಮಾನ್ಯತೆ ಪಡೆಯುವ ಮೊದಲು ಅಂದರೆ 2005 ರಿಂದ ಲೂಂಬಾ ಫೌಂಡೇಶನ್ ಈ ದಿನವನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಹೌದು, 1954 ರಲ್ಲಿ ಈ ದಿನದಂದು ಫೌಂಡೇಶನ್ ಸಂಸ್ಥಾಪಕ ರಾಜಿಂದರ್ ಪಾಲ್ ಲೂಂಬಾ ಅವರ ತಾಯಿ ಶ್ರೀಮತಿ ಪುಷ್ಪಾ ವಾಟಿ ಲೂಂಬಾ ಅವರು ವಿಧವೆಯಾದರು. ಹೀಗಾಗಿ ಜೂನ್ 23 ರನ್ನು ಲೂಂಬಾ ಫೌಂಡೇಶನ್ ವಿಧವೆಯರ ದಿನವನ್ನಾಗಿ ಆಯ್ಕೆ ಮಾಡಿಕೊಳ್ಳಲಾಯಿತು. ಆದಾದ ಬಳಿಕ ಡಿಸೆಂಬರ್ 23, 2010 ರಂದು ಯುನೈಟೆಡ್ ನ್ಯಾಷನಲ್ ಜನರಲ್ ಅಸೆಂಬ್ಲಿ ಜೂನ್ 23 ಅನ್ನು ಅಧಿಕೃತವಾಗಿ ಅಂತಾರಾಷ್ಟ್ರೀಯ ವಿಧವೆಯರ ದಿನವನ್ನು ಘೋಷಿಸಿತು.

ಪತಿಯ ಮರಣದ ನಂತರದಲ್ಲಿ ವಿಧವೆಯರು ಅನುಭವಿಸುವ ಹಾಗೂ ಎದುರಿಸುವ ಸವಾಲುಗಳ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶವನ್ನು ಹೊಂದಿದೆ. ವಿಧವೆಯರೆಂದರೆ ಅನಿಷ್ಟರು ಎನ್ನುವ ಮೂಢನಂಬಿಕೆಯಿಂದ ಮುಕ್ತರನ್ನಾಗಿ ಮಾಡಿ ಅವರಿಗೂ ಬದುಕುವ ಹಕ್ಕಿದೆ ಎನ್ನುವ ಬಗ್ಗೆ ಜನರಿಗೆ ತಿಳಿಸುವುದಾಗಿದೆ. ಈ ಅವರಿಗೆ ಧೈರ್ಯ ತುಂಬುವ ಕೆಲಸದ ಜೊತೆಗೆ ಆರ್ಥಿಕ ನೆರವನ್ನು ನೀಡಲಾಗುತ್ತದೆ.

# ಪ್ಲಾಟ್‌ಫಾರಂ ಟಿಕೆಟ್, ಹಾಲು, ಕಾರ್ಟನ್ ಬಾಕ್ಸ್‌ಗೆ ಜಿಎಸ್ಟಿ ವಿನಾಯಿತಿ



**ನವದೆಹಲಿ:** ರೈಲ್ವೆ ಪ್ಲಾಟ್‌ಫಾರಂ ಟಿಕೆಟ್ ಖರೀದಿಸುವಾಗ ಇನ್ನು ಜಿಎಸ್ಟಿ ಹೊರೆ ಇರಲ್ಲ. ಹಾಲು, ಕಾರ್ಟನ್ ಬಾಕ್ಸ್‌ಗಳ ಮೇಲಿನ ಜಿಎಸ್ಟಿ ಇಳಿಸಿದ ಕಾರಣ ಸ್ವಲ್ಪ ಅಗ್ಗವಾಗಲಿವೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರ ಅಧ್ಯಕ್ಷತೆಯಲ್ಲಿ ಶನಿವಾರ ನಡೆದ 53ನೇ ಸರಕು ಮತ್ತು ಸೇವಾ ತೆರಿಗೆ (ಜಿಎಸ್ಟಿ) ಮಂಡಳಿ ಸಭೆ ಈ ಕುರಿತ ತೀರ್ಮಾನವನ್ನು ತೆಗೆದುಕೊಳ್ಳಲಾಗಿದೆ.

ಸರ್ಕಾರದ ಅಧಿಕಾರಿಗಳು ಸಚಿವರ ಗುಂಪಿನ (ಜಿಒಎಂ) ಶಿಫಾರಸುಗಳ ಆಧಾರದ ಮೇಲೆ ವಿವಿಧ ಸರಕುಗಳು ಮತ್ತು ಸೇವೆಗಳ ತೆರಿಗೆ ದರಗಳ ಬಗ್ಗೆ ನಡೆದ ಸಭೆಯಲ್ಲಿ ಚರ್ಚಿಸಲಾಗಿದೆ.

ನಕಲಿ ಇನ್ವಾಯ್ಸ್‌ಗಳ ಮೂಲಕ ಮಾಡಿದ ಮೋಸದ ಇನ್ಪುಟ್ ಟ್ಯಾಕ್ಸ್ ಕ್ರೆಡಿಟ್ ಕ್ಲೈಮ್‌ಗಳನ್ನು ಎದುರಿಸುವ ಸಲುವಾಗಿ ಪ್ಯಾನ್-ಇಂಡಿಯಾ ಆಧಾರದ ಮೇಲೆ ಬಯೋಮೆಟ್ರಿಕ್ ಆಧಾರಿತ ಆಧಾರ್ ದೃಢೀಕರಣವನ್ನು ಪರಿಚಯಿಸುವ ಪ್ರಸ್ತಾವನೆಯನ್ನು ಜಿಎಸ್ಟಿ ಕೌನ್ಸಿಲ್ ಇದೇ ಸಭೆಯಲ್ಲಿ ಅನುಮೋದನೆ ನೀಡಿದೆ. ಹಣಕಾಸು ಸಚಿವರ ನೇತೃತ್ವದ ಸಮಿತಿಯು ವಿವಿಧ ಮೇಲ್ಮನವಿ ಪ್ರಾಧಿಕಾರಗಳ ಮುಂದೆ ತೆರಿಗೆ ಇಲಾಖೆಯಿಂದ ಮೇಲ್ಮನವಿಗಳನ್ನು ಸಲ್ಲಿಸಲು ವಿತ್ತೀಯ ಮಿತಿಯನ್ನು ಕೂಡ ನಿಗದಿಪಡಿಸಿದೆ.

ಸಭೆಯಲ್ಲಿ ಕೇಂದ್ರ ಹಣಕಾಸು ರಾಜ್ಯ ಸಚಿವ ಪಂಕಜ್ ಚೌಧರಿ, ಗೋವಾ ಮತ್ತು ಮೇಘಾಲಯದ ಮುಖ್ಯಮಂತ್ರಿಗಳು, ಬಿಹಾರ, ಹರಿಯಾಣ, ಮಧ್ಯಪ್ರದೇಶ ಮತ್ತು ಒಡಿಶಾದ ಉಪಮುಖ್ಯಮಂತ್ರಿಗಳು, ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಹಣಕಾಸು ಸಚಿವರು (ಶಾಸಕಾಂಗಗಳೊಂದಿಗೆ) ಮತ್ತು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

# ತೈವಾನ್ ದ್ವೀಪದ ಬಳಿ ಚೀನಾದ 41 ಯುದ್ಧವಿಮಾನ



**ತೈಪೆ:** ಶನಿವಾರ ಬೆಳಗ್ಗಿನವರೆಗಿನ 24 ಗಂಟೆ ಅವಧಿಯಲ್ಲಿ ತೈವಾನ್ ದ್ವೀಪದ ಸುತ್ತಲೂ ಚೀನಾ ಮಿಲಿಟರಿಗೆ ಸೇರಿದ 41 ಯುದ್ಧವಿಮಾನಗಳನ್ನು ಪತ್ತೆಹಚ್ಚಿರುವುದಾಗಿ ತೈವಾನ್ನ ರಕ್ಷಣಾ ಸಚಿವಾಲಯ ಶನಿವಾರ ಹೇಳಿದೆ. ತೈವಾನ್ ಸ್ವಾತಂತ್ರ್ಯದ ಬಗ್ಗೆ ಪಟ್ಟುಬಿಡದೆ ಪ್ರತಿಪಾದಿಸುವವರು ಮರಣದಂಡನೆಗೆ ಗುರಿಯಾಗಲಿದ್ದಾರೆ ಎಂದು ಚೀನಾ ಎಚ್ಚರಿಕೆ ನೀಡಿದ ಬಳಿಕದ ಬೆಳವಣಿಗೆ ಇದಾಗಿದೆ. ಸ್ವಯಂ ಆಡಳಿತದ ಪ್ರಜಾಪ್ರಭುತ್ವ ವ್ಯವಸ್ಥೆಯ ತೈವಾನ್ ತನ್ನ ಪ್ರದೇಶದ ಭಾಗವಾಗಿದ್ದು ಅದನ್ನು ತನ್ನ ನಿಯಂತ್ರಣಕ್ಕೆ ತರಲು ಬಲಪ್ರಯೋಗಕ್ಕೂ ಹಿಂಜರಿಯುವುದಿಲ್ಲ ಎಂದು ಚೀನಾ ಹೇಳುತ್ತಿದೆ. ತೈವಾನ್ ಸುತ್ತಮುತ್ತ ಸಮರಾಭ್ಯಾಸ ನಡೆಸಿ ಒತ್ತಡ ಹೇರುತ್ತಿರುವ ಚೀನಾ, ಕಳೆದ ತಿಂಗಳು ಲಾಯ್ ಚಿಂಗ್ಟೆ ತೈವಾನ್ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಒತ್ತಡ ತಂತ್ರವನ್ನು ಹೆಚ್ಚಿಸಿದೆ. ಚೀನಾದ 41 ಯುದ್ಧವಿಮಾನಗಳು ಹಾಗೂ ನೌಕಾಪಡೆಯ 7 ನೌಕೆಗಳು ತೈವಾನ್ ಸುತ್ತ ಕಂಡುಬಂದಿವೆ. ಇದರಲ್ಲಿ 32 ಯುದ್ಧವಿಮಾನಗಳು ತೈವಾನ್ ಜಲಸಂಧಿಯ ಮಧ್ಯದ ರೇಖೆಯನ್ನು ದಾಟಿದೆ. ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದ್ದು ಸೂಕ್ತ ರೀತಿಯಲ್ಲಿ ಪ್ರತಿಕ್ರಿಯಿಸಲಾಗುವುದು ಎಂದು ತೈವಾನ್ನ ವಿದೇಶಾಂಗ ಸಚಿವಾಲಯ ಶನಿವಾರ ಹೇಳಿದೆ. ಚೀನಾದಿಂದ ತೈವಾನನ್ನು ಬೇರ್ಪಡಿಸುವ 180 ಕಿ.ಮೀ ಜಲಮಾರ್ಗವನ್ನು ವಿಭಜಿಸುವ ರೇಖೆಯನ್ನು ಮಧ್ಯದ ರೇಖೆಯೆಂದು ಗುರುತಿಸಲಾಗಿದೆ.

## ಬಂದೂಕುಗಳ ಖರೀದಿಗೆ 42,000 ಸ್ತ್ರೀಯರ ಅರ್ಜಿ!

**ಜೆರುಸಲೇಂ:** ಇಸ್ರೇಲ್ ಮೇಲೆ ಕಳೆದ ವರ್ಷ ಹಮಾಸ್ ಉಗ್ರರು ನಡೆಸಿದ ದಾಳಿ ಆ ರಾಷ್ಟ್ರದ ಚಿತ್ರಣವನ್ನೇ ಬದಲಿಸಿದ್ದು, ಅಲ್ಲಿನ ಮಹಿಳೆಯರು ತಮ್ಮ ಆತ್ಮರಕ್ಷಣೆಗಾಗಿ ಬಂದೂಕು ಖರೀದಿಗೆ ಮುಂದಾಗಿದ್ದಾರೆ! ದಾಳಿ ಬಳಿಕ ಬರೋಬ್ಬರಿ 42,000 ಮಹಿಳೆಯರು ಪರವಾನಿಗೆಗೆ ಅರ್ಜಿ ಸಲ್ಲಿಸಿದ್ದಾರೆ. ಇಸ್ರೇಲ್ ರಕ್ಷಣ ಸಚಿವಾಲಯದ ಮಾಹಿತಿ ಪ್ರಕಾರ, ಕಳೆದ ವರ್ಷ ಅ.7 ರಂದು ಹಮಾಸ್ ದಾಳಿ ನಡೆದ ಬಳಿಕ ಬಂದೂಕು ಪರವಾನಿಗೆಗೆ ಅರ್ಜಿ ಸಲ್ಲಿಸಿರುವವರ ಪ್ರಮಾಣ ದಾಳಿಗೂ ಮುಂಚಿನ ಪ್ರಮಾಣಕ್ಕಿಂತ 3 ಪಟ್ಟು ಹೆಚ್ಚಾಗಿದೆ. ದಾಳಿ ಬಳಿಕ ಅರ್ಜಿ ಸಲ್ಲಿಸಿರುವ 42,000 ಮಹಿಳೆಯರ ಪೈಕಿ 18,000 ಅರ್ಜಿಗಳಿಗೆ ಈಗಾಗಲೇ ಅನುಮೋದನೆ ಸಿಕ್ಕಿದೆ. ಸಂಪೂರ್ಣ ಇಸ್ರೇಲ್ ಹಾಗೂ ಇಸ್ರೇಲ್ ಮಿಲಿಟರಿ ವಶದಲ್ಲಿರುವ ಪಶ್ಚಿಮ ದಂಡೆಯಲ್ಲಿರುವ 15,000 ಮಹಿಳೆಯರು ಬಂದೂಕುಗಳನ್ನು ಹೊಂದಿದ್ದು, 10000 ಮಹಿಳೆಯರು ಬಂದೂಕು ಪರವಾನಿಗೆಗೆ ಕಡ್ಡಾಯವಾಗಿರುವ ತರಬೇತಿ ಪಡೆಯಲು ನೋಂದಾಯಿಸಿ ಕೊಂಡಿದ್ದಾರೆ. ನಾಗರಿಕರು ಶಸ್ತ್ರಾಸ್ತ್ರ ಹೊಂದುವುದನ್ನು ಇಸ್ರೇಲ್ ರಕ್ಷಣ ಸಚಿವ ಇತಮಾರ್ ಬೆನ್ ಜೆವಿರ್ ಪ್ರೋತ್ಸಾಹಿಸಿದ್ದರು. 2022ರಲ್ಲಿ ಪರವಾನಿಗೆ ಪಡೆದ ಇಸ್ರೇಲಿಗರ ಸಂಖ್ಯೆ 1ಲಕ್ಷ ದಾಟಿತ್ತು.



# ಯಾವುದೇ ಮಾಧ್ಯಮಗಳಿಗೆ ಮಾಹಿತಿ ನೀಡದಂತೆ ಯುಪಿ ಸರ್ಕಾರಿ ನೌಕರರಿಗೆ ನಿರ್ಬಂಧ

**ಲಖನೌ:** ಉತ್ತರ ಪ್ರದೇಶ ಸರ್ಕಾರ, ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಮತ್ತು ಇತರೆ ಯಾವುದೇ ಮಾಧ್ಯಮಗಳಿಗೆ ಸರ್ಕಾರದ ನಿರ್ಧಾರಗಳಿಗೆ ಸಂಬಂಧಿಸಿದಂತೆ ಯಾವುದೇ ಮಾಹಿತಿ ನೀಡದಂತೆ ರಾಜ್ಯ ಸರ್ಕಾರಿ ನೌಕರರಿಗೆ ನಿರ್ಬಂಧ ವಿಧಿಸಿ ಸುತ್ತೋಲೆ ಹೊರಡಿಸಿದೆ.

ಈ ಸಂಬಂಧ ನೇಮಕಾತಿ ಮತ್ತು ಸಿಬ್ಬಂದಿ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ದೇವೇಶ್ ಚತುರ್ವೇದಿ ಅವರು ಬುಧವಾರ ಹೊರಡಿಸಿದ ಸುತ್ತೋಲೆಯಲ್ಲಿ, ಸರ್ಕಾರದ ನಿರ್ಧಾರಗಳನ್ನು ಸಾಮಾಜಿಕ ಮಾಧ್ಯಮ, ಮುದ್ರಣ ಮಾಧ್ಯಮ, ಎಲೆಕ್ಟ್ರಾನಿಕ್, ಡಿಜಿಟಲ್ ಅಥವಾ ರೇಡಿಯೊದಂತಹ ಯಾವುದೇ ಪ್ರಸಾರ ಮಾಧ್ಯಮಗಳಲ್ಲಿ ಪೂರ್ವಾನುಮತಿ ಇಲ್ಲದೆ ಮಾತನಾಡುವುದು, ಪೋಸ್ಟ್ ಮಾಡುವುದು ಅಥವಾ ಬರೆಯುವುದನ್ನು ರಾಜ್ಯದ ಸರ್ಕಾರಿ ನೌಕರರಿಗೆ ನಿರ್ಬಂಧಿಸಲಾಗಿದೆ.

ಈ ಸುತ್ತೋಲೆಯು ಅಸ್ತಿತ್ವದಲ್ಲಿರುವ ನಿಯಮಗಳ ವಿಸ್ತರಣೆಯಾಗಿದ್ದು, ರಾಜ್ಯ ಸರ್ಕಾರಿ ನೌಕರರು ಮುದ್ರಣ, ಡಿಜಿಟಲ್ ಮಾಧ್ಯಮ, ಟೆಲಿಕಾಸ್ಟ್ ಅಥವಾ ಪ್ರಸಾರ ಮಾಧ್ಯಮಗಳಲ್ಲಿ ಯಾವುದೇ ರೀತಿಯ ಬರವಣಿಗೆಯಲ್ಲಿ ತೊಡಗಿಸಿಕೊಳ್ಳುವ ಮೊದಲು ಅನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಆದಾಗ್ಯೂ, ಸರ್ಕಾರದ ಮೂಲಗಳಿಂದ ಮಾಹಿತಿಯ ಹರಿವನ್ನು ನಿಯಂತ್ರಿಸುವ ಉದ್ದೇಶದಿಂದ ಕಾರ್ಯಗತಗೊಳಿಸಲಾದ ಅಸ್ತಿತ್ವದಲ್ಲಿರುವ ನಿಯಮಗಳಲ್ಲಿ ಈ ಕ್ರಮವು ಮಹತ್ವದ ನೀತಿ ಬದಲಾವಣೆಯಾಗಿ ಕಂಡುಬರುತ್ತದೆ.

ದಿನ ಪತ್ರಿಕೆಗಳು ಮತ್ತು ರೆಡಿಯೋದಲ್ಲಿ ಸರ್ಕಾರದ ಟೀಕೆಗೆ ಸಂಬಂಧಿಸಿದಂತೆ ಹೊಸ ನಿಬಂಧನೆಗಳನ್ನು ಪರಿಚಯಿಸಲಾಗಿದೆ ಎಂದು ನೇಮಕಾತಿ ಮತ್ತು ಸಿಬ್ಬಂದಿ ವಿಭಾಗದ ಕಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಯಾರಾದರೂ ಮಾನದಂಡಗಳನ್ನು ಉಲ್ಲಂಘಿಸುವುದು ಅಥವಾ ಸರ್ಕಾರದ ಸುತ್ತೋಲೆಗಳಿಂದ ನಿರ್ಣಾಯಕ ಮಾಹಿತಿಯನ್ನು ಸೋರಿಕೆ ಮಾಡುವುದು ಕಂಡುಬಂದರೆ ಅವರ ವಿರುದ್ಧ ಕಠಿಣ ಕ್ರಮವನ್ನು ತೆಗೆದುಕೊಳ್ಳಲಾಗುತ್ತದೆ ಎಂದು ಮತ್ತೊಬ್ಬ ಅಧಿಕಾರಿ ಹೇಳಿದ್ದಾರೆ.



# ನಮಗೆ ಭಾರತ ವಿಶ್ವಾಸಾರ್ಹ ಮಿತ್ರ : ಬಾಂಗ್ಲಾದೇಶದ ಪ್ರಧಾನಿ

**ನವದೆಹಲಿ:** ಬಾಂಗ್ಲಾದೇಶದ ಸ್ವಾತಂತ್ರ್ಯಕ್ಕೆ ಭಾರತದ ಸರ್ಕಾರ ಮತ್ತು ಜನರು ನೀಡಿದ ಕೊಡುಗೆಯನ್ನು ನಾನು ಕೃತಜ್ಞತೆಯಿಂದ ಸ್ಮರಿಸುತ್ತೇನೆ. 1971 ರಲ್ಲಿ ನಮ್ಮ ವಿಮೋಚನಾ ಯುದ್ಧದಲ್ಲಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ ಭಾರತದ ವೀರ ಯೋಧರಿಗೆ ನಾನು ಆಳವಾದ ಗೌರವವನ್ನು ಸಲ್ಲಿಸುತ್ತೇನೆ ಎಂದು ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಹೇಳಿದರು. ಶನಿವಾರ ಪ್ರಧಾನಿ ನರೇಂದ್ರ ಮೋದಿ ಜತೆ ನಿಯೋಗ ಮಟ್ಟದ ಮಾತುಕತೆ ನಡೆಸಿದ ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನನಗೆ ನೀಡಿದ ಆಹ್ವಾನಕ್ಕಾಗಿ ಪ್ರಧಾನಿ ಮೋದಿಯವರಿಗೆ ಕೃತಜ್ಞತೆ ಸಲ್ಲಿಸುವೆ. 1971 ರಲ್ಲಿ ಬಾಂಗ್ಲಾದೇಶದ ವಿಮೋಚನಾ ಯುದ್ಧದ ಸಮಯದ ಬಳಿಕ ನಿರಂತರ ಬಾಂಧವ್ಯವ ಉಲ್ಲೇಖಿಸಿದ ಅವರು, ಭಾರತವನ್ನು ಪ್ರಮುಖ ನೆರೆಯ, ವಿಶ್ವಾಸಾರ್ಹ ಮಿತ್ರ ಮತ್ತು ನಿರ್ಣಾಯಕ ಪ್ರಾದೇಶಿಕ ಪಾಲುದಾರ ಎಂದು ಹೇಳಿದರು. 2021ರಲ್ಲಿ ಬಾಂಗ್ಲಾದೇಶದಲ್ಲಿ ಮಹತ್ವದ ಆಚರಣೆಗಳಲ್ಲಿ ಭಾಗವಹಿಸುವ ಭಾರತದ ಗೌರವಾನ್ವಿತ ಅಧ್ಯಕ್ಷರು ಮತ್ತು ಪ್ರಧಾನ ಮಂತ್ರಿಗಳು ಸೇರಿದಂತೆ ಗಮನಾರ್ಹ ಭೇಟಿಗಳೊಂದಿಗೆ ಉಭಯ ದೇಶಗಳ ನಡುವಿನ ನಿರಂತರ ಉನ್ನತ ಮಟ್ಟದ ಯೋಜನೆಗಳನ್ನು ಇತ್ತೀಚಿನ ವರ್ಷಗಳಲ್ಲಿ ಕಂಡಿದೆ ಎಂದರು.

ರಾಜಕೀಯ, ಭದ್ರತೆ, ವ್ಯಾಪಾರ, ಸಂಪರ್ಕ, ಸಾಮಾನ್ಯ ನದಿಗಳಿಂದ ನೀರು ಹಂಚಿಕೆ, ವಿದ್ಯುತ್ ಮತ್ತು ಇಂಧನ ಮತ್ತು ಪ್ರಾದೇಶಿಕ ಮತ್ತು ಬಹುಪಕ್ಷೀಯ ಸಹಕಾರವನ್ನು ಒಳಗೊಂಡ ಉತ್ಪಾದಕ ಚರ್ಚೆಯ ಬಳಿಕ ಪರಸ್ಪರ ಸಮೃದ್ಧಿ ಮತ್ತು ಪ್ರಗತಿಗಾಗಿ ಸಹಕರಿಸುವ ತಮ್ಮ ಬದ್ಧತೆಯನ್ನು ಮೋದಿ ಮತ್ತು ಹಸೀನಾ ಪುನರುಚ್ಚರಿಸಿದ್ದಾರೆ.



## ದೆಹಲಿ ನನ್ನ ತಂದೆಯ ಮುಂದೆ ತಲೆಬಾಗುತ್ತಿದೆ: ಶಿವರಾಜ್ ಚೌಹಾಣ್ ಪುತ್ರ

**ದೆಹಲಿ:** ಲೋಕಸಭೆ ಚುನಾವಣೆಯಲ್ಲಿ ಗೆಲುವಿನ ನಂತರ ಇಡೀ ದೆಹಲಿ ತನ್ನ ತಂದೆಯ ಮುಂದೆ ತಲೆಬಾಗುತ್ತಿದೆ ಎಂದು ಮಧ್ಯಪ್ರದೇಶದ ಮಾಜಿ ಮುಖ್ಯಮಂತ್ರಿ ಶಿವರಾಜ್ ಸಿಂಗ್ ಚೌಹಾಣ್ ಅವರ ಪುತ್ರ ಕಾರ್ತಿಕೇಯ ಸಿಂಗ್ ಹೇಳಿದ್ದಾರೆ. ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಅವರು, ನಾನು ದೆಹಲಿಯಲ್ಲಿ ಉಳಿದುಕೊಂಡು ಈಗಷ್ಟೇ ಮರಳಿದ್ದೇನೆ. ಈ ಹಿಂದೆಯೂ ನಮ್ಮ ನಾಯಕ (ಶಿವರಾಜ್ ಚೌಹಾಣ್) ಮುಖ್ಯಮಂತ್ರಿಯಾಗಿ ಜನಪ್ರಿಯರಾಗಿದ್ದರು. ಆದರೆ ಅವರು ಮುಖ್ಯಮಂತ್ರಿಯಾಗಿಲ್ಲದಿದ್ದಾಗ ಏಕೆ ಹೆಚ್ಚು ಜನಪ್ರಿಯರಾದರು ಎಂದು ನನಗೆ ತಿಳಿದಿಲ್ಲ. ಈಗ, ನಮ್ಮ ನಾಯಕ ದೊಡ್ಡ ಗೆಲುವಿನ ನಂತರ ಹೋದಾಗ, ಇಡೀ ದೆಹಲಿ ಇಂದು ಅವರ ಮುಂದೆ ತಲೆಬಾಗುತ್ತಿದೆ ಎಂದರು. ಇಡೀ ದೆಹಲಿ ಕೂಡ ಅವರನ್ನು ತಿಳಿದಿದೆ, ಗುರುತಿಸುತ್ತದೆ, ಗೌರವಿಸುತ್ತದೆ. ದೆಹಲಿ ಮಾತ್ರವಲ್ಲ, ಕಾಶ್ಮೀರದಿಂದ ಕನ್ಯಾಕುಮಾರಿಯವರೆಗೆ ನಾವು ಅಗ್ರ ನಾಯಕರನ್ನು ಲೆಕ್ಕ ಹಾಕಿದರೆ, ನಮ್ಮ ನಾಯಕ ಶಿವರಾಜ್ ಸಿಂಗ್ ಚೌಹಾಣ್ ಆ ಪಟ್ಟಿಯಲ್ಲಿದ್ದಾರೆ ಎಂದು ಹೇಳಿದರು.ಕಾರ್ತಿಕೇಯ ಸಿಂಗ್ ಹೇಳಿಕೆಗೆ ಮಧ್ಯಪ್ರದೇಶ ಕಾಂಗ್ರೆಸ್ ಮುಖ್ಯಸ್ಥ ಜಿತು ಪಟ್ವಾರಿ ತಿರುಗೇಟು ನೀಡಿದ್ದಾರೆ. ಈ ಹೇಳಿಕೆಯು ದೆಹಲಿಗೆ ಹೆದರಿದೆ, ಬಿಜೆಪಿಯೊಳಗೆ ಭಿನ್ನಾಭಿಪ್ರಾಯದ ಭಯವಿದೆ ಎಂದು ಸೂಚಿಸುತ್ತದೆ ಎಂದು ಹೇಳಿದರು.



# ರಷ್ಯಾ ಕ್ಷಿಪಣಿ ದಾಳಿಯಲ್ಲಿ ಉಕ್ರೇನ್ ವಿದ್ಯುತ್ ಸ್ಥಾವರಕ್ಕೆ ಹಾನಿ

**ಕೀವ್:** ಆಗ್ನೇಯ ಮತ್ತು ಪಶ್ಚಿಮ ಉಕ್ರೇನ್ನಲ್ಲಿ ಇಂಧನ ವ್ಯವಸ್ಥೆಗಳನ್ನು ಗುರಿಯಾಗಿಸಿ ಶನಿವಾರ ರಶ್ಯ ಕ್ಷಿಪಣಿ ಮತ್ತು ಡ್ರೋನ್‌ಗಳ ಮಳೆಗರೆದಿದ್ದು ವಿದ್ಯುತ್ ಸ್ಥಾವರಗಳಿಗೆ ತೀವ್ರ ಹಾನಿಯಾಗಿದೆ. ಇಬ್ಬರು ಸಿಬಂದಿಗಳು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ದಾಳಿಯ ಬಳಿಕ ವಿದ್ಯುತ್ ಪೂರೈಕೆ ಮೊಟಕುಗೊಂಡಿದ್ದು ದಾಖಲೆ ಪ್ರಮಾಣದಲ್ಲಿ ಆಮದು ಮಾಡಿಕೊಳ್ಳುವ ಅನಿವಾರ್ಯತೆ ಎದುರಾಗಿದೆ. ಆಗ್ನೇಯ ಉಕ್ರೇನ್ನಲ್ಲಿ ಝುಪೋರಿಝಿಯಾ ಪ್ರಾಂತ ಮತ್ತು ಪಶ್ಚಿಮದ ಲಿವಿವ್ನಲ್ಲಿನ ವಿದ್ಯುತ್ ವ್ಯವಸ್ಥೆಗಳಿಗೆ ವ್ಯಾಪಕ ಹಾನಿಯಾಗಿದೆ. ಝುಪೋರಿಝಿಯಾ ಸ್ಥಾವರದ ಇಬ್ಬರು ಸಿಬಂದಿಗಳು ಗಾಯಗೊಂಡಿದ್ದು ಆಸ್ಪತ್ರೆಗೆ ದಾಖಲಿಸಲಾಗಿದೆ. ಪಶ್ಚಿಮ ಉಕ್ರೇನ್‌ನಲ್ಲಿ ಅನಿಲ ಮೌಲಸೌಕರ್ಯ ವ್ಯವಸ್ಥೆಗೂ ಹಾನಿಯಾಗಿದೆ ಎಂದು ಉಕ್ರೇನ್ನ ರಾಷ್ಟ್ರೀಯ ಗ್ರಿಡ್ ನಿರ್ವಾಹಕ 'ಉಕ್ರನೆರ್ಗೊ' ಹೇಳಿದೆ. ಮಾರ್ಚ್‌ನಿಂದ ಶತ್ರುಗಳ ಪಡೆ ವಿದ್ಯುತ್ ವ್ಯವಸ್ಥೆಯ ಮೇಲೆ 8 ಬಾರಿ ಬೃಹತ್ ದಾಳಿ ನಡೆಸಿರುವುದರಿಂದ ಇಂಧನ ಕ್ಷೇತ್ರದಲ್ಲಿ ಸಮಸ್ಯೆ ಹೆಚ್ಚಿದೆ ಎಂದು ಉಕ್ರೇನ್ನ ಇಂಧನ ಸಚಿವಾಲಯ ಹೇಳಿದೆ. ಉಕ್ರೇನ್‌ನ ಮಿಲಿಟರಿ ಉತ್ಪಾದನೆಗೆ ನೆರವಾಗುತ್ತಿದ್ದ ಶಸ್ತ್ರಾಸ್ತ್ರ ಡಿಪೊಗಳು ಹಾಗೂ ಇಂಧನ ವ್ಯವಸ್ಥೆಗಳನ್ನು ಗುರಿಯಾಗಿಸಿ ಯುದ್ಧವಿಮಾನ ಮತ್ತು ಸಮರನೌಕೆಗಳ ಮೂಲಕ ದೀರ್ಘ ವ್ಯಾಪ್ತಿಯ ಕ್ಷಿಪಣಿಗಳು ಮತ್ತು ಡ್ರೋನ್‌ಗಳ ಮೇಲೆ ನಡೆಸಿದ ದಾಳಿ ಯಶಸ್ವಿಯಾಗಿದೆ ಎಂದು ರಶ್ಯದ ರಕ್ಷಣಾ ಇಲಾಖೆ ಹೇಳಿದೆ.



## ಹಮಾಸ್ ಸಂಪೂರ್ಣವಾಗಿ ಮುಗಿಸಲು ಸಾಧ್ಯವಿಲ್ಲ

**ತೆಲ್ ಅವಿವ (ಇಸ್ರೇಲ್):** ಗಾಝಾ ಪಟ್ಟಿಯಲ್ಲಿ ಕಳೆದ 8 ತಿಂಗಳಿಗಿಂತಲೂ ಹೆಚ್ಚಿನ ಸಮಯದಿಂದ ಯುದ್ಧ ಮುಂದುವರೆದಿದ್ದರೂ ಕೂಡ ಇಸ್ರೇಲ್ ಗೆ ಅಪೇಕ್ಷಿತ ಯಶಸ್ಸು ದೊರೆತಿಲ್ಲ. ಅದರ ನಕಾರಾತ್ಮಕ ಪರಿಣಾಮ ದೇಶದ ಸೈನ್ಯದಲ್ಲಿನ ಉನ್ನತ ಅಧಿಕಾರಿಗಳು ಮತ್ತು ಪ್ರಧಾನಮಂತ್ರಿ ಬೆಂಜಮೀನ್ ನೇತನ್ಯಾಹೂ ಇವರಲ್ಲಿನ ಸಂಬಂಧಪಟ್ಟವರ ಮೇಲೆ ಕಂಡು ಬರುತ್ತಿದೆ. ಇಸ್ರೇಲಿನ ಸೈನ್ಯದ ವಕ್ತಾರರು ಹಮಾಸ್ ಗೆ ಸಂಪೂರ್ಣವಾಗಿ ಮುಗಿಸಲು ಸಾಧ್ಯವಿಲ್ಲ, ಎಂದು ಹೇಳಿಕೆ ನೀಡಿದ್ದಾರೆ. ಈ ಹೇಳಿಕೆಯಿಂದ ಪ್ರಧಾನಮಂತ್ರಿ ಬೆಂಜಮಿನ್ ನೆತನ್ಯಾಹೂ ಇವರ 'ಹಮಾಸ್ ದ ಸಂಪೂರ್ಣ ನಾಶ ಮಾಡುವುದು, ಇದು ಸರಕಾರದ ಎಲ್ಲಕ್ಕಿಂತ ದೊಡ್ಡ ಉದ್ದೇಶವಾಗಿದೆ', ಈ ವಿಷಯದ ದಾವೆಯ ಬಗ್ಗೆ ಪ್ರಶ್ನೆ ಕೇಳಲಾಗುತ್ತಿದೆ. ಈ ಹೇಳಿಕೆಯಿಂದ ಇಸ್ರೇಲ್ ನಲ್ಲಿ ಚರ್ಚೆ ಆರಂಭವಾಗಿದ್ದು ಸೈನ್ಯದ ಸ್ಪಷ್ಟೀಕರಣ ನಂತರ ಕೂಡ ಇದರ ಬಗ್ಗೆ 'ಸರಕಾರದ ಜೊತೆಗೆ ಸಂಘರ್ಷ'ವೆಂದೇ ನೋಡಲಾಗುತ್ತಿದೆ.



# ಅಮೇರಿಕಾದ ಫೀನಿಕ್ಸ್‌ನಲ್ಲಿ 115 ಡಿಗ್ರಿಗೆ ಏರಿದ ತಾಪಮಾನ

**ನ್ಯೂಯಾರ್ಕ್:** ಈ ವಾರ ತಾಪಮಾನವು 115 ಡಿಗ್ರಿ ಫ್ಯಾರನ್ಹೀಟ್ (46 ಸೆಲ್ಸಿಯಸ್) ತಲುಪಿದ ಮೆಟ್ರೋ ಫೀನಿಕ್ಸ್‌ನಲ್ಲಿ ಈ ವರ್ಷ ಇಲ್ಲಿಯವರೆಗೆ ಕನಿಷ್ಠ ಆರು ಜನರು ಶಾಖ ಸಂಬಂಧಿತ ಕಾರಣಗಳಿಂದ ಸಾವನ್ನಪ್ಪಿದ್ದಾರೆ ಎಂದು ಮಾರಿಕೋಪಾ ಕೌಂಟಿ ಸಾರ್ವಜನಿಕ ಆರೋಗ್ಯ ಇಲಾಖೆ ಈ ವಾರ ವರದಿ ಮಾಡಿದೆ. ಕಳೆದ ಶನಿವಾರದವರೆಗೆ ಶಾಖ ಸಂಬಂಧಿತ ಕಾರಣಗಳಿಗಾಗಿ ಇನ್ನೂ 87 ಸಾವುಗಳು ತನಿಖೆಯಲ್ಲಿವೆ ಎಂದು ಸಾರ್ವಜನಿಕ ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ. ಫೀನಿಕ್ಸ್ ಗುರುವಾರ ಮತ್ತು ಶುಕ್ರವಾರ 115 ಡಿಗ್ರಿ ಎಫ್ (46 ಸಿ) ಅನ್ನು ಮುಟ್ಟಿತು, ಇದು ಇಲ್ಲಿಯವರೆಗೆ 2024 ರ ಅತ್ಯಂತ ಬಿಸಿಯಾದ ದಿನಗಳಾಗಿವೆ. ಶುಕ್ರವಾರ ಯುನೈಟೆಡ್ ಸ್ಟೇಟ್ಸ್‌ನ ಹೆಚ್ಚಿನ ಭಾಗದಲ್ಲಿ ಹೆಚ್ಚು ತಾಪಮಾನ ದಾಖಲಾಗಿದೆ, ಹಲವಾರು ಪ್ರದೇಶಗಳು ದಾಖಲೆಯ ತಾಪಮಾನವನ್ನು ಕಾಣುವ ನಿರೀಕ್ಷೆಯಿದೆ. ಮುಂದಿನ ಕೆಲವು ದಿನಗಳಲ್ಲಿ ನಾವು ಸ್ವಲ್ಪ ಮಳೆಯನ್ನು ನೋಡಬಹುದು ಏಕೆಂದರೆ ಫೀನಿಕ್ಸ್‌ಗೆ 30% ಅವಕಾಶವಿದೆ ಎಂದು ರಾಷ್ಟ್ರೀಯ ಹವಾಮಾನ ಸೇವೆಯ ಹವಾಮಾನ ತಜ್ಞ ರಯಾನ್ ವರ್ಲಿ ಹೇಳಿದ್ದಾರೆ. ಸುಮಾರು 110 ಡಿಗ್ರಿಗಳಿಗೆ ಸ್ವಲ್ಪ ತಂಪಾಗಬಹುದು, ಆದರೆ ಮುಂದಿನ ವಾರ ತಾಪಮಾನವು ಮತ್ತೆ ಹೆಚ್ಚಾಗಬಹುದು ಎಂದರು. ಸೊನೊರಾನ್ ಮರುಭೂಮಿಯಲ್ಲಿರುವ ಮಾರಿಕೋಪಾ ಕೌಂಟಿ ಕಳೆದ ವರ್ಷ 645 ಶಾಖ ಸಂಬಂಧಿತ ಸಾವುಗಳನ್ನು ಕಂಡಿದೆ, ಇದು 425 ಕ್ಕಿಂತ ಸುಮಾರು 50% ಹೆಚ್ಚಾಗಿದೆ.



# ತಜಕಿಸ್ತಾನ್‌ನಲ್ಲಿ ಹಿಜಾಬ್ ನಿಷೇಧ!



**ದುಶಾನ್ಬೆ (ತಜಿಕಿಸ್ತಾನ್):** ಸೋವಿಯತ್ ರಷ್ಯಾದಿಂದ ಸ್ವತಂತ್ರಗೊಂಡಿರುವ ಮುಸ್ಲಿಂ ಬಹುಸಂಖ್ಯಾತ ರಾಷ್ಟ್ರವಾದ ತಜಕಿಸ್ತಾನ್ ಔಪಚಾರಿಕವಾಗಿ ಹಿಜಾಬ್ ಅನ್ನು ನಿಷೇಧಿಸಿದೆ. ಈ ಬಗ್ಗೆ ಸಂಸತ್ತಿನ ಮೇಲ್ಮನೆಯು ಜೂನ್ 19 ರಂದು ಒಂದು ಮಸೂದೆಯನ್ನು ಅಂಗೀಕರಿಸಿತು.

ಈ ನಿಷೇಧವನ್ನು ಉಲ್ಲಂಘಿಸುವವರಿಗೆ ದಂಡ ವಸೂಲಿ ಮಾಡಲಾಗುವುದು ಎಂದು ಆದೇಶಿಸಿದೆ.

ಕಳೆದ ಅನೇಕ ವರ್ಷಗಳಿಂದ ತಜಕಿಸ್ತಾನದಲ್ಲಿ ಹಿಜಾಬ್ ಮೇಲೆ ಅಘೋಷಿತ ನಿಷೇಧವಿದೆ. ಈಗ ಸಂಸತ್ತಿನಲ್ಲಿ ಈ ವಿಧೇಯಕ ಅಂಗೀಕಾರ ಆಗಿರುವುದರಿಂದ ಅದಕ್ಕೆ ಸರ್ಕಾರದ ಮಾನ್ಯತೆ ಸಿಕ್ಕಿದೆ. ಈ ದೇಶದಲ್ಲಿ ಉದ್ದ ಗಡ್ಡವನ್ನು ಬೆಳೆಸುವುದರ ಮೇಲೆಯೂ ಅಘೋಷಿತ ನಿಷೇಧವಿದೆ. 2007 ರಲ್ಲಿ, ಅಲ್ಲಿನ ಶಿಕ್ಷಣ ಸಚಿವಾಲಯವು ವಿದ್ಯಾರ್ಥಿಗಳಿಗೆ ಇಸ್ಲಾಮಿಕ್ ಉಡುಗೆ ಮತ್ತು ಪಾಶ್ಚಿಮಾತ್ಯ ಶೈಲಿಯ ಮಿನಿ ಸ್ಕರ್ಟ್ ಈ ಎರಡರ ಮೇಲೆ ನಿಷೇಧ ಹಾಕಿತ್ತು, ಆ ನಂತರ ಎಲ್ಲಾ ಸಾರ್ವಜನಿಕ ಸಂಸ್ಥೆಗಳಲ್ಲಿ ಈ ನಿಷೇಧ ಹೇರಲಾಯಿತು.

# ಅಸ್ಸಾಂ ಪ್ರವಾಹ :ಜನ ಜೀವನ ಅಸ್ತವ್ಯಸ್ತ



**ಅಸ್ಸಾಂ:** ಅಸ್ಸಾಂನಲ್ಲಿ ಬಹುದಿನಗಳಿಂದ ರಣಭೀಕರ ಮಳೆ ಆಗುತ್ತಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ ಮತ್ತು ಒಟ್ಟಾರೆ ಪರಿಸ್ಥಿತಿ ಭೀಕರಗೊಂಡಿದೆ. ರಾಜ್ಯದಲ್ಲಿ ಹಲವು ದಿನಗಳಿಂದ ಮಳೆಯಾಗುತ್ತಿದ್ದು, ಕೆಲವು ಭಾಗಗಳಲ್ಲಿ ಮಳೆ ಕಡಿಮೆಯಾಗಿ ಸುಧಾರಣೆ ಕಂಡು ಬಂದಿದ್ದರೆ ಇನ್ನೂ ಕೆಲವು ಭಾಗಗಳಲ್ಲಿ ಮಳೆ ಹಾಗೆಯೇ ಮುಂದುವರೆದಿದೆ. ಅಸ್ಸಾಂನಲ್ಲಿ ಒಟ್ಟಾರೆ ಪರಿಸ್ಥಿತಿ ಬೀಕರ ಗೊಂಡಿದ್ದು, 3.90 ಲಕ್ಷಕ್ಕೂ ಹೆಚ್ಚು ಜನರು ಪ್ರವಾಸದಲ್ಲಿ ಸಿಲುಕಿಕೊಂಡಿದ್ದಾರೆ ಎಂದು ಅಧಿಕಾರಿಗಳು ಶನಿವಾರ ತಿಳಿಸಿದ್ದಾರೆ ಮತ್ತು 19 ಜಿಲ್ಲೆಗಳಲ್ಲಿ ಜನರ ಪರಿಸ್ಥಿತಿ ಗಂಭೀರಗೊಂಡಿದೆ.

ಈ ಮಳೆಯಲ್ಲಿ ಪ್ರವಾಹ ಭೂಕುಸಿತ ಮತ್ತು ಚಂಡಮಾರುತದಲ್ಲಿ ಒಟ್ಟು 37 ಜನ ಸಾವನಪ್ಪಿದ್ದಾರೆ ಮತ್ತು ಒಬ್ಬ ವ್ಯಕ್ತಿ ಕಾಣೆಯಾಗಿದ್ದಾರೆ ಎಂದು ಅಧಿಕಾರಿ ಮಾಹಿತಿ ನೀಡಿದ್ದಾರೆ. ಶುಕ್ರವಾರ ಸಂಜೆಯ ವೇಳೆಗೆ ಕಮ್ರೂಪ್, ತಮುಲ್ಪುರ್, ಹೈಲಕಂಡಿ, ಉದಲ್ಗುರಿ, ಹೊಜೈ, ಧುಬ್ರಿ, ಬಾರ್ಪೇಟಾ, ಬಿಸ್ವಾನಾಥ್, ನಲ್ಬಾರಿ, ಬೊಂಗೈಗಾಂವ್, ಬಕ್ಸಾ, ಕರೀಂಗಂಜ್, ದಕ್ಷಿಣ ಸಲ್ಮಾರಾ, ಗೋಲ್ಪಾರಾ, ದರ್‍ರಾಂಗ್, ಬಜಾಲಿ, ನಾಗಾನ್, ಕಚಾರ್ ಮತ್ತು ಕಮ್ರೂಪ್ ಜಿಲ್ಲೆಗಳಲ್ಲಿ ಒಟ್ಟು 3,90,491 ಮಂದಿ ಪ್ರವಾಹಕ್ಕೆ ಸಿಲುಕಿ ತೊಂದರೆಗೆ ಒಳಗಾಗಿದ್ದಾರೆ. ಕರೀಂಗಂಜ್ ಅತಿ ಹೆಚ್ಚು ಹಾನಿಗೊಳಗಾದ ಜಿಲ್ಲೆಯಾಗಿದ್ದು, 2.40 ಲಕ್ಷಕ್ಕೂ ಹೆಚ್ಚು ಜನರಿಗೆ ಜಲ ದಿಗ್ಬಂಧನಕ್ಕೆ ಒಳಗಾಗಿದ್ದಾರೆ.

# ಚಲಿಸುತ್ತಿದ್ದ ಶಾಲಾ ವಾಹನದಿಂದ ಆಸ್ಮಿಕವಾಗಿ ರಸ್ತೆಗೆ ಬಿದ್ದ ಮಕ್ಕಳು

**ವಡೋದರಾ:** ಚಲಿಸುತ್ತಿದ್ದ ವ್ಯಾನ್ ನಿಂದ ಇಬ್ಬರು ಶಾಲಾ ಬಾಲಕಿಯರು ಬಿದ್ದ ಘಟನೆ ಗುಜರಾತ್ ನ ವಡೋದರಾದಲ್ಲಿ ನಡೆದಿದೆ. ಮಂಜಲ್ಪುರದ ತುಳಸಿ ಶ್ಯಾಮ್ ಸೊಸೈಟಿಯಲ್ಲಿ ಜೂನ್ 19 ರಂದು ಈ ಘಟನೆ ನಡೆದಿದೆ ಎಂದು ವರದಿಯಾಗಿದೆ. ಅದೃಷ್ಟವಶಾತ್, ವೇಗವಾಗಿ ಚಲಿಸುತ್ತಿದ್ದ ವ್ಯಾನ್ ಹಿಂದಿನಿಂದ ಬೇರೆ ಯಾವುದೇ ವಾಹನ ಬರುತ್ತಿರದ ಕಾರಣ ದೊಡ್ಡ ಅವಘಡವೊಂದು ತಪ್ಪಿದೆ.

ಇಡೀ ಘಟನೆಯು ಪ್ರದೇಶದ ಸಿಸಿಟಿವಿಯಲ್ಲಿ ಸೆರೆಯಾಗಿದೆ.

ಮಕ್ಕಳು ವ್ಯಾನ್ನಿಂದ ಬಿದ್ದ ತಕ್ಷಣ, ನಿವಾಸಿಗಳು ತಕ್ಷಣ ಪ್ರತಿಕ್ರಿಯಿಸಿದರು ಮತ್ತು ಹುಡುಗಿಯರಿಗೆ ಸಹಾಯ ಮಾಡಲು ಧಾವಿಸಿದ್ದಾರೆ.

ವ್ಯಾನ್ ಚಾಲಕನ ಬಂಧನ: ಇದು ವ್ಯಾನ್ ಚಾಲಕನ ನಿರ್ಲಕ್ಷ್ಯವನ್ನು ಕಾಣಬಹುದಾಗಿದ್ದು, ಆತ ವ್ಯಾನಿನ ಹಿಂಬಾಗಿಲು ಸರಿಯಾಗಿ ಮುಚ್ಚಲ್ಪಟ್ಟಿದೆಯೇ ಅಥವಾ ಇಲ್ಲವೇ ಎಂಬುದರ ಬಗ್ಗೆ ಗಮನ ಹರಿಸದೆ ಗಾಡಿ ನಡೆಸುತ್ತಿದ್ದ ಎನ್ನಲಾಗಿದೆ. ಇನ್ನೂ ಆಘಾತಕಾರಿ ಸಂಗತಿಯೆಂದರೆ, ಆತ ಚಾಲನೆ ಮಾಡುವಾಗ ಇಬ್ಬರು ಹುಡುಗಿಯರು ಕಾರಿನ ಹಿಂಭಾಗದಿಂದ ಬಿದ್ದಿದ್ದಾರೆ ಎನ್ನುವುದನ್ನು ಮರೆತು ಮುಂದೆ ಹೋಗಿದ್ದಾನೆ ಎನ್ನಲಾಗಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054





ರಕ್ಷಿತ್ ಶೆಟ್ಟಿ ನಿರ್ಮಾಣದ 'ಇಬ್ಬನಿ ತಬ್ಬಿದ ಇಳೆಯಲಿ'

# ರೊಮ್ಯಾಂಟಿಕ್ ಸಾಂಗ್ ಔಟ್

ಸಿಂಪಲ್ ಸ್ಟಾರ್ ರಕ್ಷಿತ್ ಶೆಟ್ಟಿ ನಟನೆಯ 'ಇಬ್ಬನಿ ತಬ್ಬಿದ ಇಳೆಯಲಿ' ಸಿನಿಮಾದ ರೊಮ್ಯಾಂಟಿಕ್ ಸಾಂಗ್‌ವೊಂದು ಇದೀಗ ಬಿಡುಗಡೆಯಾಗಿದೆ. ನಟಿ ಅಂಕಿತಾ ಅಮರ್ ಜೊತೆ ವಿಹಾನ್ ಡ್ಯುಯೇಟ್ ಹಾಡಿದ್ದು, ಓ ಅನಾಹಿತ ಹಾಡಿಗೆ ಉತ್ತಮ ರೆಸ್ಪಾನ್ಸ್ ಸಿಕ್ಕಿದೆ. ರಕ್ಷಿತ್ ಶೆಟ್ಟಿ ಹೊಸ ಪ್ರೇಮಕಥೆಯನ್ನು ನಿರ್ಮಾಣದ ಮೂಲಕ ತೋರಿಸಲು ಹೊರಟಿದ್ದಾರೆ. ವಿಹಾನ್ ಮತ್ತು ಅಂಕಿತಾ ಈ ಸುಂದರ ಜೋಡಿ ರೊಮ್ಯಾಂಟಿಕ್ ಹಾಡಿಗೆ ಹೆಜ್ಜೆ ಹಾಕಿದ್ದಾರೆ. 'ಓ ಅನಾಹಿತ' ಎಂಬ ಹಾಡು ಕಲರ್‌ಫುಲ್ ಆಗಿ ಮೂಡಿ ಬಂದಿದೆ. ಹಾಡಿನ ಲಿರಿಕ್ಸ್ ಮ್ಯೂಸಿಕ್ ಪ್ರಿಯರಿಗೆ ನಾಟುವಂತಿದೆ. ಚಂದ್ರಜಿತ್ ಬೆಳ್ಳಿಯಪ್ಪ ನಿರ್ದೇಶನದ ಈ ಚಿತ್ರದಲ್ಲಿ ವಿಹಾನ್, ಅಂಕಿತಾ ಅಮರ್, ಗಿರಿಜಾ ಶೆಟ್ಟರ್, ಮಯೂರಿ ನಟರಾಜ್ ಸೇರಿದಂತೆ ಅನೇಕರು ನಟಿಸಿದ್ದಾರೆ. ಅಂದಹಾಗೆ, ಈ ಸುಂದರ ಪ್ರೇಮಕಥೆಯ ಮೂಲಕ ವಿಹಾನ್ ಮತ್ತು ಅಂಕಿತಾ ಜೋಡಿ ಪ್ರೇಕ್ಷಕರಿಗೆ ಪರಿಚಯವಾಗುತ್ತಿದೆ.ಈ ಹೊಸ ಜೋಡಿ ನೋಡುಗರಿಗೆ ಮೋಡಿ ಮಾಡುತ್ತಾ ಎಂದು ಕಾಯಬೇಕಿದೆ.

# ಮತ್ತೆ ರಾಕಿ ಭಾಯ್ ಅಬ್ಬರ- 'ಕೆಜಿಎಫ್ ಚಾಪ್ಟರ್ 1' ಮರು ಬಿಡುಗಡೆ

ನ್ಯಾಷನಲ್ ಸ್ಟಾರ್ ಯಶ್ ನಟಿಸಿ, ಪ್ರಶಾಂತ್ ನೀಲ್ ನಿರ್ದೇಶಿಸಿದ 'ಕೆಜಿಎಫ್ 1' ಚಿತ್ರ ರೀ ರಿಲೀಸ್ ಆಗಿದೆ. ಮತ್ತೊಮ್ಮೆ ರಾಕಿ ಭಾಯ್ ಆಗಿ ಯಶ್ ಅಬ್ಬರಿಸುತ್ತಿದ್ದಾರೆ. ಆದರೆ ಕರ್ನಾಟಕದಲ್ಲಿ ಅಲ್ಲ, ಬದಲಿದೆ ತೆಲುಗು ರಾಜ್ಯಗಳಲ್ಲಿ ಸಿನಿಮಾ ತೆರೆ ಕಂಡಿದೆ. ಜೂನ್ 21ರಂದು ಯಶ್ ನಟನೆಯ ಬ್ಲಾಕ್ ಬಸ್ಟರ್ ಕೆಜಿಎಫ್ 1 ಸಿನಿಮಾ ಮಗದೊಮ್ಮೆ ರಿಲೀಸ್ ಆಗಿ ಮೆಚ್ಚುಗೆ ಪಡೆಯುತ್ತಿದೆ. ಹೈದರಾಬಾದ್‌ನ ಸುದರ್ಶನ್ ಚಿತ್ರಮಂದಿರದಲ್ಲಿ 'ಕೆಜಿಎಫ್ 1' ತೆಲುಗು ವರ್ಷನ್ ಎರಡು ಶೋಗಳನ್ನು ಪ್ರದರ್ಶಿಸಲಾಗುತ್ತಿದೆ. ಇನ್ನೂ ಬೇರೆ ನಗರಗಳಲ್ಲಿಯೂ ಸಿನಿಮಾ ರಿಲೀಸ್ ಆಗಿದೆ.

'ಕೆಜಿಎಫ್' ರೀ ರಿಲೀಸ್‌ಗೂ ತೆಲುಗು ಪ್ರೇಕ್ಷಕರಿಂದ ಉತ್ತಮ ರೆಸ್ಪಾನ್ಸ್ ಸಿಕ್ಕಿದೆ.ತಮ್ಮದೇ ನೆಲದ ಸ್ಟಾರ್ ನಟನ ಸಿನಿಮಾ ಎಂಬಂತೆಯೇ ಮತ್ತೊಮ್ಮೆ ಅದ್ದೂರಿಯಾಗಿ ಸ್ವಾಗತಿಸಿದ್ದಾರೆ.ಚಿತ್ರ ಉತ್ತಮ ಗಳಿಕೆ ಕಾಣ್ತಿದೆ. 2018ರಲ್ಲಿ ತೆರೆಕಂಡ 'ಕೆಜಿಎಫ್' ಸಿನಿಮಾದಲ್ಲಿ ಯಶ್‌ಗೆ ನಾಯಕಿಯಾಗಿ ಶ್ರೀನಿಧಿ ಶೆಟ್ಟಿ ನಟಿಸಿದ್ದರು.ಯಶ್ ತಾಯಿಯ ಪಾತ್ರದಲ್ಲಿ ಅರ್ಚನಾ ಜೀವತುಂಬಿದ್ದರು.ಈ ಚಿತ್ರವನ್ನು ಹೊಂಬಾಳೆ ಸಂಸ್ಥೆ ನಿರ್ಮಾಣ ಮಾಡಿತ್ತು.



# ಶಿವರಾಜ್‌ಕುಮಾರ್‌ಗೆ ತೆಲುಗು ನಿರ್ದೇಶಕ ಆ್ಯಕ್ಷನ್ ಕಟ್



ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ ಸಾಲು ಸಾಲು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ.ಈ ಚಿತ್ರಗಳ ಪೈಕಿ ನಿರೀಕ್ಷೆ ಹೆಚ್ಚಿಸಿರುವುದು ಈ ಸಿನಿಮಾ.ಈ ಚಿತ್ರದ ಕುರಿತ ಹೊಸ ಅಪ್‌ಡೇಟ್ ಸಿಕ್ಕಿದೆ.ಇಂದು ಶಿವಣ್ಣನ ಮಡದಿ ಗೀತಾ ಶಿವರಾಜ್‌ಕುಮಾರ್ ಹುಟ್ಟುಹಬ್ಬದ ವಿಶೇಷವಾಗಿ ಚಿತ್ರತಂಡ ಹೊಸ ಪೋಸ್ಟರ್ ಬಿಡುಗಡೆ ಮಾಡಿ ಶುಭ ಕೋರಿದೆ. ಶಿವರಾಜ್‌ಕುಮಾರ್‌ಗೆ ಆ್ಯಕ್ಷನ್ ಕಟ್ ಹೇಳ್ತಿರುವುದು ತೆಲುಗು ನಿರ್ದೇಶಕ ಕಾರ್ತಿಕ್ ಅದ್ವೈತ್.ತಮಿಳಿನಲ್ಲಿ ವಿಕ್ರಂ ಪ್ರಭು ಅಭಿನಯದ ಪಾಯುಮ್ ಒಲಿ ನೀ ಎನಕ್ಕು ಚಿತ್ರ ನಿರ್ದೇಶಿಸಿದ್ದಾರೆ. ಇದೀಗ ಸ್ಯಾಂಡಲ್ವುಡ್ ಅಂಗಳಕ್ಕೆ ಎಂಟ್ರಿ ಕೊಡ್ತಿರುವ ಇವರಿಗೆ ನಿರ್ದೇಶಕನಾಗಿ ಎರಡನೇ ಸಿನಿಮಾ. ಇದೊಂದು ಆ್ಯಕ್ಷನ್ ಥ್ರಿಲ್ಲರ್ ಸಿನಿಮಾವಾಗಿದ್ದು, ಶಿವಣ್ಣ ಡಿಫರೆಂಟ್ ಲುಕ್‌ನಲ್ಲಿ ಕಾಣಿಸಿಕೊಳ್ಳಲಿದ್ದಾರೆ.ಸ್ಕ್ರಿಪ್ಟ್ ಕೆಲಸ ಮುಗಿದಿದ್ದು, ಸದ್ಯ ಮ್ಯೂಸಿಕ್ ವರ್ಕ್ ಭರದಿಂದ ಸಾಗುತ್ತಿದೆ.ಆಗಸ್ಟ್ ತಿಂಗಳಲ್ಲಿ ಮುಹೂರ್ತ ನಡೆಯಲಿದೆ.ಸದ್ಯಕ್ಕೆ ಬೇರೆ ಕಲಾವಿದರ ಆಯ್ಕೆ ಪ್ರಕ್ರಿಯೆ ಮುಗಿದಿದ್ದು, ಚಿತ್ರೀಕರಣಕ್ಕೆ ತೆರಳಲು ಸಜ್ಜಾಗಿದೆ ಚಿತ್ರತಂಡ. ಸ್ಯಾಮ್ ಸಿ.ಎಸ್ ಸಂಗೀತ, ಎಜೆ ಶೆಟ್ಟಿ ಛಾಯಾಗ್ರಹಣ, ದೀಪು ಕುಮಾರ್ ಸಂಕಲನ, ರವಿ ಸಂತೆಹಕ್ಲು ಕಲಾ ನಿರ್ದೇಶನ ಚಿತ್ರಕ್ಕಿದೆ.

ಟಿ20 ವಿಶ್ವಕಪ್‌ನ ಸೂಪರ್–8 ಪಂದ್ಯ

# ಬಾಂಗ್ಲಾ ವಿರುದ್ಧ ಭಾರತಕ್ಕೆ ಜಯ

ಇಲ್ಲಿನ ಸರ್ ವಿವಿಯನ್ ರಿಚರ್ಡ್ಸ್ ಸ್ಟೇಡಿಯಂನಲ್ಲಿ ಭಾರತ ಹಾಗೂ ಬಾಂಗ್ಲಾದೇಶ ತಂಡಗಳ ನಡುವೆ ನಡೆದ 2024ರ ಟಿ20 ವಿಶ್ವಕಪ್‌ನ ಸೂಪರ್–8 ಪಂದ್ಯದಲ್ಲಿ ಭಾರತ 196 ರನ್ ಗಳಿಸುವ ಮೂಲಕ ಭರ್ಜರಿ ಜಯ ಗಳಿಸಿದೆ.

ಟಾಸ್ ಗೆದ್ದ ಬಾಂಗ್ಲಾದೇಶ ಬೌಲಿಂಗ್ ಆಯ್ದುಕೊಂಡಿತು. ಮೊದಲಿಗೆ ಬ್ಯಾಟ್ ಬೀಸಿದ ಭಾರತ ಒಟ್ಟು 20 ಓವರ್‌ಗಳಲ್ಲಿ 196 ರನ್ ಗಳಿಸಿ ಬಾಂಗ್ಲಾದೇಶಕ್ಕೆ 197 ರನ್‌ಗಳ ಗುರಿ ನೀಡಿತು. 197 ರನ್‌ಗಳ ಬೆನ್ನಟ್ಟಿದ ಬಾಂಗ್ಲಾ 20 ಓವರ್‌ಗಳಲ್ಲಿ 146 ರನ್‌ಗಳಿಸಿ ಸೋಲನ್ನು ಅನುಭವಿಸಿತು.

ಭಾರತ ತಂಡದಿಂದ ಓಪನಿಂಗ್ ಬ್ಯಾಟ್ಸ್ಮನ್‌ಗಳಾಗಿ ನಾಯಕ ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿ ಬ್ಯಾಟ್ ಬೀಸಿದರು. 11 ಎಸೆತಗಳಿಗೆ 23 ರನ್ ಸಿಡಿಸಿ ರೋಹಿತ್ ಶರ್ಮಾ ಔಟಾಗುವ ಮೂಲಕ ಟೀಂ ಇಂಡಿಯಾದ ಮೊದಲ ವಿಕೆಟ್ ಪತನಗೊಂಡಿತು. 11 ಬಾಲ್‌ಗಳಲ್ಲಿ ರೋಹಿತ್ ಶರ್ಮಾ 3 ಫೋರ್ ಹಾಗೂ 1 ಸಿಕ್ಸ್ ಸಿಡಿಸಿ ಒಟ್ಟು 23 ಅಂಕಗಳನ್ನು ತಂಡಕ್ಕೆ ಗಳಿಸಿಕೊಟ್ಟರು. ವಿರಾಟ್ ಕೊಹ್ಲಿ 28 ಬಾಲ್‌ಗಳಿಗೆ ಒಟ್ಟು 37 ರನ್ ಸಿಡಿಸಿ 2ನೇ ವಿಕೆಟ್ ಬಿಟ್ಟುಕೊಟ್ಟರು.

ಬಳಿಕ ಕ್ರೀಸ್‌ಗೆ ಬಂದ ಸೂರ್ಯಕುಮಾರ್ ಯಾದವ್ ಮೊದಲ ಎಸೆತಕ್ಕೆ ಸಿಕ್ಸ್ ಬಾರಿಸಿ ಎರಡನೇ ಬಾಲ್ ಅನ್ನು ವಿಕೆಟ್ ಕೀಪರ್ ಕೈಗೆ ಕ್ಯಾಚ್ ನೀಡುವ



ಮೂಲಕ ಒಟ್ಟು 6 ರನ್ ಗಳಿಸಿ ಪೆವಿಲಿಯನ್‌ಗೆ ಮರಳಿದರು. ರಿಷಭ್ ಪಂತ್ 4 ಫೋರ್ ಹಾಗೂ 2 ಸಿಕ್ಸ್ ಸಿಡಿಸಿ 24 ಬಾಲ್‌ಗಳಿಗೆ ಒಟ್ಟು 36 ರನ್ ಗಳಿಸಿ ವಿಕೆಟ್ ಒಪ್ಪಿಸಿದರು.

ನಂತರ ಕ್ರೀಸ್‌ಗೆ ಮರಳಿದ ಶಿವಂ ದುಬೆ 24 ಎಸೆತಗಳಿಗೆ 34 ರನ್ ಸಿಡಿಸಿ ಔಟಾದರು. ಶಿವಂ ದುಬೆ ಹಾಗೂ ಹಾರ್ದಿಕ್ ಪಾಂಡ್ಯ ಜೊತೆಯಾಟವಾಡಿ ತಂಡಕ್ಕೆ 54 ರನ್ ಗಳಿಸಿಕೊಟ್ಟರು. ಅಕ್ಷರ್ ಪಟೇಲ್ 5 ಎಸೆತಗಳಿಗೆ 3 ರನ್ ಗಳಿಸಿ ಔಟಾಗದೇ ಆಟವನ್ನು ಕೊನೆಗೊಳಿಸಲು ಸಹಕರಿಸಿದರು. ಹಾರ್ದಿಕ್ ಪಾಂಡ್ಯ ಕೊನೆಯ 1 ಬಾಲ್‌ನಲ್ಲಿ ಫೋರ್ ಸಿಡಿಸಿ 27 ಎಸೆತಗಳಿಗೆ ಅರ್ಧಶತಕ ಪೂರ್ಣಗೊಳಿಸಿ ಔಟಾಗದೇ ಆಟವನ್ನು ಕೊನೆಗೊಳಿಸಿ ಬಾಂಗ್ಲಾದೇಶಕ್ಕೆ 197 ರನ್‌ಗಳ ಗುರಿ ನೀಡಿದರು. 197 ರನ್‌ಗಳ ಬೆನ್ನಟ್ಟಿದ ಬಾಂಗ್ಲದೇಶ 20 ಓವರ್‌ಗಳಲ್ಲಿ 146 ರನ್ ಗಳಿಸಿ ಸೋಲನ್ನಪ್ಪಿತು. ಓಪನಿಂಗ್ ಬ್ಯಾಟ್ಸ್ಮನ್‌ಗಳಾಗಿ ಲಿಟನ್ ದಾಸ್ ಹಾಗೂ ತಂಜೀದ್ ಹಸನ್ ಬ್ಯಾಟ್ ಬೀಸಿದರು. 10 ಎಸೆತಗಳಿಗೆ 13 ರನ್ ಗಳಿಸಿ ಲಿಟನ್ ದಾಸ್ ಔಟಾದರು. 4.3 ಓವರ್‌ಗಳಿಗೆ ಬಾಂಗ್ಲಾ ಮೊದಲ ವಿಕೆಟ್ ಕಳೆದುಕೊಂಡಿತು. ಲಿಟನ್ ದಾಸ್ ಅವರನ್ನು ಔಟ್ ಮಾಡುವ ಮೂಲಕ ಹಾರ್ದಿಕ್ ಪಾಂಡ್ಯ ಭಾರತಕ್ಕೆ ಮೊದಲ ಯಶಸ್ಸನ್ನು ನೀಡಿದರು. ತಂಜೀದ್ ಹಸನ್ 31 ಎಸೆತಗಳಿಗೆ 29 ರನ್ ಗಳಿಸಿ ಪೆವಿಲಿಯನ್‌ಗೆ ಮರಳಿದರು. ತೌಹಿದ್ ಹೃದೋಯ್ 6 ಬಾಲ್‌ಗಳಿಗೆ 4 ರನ್ ಸಿಡಿಸಿ ವಿಕೆಟ್ ಬಿಟ್ಟುಕೊಟ್ಟರು. ಇವರ ಬಳಿಕ ಶಕೀಬ್ ಅಲ್ ಹಸನ್ 7 ಎಸೆತಗಳಿಗೆ 11 ರನ್ ಗಳಿಸಿ ಔಟಾದರು. ಬೂಮ್ರಾ ಮಾರಕ ಬೌಲಿಂಗ್‌ಗೆ ಬಾಂಗ್ಲಾ ತಂಡದ ನಾಯಕ ನಜ್ಮುಲ್ ಹೊಸೈನ್ ಶಾಂಟೋ 32 ಎಸೆತಗಳಲ್ಲಿ 40 ರನ್‌ಗಳಿಸಿ ವಿಕೆಟ್ ಒಪ್ಪಿಸಿದರು. ಜಾಕಿರ್ ಅಲಿ 4 ಎಸೆತಗಳಿಗೆ ಕೇವಲ 1 ರನ್, ರಶೀದ್ ಹೊಸೈನ್ 24 ರನ್, ಮಹಮ್ಮದುಲ್ಲಾ 15 ಬಾಲ್‌ಗಳಿಗೆ 13 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಕೊನೆಯಲ್ಲಿ ಔಟಾಗದೆ ಮೆಹದಿ ಹಸನ್ 5 ರನ್ ಹಾಗೂ ತಂಜೀಮ್ ಹಸನ್ ಶಕೀಬ್ 1 ರನ್‌ಗಳಿಸಿ ಆಟವನ್ನು ಪೂರ್ಣಗೊಳಿಸಿದರು.

# ಆಸ್ಟ್ರೇಲಿಯಾ ತಂಡವನ್ನು ಮಕಾಡೆ ಮಲಗಿಸಿದ ಅಫ್ಘಾನಿಸ್ತಾನ್



ಟಿ20 ವಿಶ್ವಕಪ್‌ನ 48ನೇ ಪಂದ್ಯದಲ್ಲಿ ಬಲಿಷ್ಠ ಆಸ್ಟ್ರೇಲಿಯಾ ವಿರುದ್ಧ ಅಫ್ಘಾನಿಸ್ತಾನ್ ತಂಡ ಭರ್ಜರಿ ಜಯ ಸಾಧಿಸಿದೆ. ರಣರೋಚಕ ಹೋರಾಟಕ್ಕೆ ಸಾಕ್ಷಿಯಾಗಿದ್ದ ಈ ಪಂದ್ಯದಲ್ಲಿ 21 ರನ್‌ಗಳ ಗೆಲುವು ದಾಖಲಿಸುವಲ್ಲಿ ಅಫ್ಘಾನ್ ಪಡೆ ಯಶಸ್ವಿಯಾಗಿದೆ. ಕಿಂಗ್‌ಸ್ಟೌನ್‌ನ ಅರ್ನೋಸ್ ವೇಲ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದ ಆಸ್ಟ್ರೇಲಿಯಾ ತಂಡದ ನಾಯಕ ಮಿಚೆಲ್ ಮಾರ್ಷ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಇನಿಂಗ್ಸ್ ಆರಂಭಿಸಿದ ಅಫ್ಘಾನಿಸ್ತಾನ್ ತಂಡಕ್ಕೆ ರಹಮಾನುಲ್ಲಾ ಗುರ್ಬಾಝ್ ಹಾಗೂ ಇಬ್ರಾಹಿಂ ಝದ್ರಾನ್ ಭರ್ಜರಿ ಆರಂಭ ಒದಗಿಸಿದ್ದರು. ಮೊದಲ ವಿಕೆಟ್‌ಗೆ 118 ರನ್ ಪೇರಿಸಿದ ಈ ಜೋಡಿ ಅಫ್ಘಾನ್ ತಂಡಕ್ಕೆ ಭದ್ರ ಅಡಿಪಾಯ ಹಾಕಿಕೊಟ್ಟಿದ್ದರು. ಇದರ ನಡುವೆ 49 ಎಸೆತಗಳಲ್ಲಿ 60 ರನ್ ಬಾರಿಸಿ ರಹಮಾನುಲ್ಲಾ ಗುರ್ಬಾಝ್ ಔಟಾದರೆ, ಇದರ ಬೆನ್ನಲ್ಲೇ 51 ರನ್ ಬಾರಿಸಿದ್ದ ಇಬ್ರಾಹಿಂ ಝದ್ರಾನ್ ಕೂಡ ವಿಕೆಟ್ ಒಪ್ಪಿಸಿದರು.

ಆರಂಭಿಕರಿಬ್ಬರ ಪತನದೊಂದಿಗೆ ಪಂದ್ಯದ ಮೇಲೆ ಹಿಡಿತ ಸಾಧಿಸಿದ ಆಸ್ಟ್ರೇಲಿಯಾ ಬೌಲರ್‌ಗಳು ಅಫ್ಘಾನಿಸ್ತಾನ್ ತಂಡದ ರನ್ ಗತಿಯನ್ನು ನಿಯಂತ್ರಿಸಿದರು. ಇದರ ನಡುವೆ ಒತ್ತಡಕ್ಕೆ ಒಳಗಾದ ಅಫ್ಘಾನಿಸ್ತಾನ್ ಬ್ಯಾಟರ್‌ಗಳು ಪೆವಿಲಿಯನ್ ಪರೇಡ್ ನಡೆಸಿದರು. ಪರಿಣಾಮ 20 ಓವರ್‌ಗಳಲ್ಲಿ 6 ವಿಕೆಟ್ ಕಳೆದುಕೊಂಡು ಅಫ್ಘಾನಿಸ್ತಾನ್ 148 ರನ್ ಕಲೆಹಾಕಿತು.

ಅಫ್ಘಾನಿಸ್ತಾನ್ ಭರ್ಜರಿ ಬೌಲಿಂಗ್: 149 ರನ್‌ಗಳ ಸುಲಭ ಗುರಿ ಬೆನ್ನತ್ತಿದ ಆಸ್ಟ್ರೇಲಿಯಾ ತಂಡಕ್ಕೆ ನವೀನ್ ಉಲ್ ಹಕ್ ಮೊದಲ ಓವರ್‌ನಲ್ಲೇ ಆಘಾತ ನೀಡಿದ್ದರು. ಟ್ರಾವಿಸ್ ಹೆಡ್ (0) ರನ್ನು ಕ್ಲೀನ್ ಬೌಲ್ಡ್ ಮಾಡುವ ಮೂಲಕ ನವೀನ್ ಮೊದಲ ಯಶಸ್ಸು ತಂದುಕೊಟ್ಟರು. ಇದರ ಬೆನ್ನಲ್ಲೇ ಮಿಚೆಲ್ ಮಾರ್ಷ್ (12) ಕೂಡ ವಿಕೆಟ್ ಒಪ್ಪಿಸಿದರು. ಇನ್ನು ಡೇಂಜರಸ್ ಡೇವಿಡ್ ವಾರ್ನರ್ (3) ವಿಕೆಟ್ ಪಡೆಯುವಲ್ಲಿ ಮೊಹಮ್ಮದ್ ನಬಿ ಯಶಸ್ವಿಯಾದರು.

ಈ ಹಂತದಲ್ಲಿ ಕಣಕ್ಕಿಳಿದ ಗ್ಲೆನ್ ಮ್ಯಾಕ್ಸ್‌ವೆಲ್ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದರು. ಅಫ್ಘಾನ್ ಬೌಲರ್‌ಗಳನ್ನು ಮನಸ್ಸೋ ಇಚ್ಛೆ ದಂಡಿಸಿದ ಮ್ಯಾಕ್ಸ್‌ವೆಲ್ 41 ಎಸೆತಗಳಲ್ಲಿ 3 ಭರ್ಜರಿ ಸಿಕ್ಸ್ ಹಾಗೂ 6 ಫೋರ್‌ಗಳೊಂದಿಗೆ 59 ರನ್ ಬಾರಿಸಿದರು. ಈ ಹಂತದಲ್ಲಿ ನೂರ್ ಅಹ್ಮದ್ ಹಿಡಿದ ಅದ್ಭುತ ಕ್ಯಾಚ್‌ನಿಂದಾಗಿ ಮ್ಯಾಕ್ಸ್‌ವೆಲ್ ಹೊರ ನಡೆಯಬೇಕಾಯಿತು. ಇನ್ನು ಮಾರ್ಕಸ್ ಸ್ಟೋಯಿನಿಸ್ (11), ಟಿಮ್ ಡೇವಿಡ್ (2) ಮತ್ತು ಮ್ಯಾಥ್ಯೂ ವೇಡ್ (5) ಬಂದ ವೇಗದಲ್ಲೇ ಪೆವಿಲಿಯನ್‌ಗೆ ಹಿಂತಿರುಗಿದರು. ಈ ಮೂಲಕ ಅಫ್ಘಾನಿಸ್ತಾನ್ ಬೌಲರ್‌ಗಳು ಪಂದ್ಯದ ಮೇಲೆ ಹಿಡಿತ ಸಾಧಿಸಿದರು. ಅತ್ತ ಒತ್ತಡಕ್ಕೆ ಸಿಲುಕಿದ ಪ್ಯಾಟ್ ಕಮಿನ್ಸ್ (3) ಕ್ಲೀನ್ ಬೌಲ್ಡ್ ಆಗಿ ಹೊರ ನಡೆದರು.

ಪರಿಣಾಮ ಕೊನೆಯ 2 ಓವರ್‌ಗಳಲ್ಲಿ ಆಸ್ಟ್ರೇಲಿಯಾ ತಂಡಕ್ಕೆ 33 ರನ್‌ಗಳ ಅವಶ್ಯಕತೆಯಿತ್ತು. ಈ ಹಂತದಲ್ಲಿ ಆಡಂ ಝಂಪಾ ಫೋರ್ ಬಾರಿಸಿ ತಂಡಕ್ಕೆ ಗೆಲುವಿನ ಆಸೆ ಚಿಗುರಿಸಿದ್ದರು. ಅದರಂತೆ ಕೊನೆಯ ಓವರ್‌ನಲ್ಲಿ ಆಸ್ಟ್ರೇಲಿಯಾ ತಂಡಕ್ಕೆ 24 ರನ್ ಬೇಕಿದ್ದರೆ, ಅಫ್ಘಾನಿಸ್ತಾನ್ ತಂಡಕ್ಕೆ 1 ವಿಕೆಟ್‌ನ ಅವಶ್ಯಕತೆಯಿತ್ತು.

ಅಂತಿಮ ಓವರ್‌ನ 2ನೇ ಎಸೆತದಲ್ಲಿ ಆಡಂ ಝಂಪಾ ಬೌಂಡರಿ ಲೈನ್‌ನಲ್ಲಿ ಕ್ಯಾಚ್ ನೀಡುವ ಮೂಲಕ ಆಸ್ಟ್ರೇಲಿಯಾ ತಂಡ 19.2 ಓವರ್‌ಗಳಲ್ಲಿ 127 ರನ್‌ಗಳಿಗೆ ಆಲೌಟ್ ಆಯಿತು. ಈ ಮೂಲಕ ಅಫ್ಘಾನಿಸ್ತಾನ್ ತಂಡ 21 ರನ್‌ಗಳ ಐತಿಹಾಸಿಕ ಗೆಲುವು ದಾಖಲಿಸುವಲ್ಲಿ ಯಶಸ್ವಿಯಾಗಿದೆ.

ಅಫ್ಘಾನಿಸ್ತಾನ್ ಪರ 4 ಓವರ್‌ಗಳಲ್ಲಿ 20 ರನ್ ನೀಡಿ ಗುಲ್ಬದ್ದಿನ್ ನೈಬ್ 4 ವಿಕೆಟ್ ಪಡೆದು ಮಿಂಚಿದರೆ, ನವೀನ್ ಉಲ್ ಹಕ್ 4 ಓವರ್‌ಗಳಲ್ಲಿ 20 ರನ್ ನೀಡಿ 3 ವಿಕೆಟ್ ಕಬಳಿಸಿದರು. ಈ ಮೂಲಕ ಆಸ್ಟ್ರೇಲಿಯಾ ವಿರುದ್ಧ ಅಫ್ಘಾನಿಸ್ತಾನ್ ತಂಡ ಚೊಚ್ಚಲ ಗೆಲುವು ದಾಖಲಿಸುವಲ್ಲಿ ಪ್ರಮುಖ ಪಾತ್ರವಹಿಸಿದರು.

ಸೂರಜ್ ರೇವಣ್ಣ ಪ್ರಕರಣದ ಬಗ್ಗೆ ನನ್ನ ಬಳಿ ಕೇಳ್ಬೇಡಿ

# ಕೇಂದ್ರ ಸಚಿವ ಎಚ್‌ಡಿಕೆ ಗರಂ!



**ಚಿಕ್ಕಬಳ್ಳಾಪುರ:** ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ವಿರುದ್ಧ ಅಸಹಜ ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಮೊದಲ ಪ್ರತಿಕ್ರಿಯೆ ನೀಡಿದ್ದಾರೆ.

ಬೆಂಗಳೂರಿನ ಕೆಂಪೇಗೌಡ ಏರ್‌ಪೋರ್ಟ್‌ನಲ್ಲಿ ಮಾತನಾಡುತ್ತಾ, ಮಾಧ್ಯಮಗಳ ಪ್ರಶ್ನೆಗೆ ಗರಂ ಆಗಿದ್ದಾರೆ.ದಯವಿಟ್ಟು ಇಂತಹ ವಿಷಯಗಳನ್ನ ನನ್ನ ಬಳಿ ಚರ್ಚೆ ಮಾಡಬೇಡಿ, ರಾಜ್ಯದ ಸಮಸ್ಯೆಗಳಿಗೆ ಸಂಬಂಧಪಟ್ಟ ವಿಚಾರಗಳನ್ನು ಮಾತ್ರ ಚರ್ಚೆ ಮಾಡಿ. ಅದರ ಅವಶ್ಯಕತೆ ಏನಿದೆ?ಕಾನೂನು ಇದೆ ಕಾನೂನಿನ ಅಡಿ ಎಲ್ಲವೂ ನಡೆಯಲಿದೆ.ಯಾಕೆ ಪ್ರಕರಣ ಬರ್ತಿದೆ ಅನ್ನೋದು ಮುಂದಿನ ದಿನಗಳಲ್ಲಿ ಗೊತ್ತಾಗಲಿದೆ.ನನ್ನ ಬಳಿ ಆ ತರಹದ ಪ್ರಶ್ನೆಗಳನ್ನ ಕೇಳಬೇಡಿ ಎಂದು ಹೇಳಿದ್ದಾರೆ.

ಏನಿದು ಪ್ರಕರಣ?:ವಿಧಾನ ಪರಿಷತ್ ಸದಸ್ಯ ಡಾ.ಸೂರಜ್ ರೇವಣ್ಣ ವಿರುದ್ಧ ಅಸಹಜ ಲೈಂಗಿಕ ದೌರ್ಜನ್ಯ ಆರೋಪ ಕೇಳಿಬಂದಿತ್ತು. ಈ ಬೆನ್ನಲ್ಲೇ ಆರೋಪ ಮಾಡಿದ ಯುವಕನ ವಿರುದ್ಧ ಹೊಳೆನರಸೀಪುರ ನಗರ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.ಯುವಕ ಸುಳ್ಳು ಆರೋಪ ಮಾಡಿ ಹಣಕ್ಕಾಗಿ ಪೀಡಿಸಿ, ಸೂರಜ್ ರೇವಣ್ಣ ವಿರುದ್ಧ ಲೈಂಗಿಕ ಕಿರುಕುಳ ದೂರು ನೀಡುವುದಾಗಿ ಬೆದರಿಕೆ ಹಾಕಿದ್ದಾನೆ ಎಂದು ಆರೋಪಿಸಿ ಎಂಎಲ್‌ಸಿ ಅವರ ಆಪ್ತ ಶಿವಕುಮಾರ್ ನೀಡಿದ ದೂರು ಆಧರಿಸಿ ಎಫ್‌ಐಆರ್ ದಾಖಲಾಗಿದೆ.

5 ಕೋಟಿ ರೂ. ಹಣ ನೀಡದಿದ್ದರೆ ಲೈಂಗಿಕ ದೌರ್ಜನ್ಯ ಕೇಸ್ ದಾಖಲಿಸುತ್ತೇನೆ ಎಂದು ಯುವಕ ಬೆದರಿಕೆ ಹಾಕಿದ್ದಾನೆ ಎಂದು ಆರೋಪಿಸಲಾಗಿದೆ. ಸುಳ್ಳು ದೂರು ನೀಡಿ ಬೆದರಿಕೆ ಹಾಕಿರುವ ಬಗ್ಗೆ ದೂರಿನಲ್ಲಿ ಉಲ್ಲೇಖಿಸಲಾಗಿದೆ.ಐಪಿಸಿ ಸೆಕ್ಷನ್ 384, 506 ರ ಅಡಿಯಲ್ಲಿ ಕೇಸ್ ದಾಖಲು ಮಾಡಲಾಗಿದೆ.

### ಡಿಕೆಶಿ ಜೊತೆಗೆ ಯಾರಾದ್ರೂ ನಿಲ್ಲಲಿ

**ಇದೇ ವೇಳೆ ಚನ್ನಪಟ್ಟಣದ ಉಪಚುನಾವಣೆಯಲ್ಲಿ ಡಿಕೆಶಿ ಸ್ಪರ್ಧೆ ವಿಚಾರ ಕುರಿತು ಮಾತನಾಡಿದ ಹೆಚ್‌ಡಿಕೆ, ಚನ್ನಪಟ್ಟಣದಲ್ಲಿ ಯಾರು ಬೇಕಾದರೂ ನಿಲ್ಲಲಿ.ಡಿಕೆ ಶಿವಕುಮಾರ್ ಆದ್ರೂ ನಿಲ್ಲಲಿ, ಅಥವಾ ಅವರ ಜೊತೆಗೆ ಇನ್ನೂ 4 ಜನನ್ನ ಕರ್ಕೊಂಡು ಬಂದು ನಿಲ್ಲಿಸಿಕೊಳ್ಳಲಿ. ನಿಲ್ಲಬಾರದು ಅಂತ ಹೇಳಲು ಆಗುತ್ತಾ?ಪ್ರಜಾಪ್ರಭುತ್ವದಲ್ಲಿ ಯಾರು ಬೇಕಾದರೂ ನಿಲ್ಲಬಹುದು.ಅದಕ್ಕೆ ದೊಡ್ಡ ಮಹತ್ವ ಕೊಡೋದು ಬೇಡ.ನಮ್ಮ ಕ್ಯಾಂಡಿಡೇಟ್ ಬಗ್ಗೆ ಕಾಲವೇ ನಿರ್ಧರಿಸಲಿದೆ ಎಂದು ತಿಳಿಸಿದ್ದಾರೆ.**

# ದ್ವಿತೀಯ ಪಿ.ಯು.ಸಿ ಪರೀಕ್ಷೆ : ನಿಷೇಧಾಜ್ಞೆ

**ಚಾಮರಾಜನಗರ,** ದ್ವಿತೀಯ ಪಿ.ಯು.ಸಿ. 3ರ ಪರೀಕ್ಷೆಯು ಜಿಲ್ಲೆಯ ಒಟ್ಟು 4 ಪರೀಕ್ಷಾ ಕೇಂದ್ರಗಳಲ್ಲಿ ಜೂನ್ 24ರಿಂದ ಜುಲೈ 5 ರವರೆಗೆ ನಡೆಯಲಿರುವ ಹಿನ್ನೆಲೆಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಲ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ಸಾರ್ವಜನಿಕ ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶ ಹೊರಡಿಸಿದ್ದಾರೆ. ಪರೀಕ್ಷಾ ಕಾರ್ಯವು ನ್ಯಾಯೋಚಿತವಾಗಿ ನಡೆಯಲೆಂಬ ಸದುದ್ದೇಶದಿಂದ ಹಾಗೂ ಪರೀಕ್ಷಾ ಅಕ್ರಮಗಳನ್ನು ತಡೆಯಲು ಪರೀಕ್ಷಾ ಕೇಂದ್ರಗಳ ಸುತ್ತಲ 200 ಮೀಟರ್ ವ್ಯಾಪ್ತಿಯ ಪ್ರದೇಶದಲ್ಲಿ ಸೆಕ್ಷನ್ 144 ರನ್ವಯ ಬೆಳಿಗ್ಗೆ 6 ರಿಂದ ಸಂಜೆ 4 ಗಂಟೆಯವರೆಗೆ ಸಾರ್ವಜನಿಕ ನಿಷೇಧಿತ ಸ್ಥಳವೆಂದು ಘೋಷಿಸಿ ನಿಷೇಧಾಜ್ಞೆ ವಿಧಿಸಲಾಗಿದೆ. ಅಲ್ಲದೇ ಸದರಿ ದಿನಗಳಂದು ಪರೀಕ್ಷಾ ಕೇಂದ್ರಗಳ ಸುತ್ತಲ 200 ಮೀಟರ್ ವ್ಯಾಪ್ತಿಯಲ್ಲಿ ಬರುವ ಜೆರಾಕ್ಸ್ ಮತ್ತು ಕಂಪ್ಯೂಟರ್ ಅಂಗಡಿಗಳನ್ನು ಬೆಳಿಗ್ಗೆ 6 ರಿಂದ ಸಂಜೆ 4 ಗಂಟೆಯವರೆಗೆ ಮುಚ್ಚಲು ಸಹ ಆದೇಶಿಸಲಾಗಿದೆ. ಚಾಮರಾಜನಗರ ಪಟ್ಟಣದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು, ಯಳಂದೂರು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು, ಗುಂಡ್ಲುಪೇಟೆ ಪಟ್ಟಣದ ದೊಡ್ಡಹುಂಡಿ ಬೋಗಪ್ಪ ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಕೊಳ್ಳೇಗಾಲ ಪಟ್ಟಣದ ಎಂ.ಜಿ.ಎಸ್.ವಿ ಸರ್ಕಾರಿ ಪದವಿ ಪೂರ್ವ ಕಾಲೇಜು ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ನಿಷೇಧಾಜ್ಞೆಯು ದ್ವಿತೀಯ ಪಿ.ಯು.ಸಿ. ಪರೀಕ್ಷಾ (3) ಕೆಲಸಕ್ಕೆ ನಿಯೋಜಿತರಾದ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ಮತ್ತು ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಅನ್ವಯಿಸುವುದಿಲ್ಲ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ಎಂಎಲ್‌ಸಿ ಸೂರಜ್ ರೇವಣ್ಣರ ವಿಚಾರದಲ್ಲೂ ನ್ಯಾಯಯುತ ತನಿಖೆ ಆಗಲಿ: ಆರ್.ಅಶೋಕ್

**ಬೆಂಗಳೂರು:** ಸೂರಜ್ ರೇವಣ್ಣ ವಿರುದ್ಧ ಲೈಂಗಿಕ ದೌರ್ಜನ್ಯ ಆರೋಪ ಕೇಸ್ ವಿಚಾರವಾಗಿ ವಿಪಕ್ಷ ನಾಯಕ ಆರ್ ಅಶೋಕ್ ಪ್ರತಿಕ್ರಿಯಿಸಿದ್ದು, ಈಗಾಗಲೇ ಪ್ರಜ್ವಲ್ ರೇವಣ್ಣನ ವಿಚಾರದಲ್ಲಿ ತನಿಖೆ ನಡೆಯುತ್ತಿದೆ. ಸೂರಜ್ ರೇವಣ್ಣರ ವಿಚಾರದಲ್ಲೂ ನ್ಯಾಯಯುತ ತನಿಖೆ ಆಗಲಿ ಎಂದು ಹೇಳಿದ್ದಾರೆ.



ಈ ಕುರಿತು ಮಾತನಾಡಿದ ಅವರು, ನಾನು ಸಹ ಮಾಧ್ಯಮದಲ್ಲಿ ಸೂರಜ್ ರೇವಣ್ಣ ಬಗ್ಗೆ ನೋಡಿದ್ದೇನೆ. ಸೂರಜ್ ರೇವಣ್ಣ ಸಹ ಆರೋಪ ಮಾಡಿದ್ದಾರೆ.ನನ್ನನ್ನು ಬ್ಲ್ಯಾಕ್ ಮೇಲ್ ಮಾಡುತ್ತಿದ್ದಾರೆ ಎಂದು ಆರೋಪ ಮಾಡಿದ್ದಾರೆ.ಈ ಕೇಸ್‌ನಲ್ಲಿ ಮೇಲ್ನೋಟಕ್ಕೆ ಗೊಂದಲ ಕಾಣಿಸುತ್ತಿದೆ.ಕಾನೂನಿಗಿಂತ ಯಾರೂ ದೊಡ್ಡವರಲ್ಲ ಎಂದರು.

ನಿಷ್ಪಕ್ಷಪಾತವಾದ ತನಿಖೆ ಆಗಲಿ.ತಪ್ಪಿತಸ್ಥರು ಯಾರೇ ಇದ್ದರೂ ಕಾನೂನು ಕ್ರಮ ಆಗೇ ಆಗುತ್ತೆ. ಇದನ್ನು ರಾಜಕೀಯಕ್ಕೆ ಬಳಸಿಕೊಳ್ಳುವುದು ಒಳ್ಳೆಯದಲ್ಲ. ಎರಡೂ ಕಡೆ ದೂರು ದಾಖಲು ಆದ ಹಿನ್ನೆಲೆಯಲ್ಲಿ ಇದು ಜಟಿಲ ಕೇಸ್ ರೀತಿಯಲ್ಲಿ ಕಾಣಿಸುತ್ತಿದೆ. ಮೊದಲೇ ದೂರು ಕೊಟ್ಟಿದು ಸೂರಜ್ ರೇವಣ್ಣ.ಬ್ಲ್ಯಾಕ್‌ಮೇಲ್ ಮಾಡುತ್ತಿದ್ದಾರೆ ಎಂದು ಹೇಳುತ್ತಿದ್ದಾರೆ.ಸೂಕ್ತ ತನಿಖೆ ಆಗಲಿ, ಸತ್ಯಾಸತ್ಯತೆ ಹೊರ ಬರಲಿ.ಇದು ಜೆಡಿಎಸ್ ಆಂತರಿಕ ವಿಚಾರ.ಇದರ ಬಗ್ಗೆ ಅವರ ನಾಯಕರು ಮಾತನಾಡುತ್ತಾರೆ ಎಂದು ಹೇಳಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com